ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 01
09–06–2025 ಸೋಮವಾರ

Rs-3 KA/SK/DVG-006/2023-25 KARKAN/2013/50807 KANNADA BHARATHI DAILY DAVANAGERE PAGE : 6 VOLUME : 13 ISSUE: 01

# ಸಾಹಿತ್ಯದಿಂದ ಆಶಿಸುವುದು ಹೃದಯ ಶುದ್ಧಿ ಹೃದಯ ಬುದ್ಧಿ: ಸಾಹಿತಿ ಡಾ. ಜಿ.ಬಿ. ಹರೀಶ್




**ದಾವಣಗೆರೆ:** ಸಾಹಿತ್ಯದಿಂದ ಸಾಮಾಜಿಕ ಬದಲಾವಣೆ ಸಾಧ್ಯವಿಲ್ಲ. ಆದರೆ ಹೃದಯ ಬದಲಾವಣೆ ಸಾಧ್ಯವಿದೆ. ಸಾಹಿತ್ಯದಿಂದ ನಮಗೆ ಬೇಕಿರುವುದು 'ಆನಂದ' ಎಂಬ ಅಭಿಪ್ರಾಯವನ್ನು ಬೆಂಗಳೂರಿನ ಖ್ಯಾತ ಸಾಹಿತಿ ಡಾ. ಜಿ.ಬಿ. ಹರೀಶ್ ವ್ಯಕ್ತಪಡಿಸಿದರು.

ನಗರದ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಅಖಿಲ ಭಾರತೀಯ ಸಾಹಿತ್ಯ ಪರಿಷತ್ ವತಿಯಿಂದ ಹಮ್ಮಿಕೊಂಡಿದ್ದ ಎರಡು ದಿನಗಳ ನಾಲ್ಕನೇಯ ರಾಜ್ಯ ಅಧಿವೇಶನ – ಸಾಹಿತ್ಯದಲ್ಲಿ 'ಸ್ವ'ತ್ವ ಸಮಾರಂಭದ ಸಮಾರೋಪ ಭಾಷಣ ನಿರ್ವಹಿಸಿ ಮಾತನಾಡಿದರು.

ಸಾಹಿತ್ಯಕ್ಕೆ ಜವಾಬ್ದಾರಿ ಇಲ್ಲವೇ ಎಂದು ಲೆನಿನ್, ಬರಗೂರು ಅಥವಾ ಪ್ರಜಾವಾಣಿಯಂತಹ ಪತ್ರಿಕೆಯವರು ಕೇಳಬಹುದು. ಸಾಹಿತ್ಯದಿಂದ ಸಾಮಾಜಿಕ ಬದಲಾವಣೆ ಸಾಧ್ಯವಿಲ್ಲ ಎಂದು ಹೇಳುತ್ತೇನೆ. ಡಾ. ರಾಜಕುಮಾರ್ ಅವರ ಬಂಗಾರದ ಮನುಷ್ಯ ಚಿತ್ರ ವೀಕ್ಷಿಸಿ ಬದಲಾದದ್ದು, ರಾಜಕುಮಾರ್ ಎಂಬ ವ್ಯಕ್ತಿತ್ವದಿಂದಲೇ ಹೊರತು ಸಾಮಾಜಿಕ ಪರಿವರ್ತನೆಯಿಂದಲ್ಲ ಎಂದರು.

ನಾವು ಸೋಷಿಯಾಲಜಿ ಅಥವಾ ಸಂಘರ್ಷ ವಿಷಯದಿಂದ ಸಾಹಿತ್ಯವನ್ನು ದೂರವಿಟ್ಟರೆ ಆಗುವ ಲಾಭವೆಂದರೆ, ನಮ್ಮ ಸಾಹಿತ್ಯ ಕೃತಿಗಳನ್ನು ಓದಬಹುದಾಗಿದೆ. ಸಮಾಜವನ್ನು ಕೆಣಕುವ ಸಾಹಿತ್ಯ ಓದುವುದಲ್ಲ. ನಮ್ಮ ನೆಲೆ, ಸಾಹಿತ್ಯದ ರಸದ

> 'ಸ್ವ' ಎಂದರೇ ಸಾಹಿತ್ಯದೊಂದಿಗಿನ ನಿರಂತರ ಒಡನಾಟವಾಗಿದೆ. ಸ್ವ–ಪಡೆಯಬೇಕಾದರೆ ಸಾಹಿತ್ಯ ಓದುವವರು ಸೋಷಿಯಾಲಜಿ, ಕ್ರಿಮಿನಾಲಜಿ, ಸೈಕಾಲಜಿಯನ್ನು ಚಪ್ಪಲಿ ಬಿಡುವಂತೆ ಹೊರಗೆ ಬಿಟ್ಟು, ಒಳಗೆ ಬಾಮಕ, ದಂಡಿ, ನಾಗಸೇನ, ಕುವೆಂಪು, ದ.ರಾ. ಬೇಂದ್ರೆಯಂತಹವರನ್ನು ಕರೆತರಬೇಕು ಎಂದು ಹರೀಶ್ ಅಭಿಪ್ರಾಯಪಟ್ಟರು.

ನೆಲೆಯಾಗಿದೆ. ಇಂತಹ ಸಾಹಿತ್ಯದಿಂದ ಆನಂದ ದೊರೆಯಲಿದೆ ಎಂಬ ತರ್ಕವನ್ನು ಮುಂದಿಟ್ಟರು.

'ಸ್ವ' ಇಲ್ಲದೆ ಪ್ರಮಾಣವಿಲ್ಲ, ಪ್ರಮಾಣವಿಲ್ಲದೆ ಸ್ವ ಇಲ್ಲ. ನಾವು ನಮ್ಮ ಪ್ರಮಾಣ (ರೆಫರೆನ್ಸ್) ನಿಶ್ಚಯ ಮಾಡಿಕೊಳ್ಳದೆ ಸಾಹಿತ್ಯವನ್ನು 'ಸ್ವ' ಎಂದು ನಿರ್ಧರಿಸಲು ಸಾಧ್ಯವಿಲ್ಲ. ಯಾವುದು ಈ ನೆಲದ ಬೇರೋ, ಯಾವುದು ಭಾರತೀಯತೆ–ಯೋ ಅದು 'ಸ್ವ' ನನಗೆ ಆಧಾರ ನನ್ನ ಭಾರತ, ನನ್ನ ಸಂಸ್ಕೃತಿ. ಬೈದು ಉದ್ಧಾರ ಮಾಡುವ ಸಾಹಿತ್ಯ ಬೇಕೇ ಹೊರತು, ನನ್ನನ್ನು ಕುಗ್ಗಿಸುವ ಸಾಹಿತ್ಯ ಬೇಕಿಲ್ಲ ಎಂದು ಘಂಟಾಘೋಷವಾಗಿ ಹೇಳಿದರು.

ಹಾಗಾದರೆ ರೆಫರೆನ್ಸ್ ಯಾವುದು ಸಾಹಿತ್ಯ ಕೃತಿಗಳೇ ಎಂಬ ಪ್ರಶ್ನೆ ಮೂಡುತ್ತದೆ. ವೇದ, ಉಪನಿಷತ್ತು, ಆಗಮ, ಜೈನ್, ಬೌದ್ಧ, ನಮ್ಮ ಸಾಹಿತ್ಯಕ್ಕೆ ಪ್ರಮಾಣವೇ? ಶೈವ ಚಿಂತನೆ ಅರ್ಥ ಮಾಡಿಕೊಳ್ಳದೆ ಅಲ್ಲಮ ಪ್ರಭುವನ್ನು ಅರ್ಥ ಮಾಡಿಕೊಳ್ಳಲು ಸಾಧ್ಯವಿಲ್ಲ. ಹಾಗಾಗಿಯೇ ಮಾರ್ಕ್ಸ್ ವಾದಿಗಳು ಅಲ್ಲಮನನ್ನು ಮುಟ್ಟಲು ಸಾಧ್ಯವಾಗಲಿಲ್ಲ. ಅದೇ ರೀತಿ ಬಸವಣ್ಣನವರ ನೂರು ವಚನಗಳನ್ನು ಅವರು ಮುಟ್ಟಲಾಗುತ್ತಿಲ್ಲ ಎಂದು ಹೇಳಿದರು.

ಅಧಿವೇಶನದ ಅಧ್ಯಕ್ಷ ಎಸ್.ಜಿ. ಕೋಟಿ ಮಾತನಾಡಿ, 14 ವರ್ಷಗಳಲ್ಲಿ ರಾಜ್ಯ ಮಟ್ಟದ ಸಂಘಟನೆಯಲ್ಲಿ ಪರಿಷದ್ ಯಶಸ್ವಿಯಾಗಿದ್ದು, ಸದಸ್ಯತ್ವ ಪಡೆಯಬೇಕೆಂದು ಹಲವರ ಹಪಾಹಪಿಯಾಗಿದೆ. ಇಂದು ಸ್ವಾಂತಂತ್ರ್ಯದ ಹೆಸರಿನಲ್ಲಿ ಸ್ವೇಚ್ಛಾಚಾರ ಹೆಚ್ಚಾಗಿದ್ದು, ನಮ್ಮ ಮಕ್ಕಳನ್ನು ಇದರಿಂದ ಹೊರ ತರಲು ಚಿತ್ರಕಲೆ, ಸಾಹಿತ್ಯ, ಸಂಗೀತ, ನೃತ್ಯಕಲೆ ಗಳಲ್ಲಿ ತೊಡಗಿಸುವ ಮೂಲಕ ಸುಸಂಸ್ಕೃತರನ್ನಾಗಿ ಮಾಡಬೇಕಿದೆ. ಆಗ ಪರಿಷದ್ ಉದ್ದೇಶ ಈಡೇರಿದಂತಾಗುತ್ತದೆ ಎಂದರು.

ಸ್ವಾಗತ ಸಮಿತಿ ಅಧ್ಯಕ್ಷರಾದ ಬಿ. ವಾಮದೇವಪ್ಪ ಮಾತನಾಡಿ, ಪರಿಷದ್ ವತಿಯಿಂದ ನಡೆದ ಸಮ್ಮೇಳನ ಸಮಯ ಪಾಲನೆಯೊಂದಿಗೆ, ಬಹಳ ಶಿಸ್ತಿನಿಂದ ನಡೆದು ಯಶಸ್ವಿಯಾಗುವ ಮೂಲಕ ಮಾದರಿಯಾಗಿದೆ ಎಂದರು.

> ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಕರ್ನಾಟಕ ವತಿಯಿಂದ ದಾವಣಗೆರೆಯಲ್ಲಿ ನಡೆದ ನಾಲ್ಕನೇ ರಾಜ್ಯ ಅಧಿವೇಶನದಲ್ಲಿ ಈ ಕೆಳಕಂಡಂತೆ ಗೊತ್ತುವಳಿ ಮಂಡಿಸಲಾಯಿತು.
>
> **1.** ನಮ್ಮ ಆಡುಮಾತಿನ ಕನ್ನಡವು ಆಂಗ್ಲಪದಗಳಿಂದ ಇಡಿಕಿರಿದು ಬೇರಕೆ ಭಾಷೆಯಂತಾಗಿದೆ. ಅಚ್ಚಗನ್ನಡದಲ್ಲೇ ಮಾತಾಡುತ್ತ ನಮ್ಮ ಭಾಷೆಯನ್ನು ಕಾಪಾಡೋಣ.
>
> **2.** ನಮ್ಮ ಬರಹದ ಭಾಷೆಯೂ ಕಂಗ್ಲಿಷೇ ಆಗಿದೆ. ನಮ್ಮ ಸಾಹಿತ್ಯವನ್ನು ಪರಕೀಯ ಪದ–ವಾಕ್ಯಗಳಿಂದ ಮುಕ್ತವಾಗಿಸೋಣ.
>
> **3.** ಯಾವುದೇ ಸಾಹಿತ್ಯದ ಪ್ರಧಾನ ಸ್ವತ್ವ ರಸ. ನಮ್ಮ ಸಾಹಿತ್ಯ ಬರಹವು ರಸಪ್ರಧಾನವಾಗಿರುವಂತೆ ಒತ್ತು–ಕೊಡೋಣ.
>
> **4.** ಸಾಹಿತ್ಯದಲ್ಲಿ ರಸಶುದ್ಧಿಯನ್ನು ಆಗ್ರಹಿಸೋಣ.
>
> **5.** ಭಾರತ ವಿರೋಧಿ ಸಿದ್ಧಾಂತಗಳು ಉಳಿದ ಜ್ಞಾನಕ್ಷೇತ್ರದಲ್ಲಿ ವಕ್ಕರಿಸಿದಂತೆ ಸಾಹಿತ್ಯಕ್ಷೇತ್ರವನ್ನೂ ಆವರಿಸಿದ್ದು, ಯಾವ ಆಕರ್ಷಣೆಗೂ ಒಳಗಾಗದೆ, ಯಾವ ಸಿದ್ಧಾಂತಕ್ಕೂ ಸಿಲುಕದೆ ಸಾಹಿತ್ಯದಲ್ಲಿ ಭಾರತೀಯ ಸಂವೇದನೆಯನ್ನು ಧೈರ್ಯ–ಸ್ಥೈರ್ಯಗಳಿಂದ ಅಭಿವ್ಯಕ್ತಿಸೋಣ ಎಂದು ನಿರ್ಧರಿಸಲಾಯಿತು.

### ಬಾನು ಮುಷ್ತಾಕ್ ಅಭಿನಂದಿಸಲು ಸಾಧ್ಯವಿಲ್ಲ ....

ಬಾನು ಮುಷ್ತಾಕ್ ಅವರಿಗೆ ಬೂಕರ್ ಪ್ರಶಸ್ತಿ ಬಂತು. ಅನೇಕರು ಅವರನ್ನು ಅಭಿನಂದಿಸಿದರು. ಆದರೆ ನಾನು ಅಭಿನಂದಿಸಲಿಲ್ಲ. ಕಾರಣ ದತ್ತಪೀಠ ಹೋರಾಟದಲ್ಲಿ ಗಿರೀಶ್ ಕಾರ್ನಾಡ್, ಜಿ.ಕೆ. ಗೋವಿಂದ ರಾವ್, ಮುರಳೀಧರ್ ಅಂತಹವರು ಪಾಲ್ಗೊಂಡರು. ಆದರೆ ಬಾನು ಮುಷ್ತಾಕ್ ಹೋರಾಟಕ್ಕೆ ಬರಲಿಲ್ಲ. ದತ್ತಪೀಠ ವಿರೋಧಿಸುವವರನ್ನು ನಾನು ಅಭಿನಂದಿಸಲು ಸಾಧ್ಯವಿಲ್ಲ ಎಂದು ಜಿ.ಬಿ. ಹರೀಶ್ ತಮ್ಮ ನಿಲುವನ್ನು ವ್ಯಕ್ತಪಡಿಸಿದರು.

# ರೈಲ್ವೆ ರಕ್ಷಣಾ ಪಡೆಯಿಂದ 'ಆಪರೇಷನ್ ನಾರ್ಕೋಸ್': ಮಾದಕ ವಸ್ತುಗಳ ವಶ

**ದಾವಣಗೆರೆ:** "ಆಪರೇಷನ್ ನಾರ್ಕೋಸ್" ಎಂಬ ವಿಶೇಷ ಕಾರ್ಯಾಚರಣೆಯ ಅಡಿಯಲ್ಲಿ, ನೈರುತ್ಯ ರೈಲ್ವೆ ಮೈಸೂರು ವಿಭಾಗದ ರೈಲ್ವೆ ರಕ್ಷಣಾ ಪಡೆಯ (ಆರ್‌ಪಿಎಫ್) ವಿಶೇಷ ತಂಡವು, ರೈಲು ಸಂಖ್ಯೆ 18111 ಟಾಟಾ ಯಶವಂತಪುರ ಎಕ್ಸ್‌ಪ್ರೆಸ್‌ನಲ್ಲಿ ಬೀರೂರು ಮತ್ತು ಕಡೂರು ನಿಲ್ದಾಣಗಳ ನಡುವೆ ಅಚ್ಚರಿ ತಪಾಸಣೆಯನ್ನು ನಡೆಸಿತು.



ಈ ಕಾರ್ಯಾಚರಣೆ ಮೈಸೂರು ವಿಭಾಗದ ಹಿರಿಯ ವಿಭಾಗೀಯ ಸುರಕ್ಷತಾ ಆಯುಕ್ತರಾದ ಸ್ಯಾಮ್ ಪ್ರಸಾಂತ್ ಜೆ.ಆರ್. ಅವರ ನೇತೃತ್ವದಲ್ಲಿ ನಡೆಯಿತು. ತಂಡದಲ್ಲಿ ಆನಂದ ಬಿ. (ASI/CIB/MYS, ಕ್ರೈಮ್ ಪ್ರಿವೆನ್ಷನ್ ಡಿಟೆಕ್ಷನ್ ತಂಡದ ಉಸ್ತುವಾರಿ), ಶಿವನಂದ ಟಿ., ಹೆಡ್ ಕಾನ್ಸ್ಟೆಬಲ್, ದಾವಣಗೆರೆ ಮತ್ತು ಸಿ. ವೆಂಕಟೇಶ (ASI/RPF/RRB) ಇದ್ದರು.

ಪರಿಶೀಲನೆಯ ಸಂದರ್ಭದಲ್ಲಿ, ತಂಡವು ಜನರಲ್ ಕೋಚ್ ಸಂಖ್ಯೆ SWR 247321 ರಲ್ಲಿ ಪ್ರಾಥಮಿಕ ತನಿಖೆಯಿಂದ ನಿಖರವಾದ ಬ್ಯಾಗ್ ಅನ್ನು ಪತ್ತೆಹಚ್ಚಿತು. ಹತ್ತಿರದ ಪ್ರಯಾಣಿಕರಿಂದ ಮಾಹಿತಿ ಪಡೆದುಕೊಂಡರೂ ಯಾರೂ ಇದನ್ನು ತಮ್ಮದು ಎಂದು ಹೇಳಲಿಲ್ಲ. ಅನುಮಾನಾಸ್ಪದ ಪರಿಸ್ಥಿತಿಯಲ್ಲಿ ಬ್ಯಾಗ್ ತೆರೆಯಲಾಗಿದ್ದು, ಅದರಲ್ಲಿ ಸುಮಾರು 1,25,000 ರೂ. ಮೌಲ್ಯದ 25 ಗ್ರಾಂ ಎಂಡಿಎಂಎ (ಕೃತಕ ಮಾದಕ ವಸ್ತು), 90,000 ರೂ.ಮೌಲ್ಯದ 1.522 ರೂಂ. ಕೆ.ಜಿ ಗಾಂಜಾ ಮತ್ತು 1,850 ಮೌಲ್ಯದ 210 ಗ್ರಾಂ ತೂಕದ 37 ಭಾಂಗ್ ಚಾಕೊಲೇಟ್ಗಳನ್ನು ಪತ್ತೆಹಚ್ಚಲಾಯಿತು. ವಶಪಡಿಸಿಕೊಂಡ ಮಾದಕ ವಸ್ತುಗಳ ಒಟ್ಟು ಅಂದಾಜು ಮೌಲ್ಯ 2,16,850 ರೂಪಾಯಿಗಳು.

ಈ ಬ್ಯಾಗ್ ಅನ್ನು ಆರ್‌ಪಿಎಫ್ ತಂಡವು ಮಧ್ಯಾಹ್ನ 1:55 ಗಂಟೆಗೆ ಕಡೂರು ನಿಲ್ದಾಣದಲ್ಲಿ ಭದ್ರಪಡಿಸಿದ್ದು, ವಸ್ತುಗಳ ಚಿತ್ರ ದಾಖಲೆಗಳೊಂದಿಗೆ ಕಡೂರು ಅಬಕಾರಿ ಇಲಾಖೆಗೆ ಹಸ್ತಾಂತರಿಸಲಾಗಿದೆ. ಮುಂದಿನ ಕಾನೂನು ಕ್ರಮವನ್ನು ಕೈಗೊಳ್ಳಲಿದ್ದಾರೆ.

ಸ್ಯಾಮ್ ಪ್ರಸಾಂತ್ ಜೆ.ಆರ್., ಹಿರಿಯ ವಿಭಾಗೀಯ ಸುರಕ್ಷತಾ ಆಯುಕ್ತರು, ಮಾದಕ ದ್ರವ್ಯಗಳ ಸಾಗಣೆಯನ್ನು ತಡೆಗಟ್ಟಲು ಮತ್ತು ರೈಲ್ವೆ ಮತ್ತು ಸಾರ್ವಜನಿಕರ ಸುರಕ್ಷತೆಗೆ ಆರ್ ಪಿ ಎಫ್ ಬದ್ಧವಾಗಿದೆ. ಈ ಯಶಸ್ವಿ ಕಾರ್ಯಾಚರಣೆ ನಮ್ಮ ಪೂರ್ವಭಾವಿ ಮತ್ತು ರಕ್ಷಣೆ ಕ್ರಮಗಳ ಪ್ರತೀಕವಾಗಿದೆ ಎಂದು ತಿಳಿಸಿದ್ದಾರೆ.

# ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಿದ ಸಚಿವ ಸತೀಶ್‌ಜಾರಕಿಹೊಳಿ

**ಚಿಕ್ಕಮಗಳೂರು:** ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಿ ಚಿಕ್ಕಮಗಳೂರನ್ನು ಭಾರತದ ಭೂಪಟದಲ್ಲಿಗುರುತಿಸುವ ಪ್ರಯತ್ನ ಮಾಡುವುದಾಗಿ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್‌ಜಾರಕಿಹೊಳಿ ಭರವಸೆ ನೀಡಿದರು.

ಜಿಲಾ ್ಲಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ಏರ್ಪಡಿಸಿದ್ದ ಕಾರ್ಯಕರ್ತರ ಸಮಾವೇಶದಲ್ಲಿ ಅವರು ಮಾತನಾಡಿದರು. ಚಿಕ್ಕಮಗಳೂರಿಗೆ ಇನ್ನೂ 2 ಬಾರಿ ಭೇಟಿ ನೀಡಿದರೆ ನನಗೆ ಇಲ್ಲಿನ ಸ್ಪಷ್ಟಚಿತ್ರಣ ಸಿಗಲಿದೆ. ಈ ಜಿಲ್ಲೆಯಲ್ಲಿ ಹೆಚ್ಚು ಪ್ರವಾಸಿ ತಾಣಗಳೀವೆ. ಪ್ರವಾಸೋದ್ಯಮ ಮತ್ತು ಲೋಕೋಪಯೋಗಿ ಇಲಾಖೆಯಿಂದ ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚು ಅನುದಾನ ನೀಡಿ–ದರೆ ಜಿಲ್ಲೆ ಆರ್ಥಿಕ ಸಬಲೀಕರಣ ಹೊಂದಲಿದೆ.ಈ ನಿಟ್ಟಿನಲ್ಲಿ ಮತ್ತೊಮ್ಮೆ ಜಿಲ್ಲೆಯಲ್ಲಿ ಪರಿವೀಕ್ಷಣೆ ನಡೆಸಿ ಅಗತ್ಯವಿರುವ ಅನುದಾನ ನೀಡಲಾಗುವುದು ಎಂದು ಹೇಳಿದರು.

ಅರಣ್ಯ ಸಮಸ್ಯೆ ಗಮನಸಳೆಯುವೆ.

ದಾರವಾಡ ಮತ್ತಿತರೆ ಜಿಲ್ಲೆಯಲ್ಲಿ ಇರುವಂತೆ ಈ ಜಿಲ್ಲೆಯಲ್ಲೂ ಅರಣ್ಯ ಮತ್ತು ಕಂದಾಯ ಭೂ ಸಮಸ್ಯೆ ಇರುವ ಬಗ್ಗೆ ತಿಳಿದಿದ್ದೇನೆ. ಈ ಬಗ್ಗೆ ಕಂದಾಯ ಮತ್ತು ಅರಣ್ಯ ಸಚಿವರ ಗಮನ ಸೆಳೆದು ಸಮಸ್ಯೆ ಪರಿಹರಿಸುವ ಪ್ರಯತ್ನ ಮಾಡುತ್ತೇನೆ ಎಂದರು.

ಜಿಲಾ ್ಲಕಾಂಗ್ರೆಸ್ ಕಚೇರಿ ಕಟ್ಟಡ ವೀಕ್ಷಿಸಿದ್ದೇನೆ. ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಘಟಕದಿಂದ ಈ ಕಚೇರಿ ಕಟ್ಟಡ ನಿರ್ಮಾಣಕ್ಕೆ ಆರ್ಥಿಕ ಸಹಾಯ ಮಾಡಲಾಗುವುದು. ಬೆಳಗಾವಿಯ ನಾಲ್ವರುಅಧ್ಯಕ್ಷರನ್ನು ಇಲ್ಲಿಗೆ ಕರೆಸಿ ಸಹಾಯ ಮಾಡುವ ಬಗ್ಗೆ ಘೋಷಣೆ ಮಾಡುತ್ತೇವೆ ಎಂದುಹೇಳಿದರು.

ನಿಷ್ಠೆಯ ಕಾರ್ಯಕರ್ತರಿಗೆ ಅಕಾರ ಸಿಗಲಿ.




ಕೆಪಿಸಿಸಿ ಯಿಂದ ಭರ್ತಿ ಮಾಡಬೇಕಾದ ಹಲವು ಹುದ್ದೆಗಳು ಇನ್ನೂ ಬಾಕಿ ಇವೆ. ಮೂಲ ಕಾಂಗ್ರೆಸ್ಸಿಗರಿಗೆ ಶೇ.70, ಹೊಸಬರಿಗೆ ಶೇ.30 ರಅನುಪಾತದಲ್ಲಿಅಕಾರ ಹಂಚಿಕೆ ಆಗಬೇಕು ಎಂದು ಪ್ರತಿಪಾದಿಸಿದ್ದೇನೆ. ಕಾರ್ಯಕರ್ತರಿಗೆ ಅತಿ ಶೀಘ್ರದಲ್ಲಿ ಅಕಾರಕೊಡಿಸುವ ಪ್ರಯತ್ನ ಮಾಡುತ್ತೇನೆ. ಮುಂಬರುವ 2028 ರಚುನಾವಣೆಯನ್ನುಕಾರ್ಯಕರ್ತರು ಸವಾಲಾಗಿ ಸ್ವೀಕರಿಸಬೇಕು ಎಂದರು.

ಶಾಸಕ ಎಚ್.ಡಿ.ತಮ್ಮಯ್ಯ ಮಾತನಾಡಿ, ಚಿಕ್ಕಮಗಳೂರು ಕ್ಷೇತ್ರದಲ್ಲಿ ಮಳೆಯಿಂದ ಹಾನಿಯಾದರಸ್ತೆ, ಸೇತುವೆಗಳನ್ನು ಸಚಿವರು ವೀಕ್ಷಣೆ ಮಾಡಿದ್ದಾರೆ.ಮಹಲ್‌ನಿಂದಕೆಮ್ಮಣ್ಣುಗುಂಡಿಯವರೆಗೆ 15 ಕಿಮೀ ರಸ್ತೆಅಭಿವೃದ್ಧಿಪಡಿಸುವ ಸಂಬಂಧಅರಣ್ಯ ಸಚಿವರೊಂದಿಗೆ ಚರ್ಚಿಸಿ ಈಗಿರುವಅಡತಡೆ ಸರಿಪಡಿಸಿ ರಸ್ತೆ ಮಾಡಿಸಿಕೊಡುವುದಾಗಿ ಸಚಿವರು ಭರವಸೆ ನಿಡಿದ್ದಾ–ರೆಎಂದರು.ಚಿಕ್ಕೋಡಿ ಸಂಸದೆ ಪ್ರಿಯಾಂಕಜಾರಕಿಹೊಳಿ, ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಾಹುಲ್ ಜಾರಕಿಹೊಳಿ, ಕಾಂಗ್ರೆಸ್ ಮುಖಂಡರಾದ ಮಂಜೇಗೌಡ, ಡಾ.ವಿಜಯ್‌ಕುಮಾರ್, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ರೇಖಾ ಹುಲಿಯಪ್ಪಗೌಡ, ತನೋಜ್‌ನಾಯ್ಡು, ಪ್ರಶಾಂತ್, ಮಹಮದ್ ಹನೀಫ್, ಅಕ್ಬರ್, ಮಲ್ಲೇಶ್ಸ್ವಾಮಿ, ರಾಮಚಂದ್ರ ಮತ್ತಿತರರಿದ್ದರು.

# ವಿಕಸಿತ ಕೃಷಿ ಸಂಕಲ್ಪಅಭಿಯಾನ

**ದಾವಣಗೆರೆ:** ಮುಂಗಾರು ಪೂರ್ವದಲ್ಲಿರೈತರಿಗೆ ಸೂಕ್ತ ಕೃಷಿ ಪದ್ಧತಿಗಳ ಬಗ್ಗೆ ತಿಳಿಸಿಕೊಡುವ ಹಾಗೂ ಆಧುನಿಕ ತಳಿಗಳನ್ನು ಅಳವಡಿಕೆ ಮಾಡಿಕೊಂಡು ಹೆಚ್ಚಿನ ಇಳುವರಿ ಪಡೆಯುವ "ವಿಕಸಿತ ಕೃಷಿ ಸಂಕಲ್ಪಅಭಿಯಾನ"ವುಇತ್ತೀಚೆಗೆ ಬೆಳಗುತ್ತಿ, ಕಂಚಿಕೊಪ್ಪ ಮತ್ತು ಮಲ್ಲಿಗೆನಹಳ್ಳಿ ಗ್ರಾಮಗಳಲ್ಲಿ ಜರುಗಿತು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಶ್ರೀ ರಘುರಾಜಜೆ., ವಿಷಯತಜ್ಞರು (ಕೃಷಿ ವಿಸ್ತರಣಾ) ಇವರು ಮಿಶ್ರ ಬೆಳೆಗಳ ಮುಖಾಂತರರೈತರು ಸಂಕಷ್ಟಗಳನ್ನು ನಿವಾರಿಸಿಕೊಳ್ಳಬಹುದು ಹಾಗೂ ಭೂಮಿಯ ಫಲವತ್ತತೆಯನ್ನು ಕಾಪಾಡಿಕೊಳ್ಳಬೇಕೆಂದು ತಿಳಿಸಿದರು. ಬೆಳಗುತ್ತಿ ಹೋಬಳಿಯಲ್ಲಿ ವಾತಾವರಣ ಹಾಗೂ ಭೂಮಿಯ ವಿವಿಧ ಬೆಳೆಗಳಿಗೆ ಸಹಕಾರಿಯಾಗಿದ್ದು, ರೈತರು ಬೆಳೆಗಳಲ್ಲಿ ರಾಜ್ಯದಲ್ಲಿಯೇಅತೀ ಹೆಚ್ಚು ಇಳುವರಿ ಪಡೆಯುವ ಪ್ರದೇಶವಾಗಿದೆಎಂದು ತಿಳಿಸಿದರು.

ಭಾರತೀಯಕೀಟಶಾಸ್ತ್ರಅನ್ವಯಿಕ ಸಂಸ್ಥೆ, ಬೆಂಗಳೂರಿನ ಡಾ.ಸಾಗರ್‌ಅವರು ಮಾತನಾಡಿಕೆರೆ ಮತ್ತು ಹೊಂಡಗಳಲ್ಲಿ ಒಳನಾಡು ಮೀನು ಸಾಕಾಣಿಕೆಗೆ ಸೂಕ್ತ ಅವಕಾಶಗಳಿದ್ದು, ಅಧಿಕ ಇಳುವರಿ ಕೊಡುವ ತಳಿಗಳನ್ನು ಬಳಸಿಕೊಳ್ಳಲು ಕರೆ ನೀಡಿದರು.ಕೇಂದ್ರ ಸರ್ಕಾರದ ಮತ್ಸ್ಯಸಂಪಾದಯೋಜನೆಯಡಿರೈತರಿಗೆ ಮೀನು ಸಾಕಾಣಿಕೆಗೆ ಮೀನುಗಾರಿಕೆಇಲಾಖೆಯಿಂದ ಅವಕಾಶಗಳನ್ನು ಉಪಯೋಗಿಸಿಕೊಳ್ಳಲು ತಿಳಿಸಿದರು.

ಕತಲಗೆರೆಯ ವಲಯ ಕೃಷಿ ಮತ್ತುತೋಟಗಾರಿಕಾ ಸಂಶೋಧನಾಕೇಂದ್ರದ ವಿಜ್ಞಾನಿಗಳಾದ ಡಾ. ಶರಣಪ್ಪಕುರಿಯವರು ಮಾತನಾಡಿಅಡಿಕೆ ಸಿಪ್ಪೆ ರಸ್ತೆ ಬದಿಗಳಲ್ಲಿ ಹಾಕಿ ಸುಡುವುದು ಪರಿಸರಕ್ಕೆತೀವ್ರ ಹಾನಿಕಾರವಾಗಿದ್ದು, ಬದಲಿಗೆಅಡಿಕೆ ಸಿಪ್ಪೆಯನ್ನು ಸೂಕ್ಷ್ಮಾಣು ಜೀವಿಗಳ ಮುಖಾಂತರ ಕಳಿಸಿ ಉತ್ಕೃಷ್ಟಗೊಬ್ಬರ




ಮಾಡುವತಂತ್ರಜ್ಞಾನವನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತುತೋಟಗಾರಿಕೆ ಸಂಶೋಧನಾಕೇಂದ್ರ, ಶಿವಮೊಗ್ಗ ಇವರುಅಭಿವೃದ್ಧಿ ಪಡಿಸಿದ್ದು, ಇದ–ರಿಂದರೈತರು ರಸಗೊಬ್ಬರಗಳ ಮೇಲಿನ ಖರ್ಚುನ್ನುಕಡಿಮೆ ಮಾಡುವುದಾಗಿದೆಎಂದು ತೋರಿಸಿಕೊಟ್ಟರು.

ಖರ್ಚು ಕಡಿಮೆ ಮಾಡಬಹುದಲ್ಲದೆ ಪರಿಸರಕ್ಕೆಉಪಯೋಗ ಹಾಗೂ ಆರೋಗ್ಯಕರಆಹಾರವನ್ನುಉತ್ಪಾದಿಸಬಹುದಾಗಿದೆಎಂದು ತಿಳಿಸಿದರು.

ಅಭಿಯಾನದಲ್ಲಿ ಕೃಷಿ, ತೋಟಗಾರಿ–ಕೆ, ಮೀನುಗಾರಿಕೆ, ಪಶು ವೈದ್ಯಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಹೆಚ್ಚುತ್ತಿರುವ ಸ್ಥೂಲಕಾಯದ ಸಮಸ್ಯೆಯನ್ನು ಕಡಿಮೆ ಮಾಡಲು ದೇಶಾದ್ಯಂತ ಉಪಕ್ರಮಕ್ಕೆ ಕೇಂದ್ರ ಆರೋಗ್ಯ ಸಚಿವರಾದ ಶ್ರೀ ಜೆ.ಪಿ. ನಡ್ಡಾ ಚಾಲನೆ

**ಬೆಂಗಳೂರು:** ಆರೋಗ್ಯಕರ ಸಮಾಜವು ಬಲವಾದ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರದ ಅಡಿಪಾಯ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಶ್ರೀ ಜೆ.ಪಿ. ನಡ್ಡಾ ಒತ್ತಿ ಹೇಳಿದ್ದಾರೆ. ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ ಇಂದು ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ (ಎಫ್‌ಎಸ್‌ಎಸ್‌ಎಐ) ಆಯೋಜಿಸಿದ್ದ ವಿಶ್ವ ಆಹಾರ ಸುರಕ್ಷತಾ ದಿನದ ಕಾರ್ಯಕ್ರಮದಲ್ಲಿ ದಿಕ್ಸೂಚಿ ಭಾಷಣ ಮಾಡಿದ ಸಚಿವರು, ತೈಲದಲ್ಲಿ ಕರಿದ ಆಹಾರಗಳ ಸೇವನೆಯನ್ನು ಶೇಕಡಾ 10 ರಷ್ಟು ಕಡಿಮೆ ಮಾಡಲು ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿಯವರು ನೀಡಿರುವ ಕರೆಯನ್ನು ನೆನಪಿಸಿಕೊಂಡರು.

ಎಚ್ಚರಿಕೆಯಿಂದ ತಿನ್ನುವ ಪ್ರಾಮುಖ್ಯತೆಯನ್ನು ಎತ್ತಿ ತೋರಿಸಿದ ಶ್ರೀ ನಡ್ಡಾ, ಜನರು ತಮ್ಮ ಕ್ಯಾಲೋರಿ ಸೇವನೆಯ ಪ್ರಮಾಣವನ್ನು ಮೇಲ್ವಿಚಾರಣೆ ಮಾಡಲು ಮತ್ತು ಸಮತೋಲಿತ ಆಹಾರ ಸೇವನೆಯ ಪದ್ಧತಿಯನ್ನು ಕಾಪಾಡಿಕೊಳ್ಳಬೇಕು ಎಂದು ಆಗ್ರಹಿಸಿದರು. ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್) ಯ ಇತ್ತೀಚಿನ ಅಧ್ಯಯನವನ್ನು ಉಲ್ಲೇಖಿಸಿದ ಅವರು, ಇದು 2008 ಮತ್ತು 2020 ರ ನಡುವೆ ಭಾರತದಲ್ಲಿ ಬೊಜ್ಜು ಪ್ರಮಾಣವು ನಗರ ಪ್ರದೇಶಗಳಲ್ಲಿ 39.6% ಮತ್ತು ಗ್ರಾಮೀಣ ಪ್ರದೇಶಗಳಲ್ಲಿ 23.1% ಕ್ಕೆ ಏರಿದೆ ಎಂಬುದನ್ನು ಬಹಿರಂಗಪಡಿಸಿದೆ. ಈಗಲೇ ತಡೆಗಟ್ಟುವ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ, 2050 ರ ವೇಳೆಗೆ ಭಾರತದ ಜನಸಂಖ್ಯೆಯ ಮೂರನೇ ಒಂದು ಭಾಗದಷ್ಟು ಜನರು ಬೊಜ್ಜು ಸಮಸ್ಯೆ ಎದುರಿಸುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಜಾಗೃತಿ ಅಭಿಯಾನದ ಭಾಗವಾಗಿ, ಸಚಿವರು "ಈಟ್ ರೈಟ್ ಆಕ್ಟಿವಿಟಿ ಪುಸ್ತಕ"ವನ್ನು ಬಿಡುಗಡೆ ಮಾಡಿದರು, ಇದನ್ನು ಶಿಕ್ಷಣ ಇಲಾಖೆಯ ಮೂಲಕ ಶಾಲಾ ಮಕ್ಕಳಿಗೆ ಮತ್ತು ರೈಲ್ವೆ ಮಂಡಳಿಯಿಂದ ಪ್ರಯಾಣಿಕರಿಗೆ ವಿತರಿಸಲಾಗುವುದು.




ಶ್ರೀ ನಡ್ಡಾ ಅವರು ನವೀನ ವರ್ತನೆ ಬದಲಾವಣೆ ತಂತ್ರವನ್ನು ಅಂದರೆ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಆಶ್ರಯದಲ್ಲಿ ಎಫ್‌ಎಸ್‌ಎಸ್‌ಎಐ ಅಭಿವೃದ್ಧಿಪಡಿಸಿದ ಶಾಲೆಗಳು, ಕೆಲಸದ ಸ್ಥಳಗಳು ಮತ್ತು ಸಾರ್ವಜನಿಕ ಸಂಸ್ಥೆಗಳಲ್ಲಿ ಸಕ್ಕರೆ ಮತ್ತು ತೈಲ ಬೋರ್ಡ್‌ಗಳ ವ್ಯಾಪಕ ಪ್ರಚಾರವನ್ನು ಶ್ಲಾಘಿಸಿದರು, ಇದು ಪ್ರಬಲ ದೃಶ್ಯ ಪ್ರಚಾರ ಸಾಧನವಾಗಿ ಕಾರ್ಯನಿರ್ವಹಿಸುತ್ತದೆ, ದೈನಂದಿನ ಆಹಾರ ಪದಾರ್ಥಗಳಲ್ಲಿ ಅಡಗಿರುವ ಸಕ್ಕರೆ ಮತ್ತು ಕೊಬ್ಬಿನ ಬಗ್ಗೆ ಸ್ಪಷ್ಟ, ಸಂಬಂಧಿತ ಮಾಹಿತಿಯನ್ನು ಪ್ರದರ್ಶಿಸುತ್ತದೆ.

ಎನ್ಸಿಇಆರ್ಟಿ ಶಾಲಾ ಪಠ್ಯಕ್ರಮದಲ್ಲಿ ಆರೋಗ್ಯಕರ ಆಹಾರ ಪದ್ಧತಿಯನ್ನು ಒಂದು ವಿಷಯವಾಗಿ ಸೇರಿಸಿದೆ ಎಂದೂ ಅವರು ಮಾಹಿತಿ ನೀಡಿದರು.

ಸಮ್ಮೇಳನದಲ್ಲಿ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಕಾರ್ಯದರ್ಶಿ ಶ್ರೀಮತಿ ಪುಣ್ಯ ಸಲೀಲಾ ಶ್ರೀವಾಸ್ತವ; ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕಾರ್ಯದರ್ಶಿ ಶ್ರೀ ಸಂ–ಜಯ್ ಕುಮಾರ್; ರೈಲ್ವೆ ಮಂಡಳಿಯ ಅಧ್ಯಕ್ಷ ಶ್ರೀ ಸತೀಶ್ ಕುಮಾರ್, ಎಫ್‌ಎಸ್‌ಎಸ್‌ಎಐ ಕಾರ್ಯನಿರ್ವಾಹಕ ನಿರ್ದೇಶಕ ಶ್ರೀ ಯು.ಎಸ್. ಧ್ಯಾನಿ; ಮತ್ತು ದಕ್ಷಿಣ ವಲಯ ನಿರ್ದೇಶಕ ಶ್ರೀ ವಿ.ಕೆ. ಪಂಚಮ್ ಅವರು ಮಾತನಾಡಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ನೀವು ಒಂದು ಹೊಸ ವ್ಯಾಪಾರ ಪಾಲುದಾರಿಕೆಯನ್ನು ಪರಿಗಣಿಸುತ್ತಿದ್ದಲ್ಲಿ – ನೀವು ಯಾವುದೇ ಬದ್ಧತೆಯನ್ನು ಮಾಡುವ ಮೊದಲು ಎಲ್ಲಾ ಸತ್ಯಾಸತ್ಯತೆಗಳನ್ನು ಅರಿತುಕೊಳ್ಳುವುದು ಅಗತ್ಯ

### ವೃಷಭ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ಮನ್ಮಥನ ಬಾಣದಿಂದ ತಪ್ಪಿಸಿಕೊಳ್ಳುವ ಅವಕಾಶ ಕಡಿಮೆಯಿದೆ

### ಮಿಥುನ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಬಿಡುವಿನ ವೇಳೆಯನ್ನು ನಿಮ್ಮ ಮನೆಯ ಸೌಂದರ್ಯ ಹೆಚ್ಚಿಸಲು ಬಳಸಿ.

### ಕರ್ಕ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಸಂಜೆಯಲ್ಲಿ ಬಗ್ಗೆ ಅನಿರೀಕ್ಷಿತವಾದ ಉತ್ತಮ ಸುದ್ದಿಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತರುತ್ತದೆ.

### ಸಿಂಹ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ. ಇಲ್ಲವಾದರೆ ಅದು ಮನೆಯಲ್ಲಿನ ಶಾಂತಿಯನ್ನು ಹಾಳಾಗಿಸಬಹುದು.

### ಕನ್ಯಾ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ.

### ತುಲಾ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ. ಹೆಂಡತಿ ನಿಮ್ಮ ಜೀವನವನ್ನು ಬದಲಾಯಿಸಲು ಸಹಾಯ ಮಾಡುತ್ತಾಳೆ. ಇತರರನ್ನು ಊರುಗೋಲಾಗಿ ಅವಲಂಬಿಸುವ ವ್ಯಕ್ತಿಗಿಂತ ತನ್ನ ಜೀವನವನ್ನು ತಾನೇ ರೂಪಿಸಿಕೊಳ್ಳಬಯಸುವ ಒಬ್ಬ ಚೈತನ್ಯಯುಕ್ತ ವ್ಯಕ್ತಿಯಾಗಿ.

### ವೃಶ್ಚಿಕ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಧನು ರಾಶಿ

ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಮಕ್ಕಳು ನಿಮ್ಮ ಗೃಹಕೃತ್ಯಗಳನ್ನು ಮುಗಿಸುವಲ್ಲಿ ನಿಮಗೆ ಸಹಾಯ ಮಾಡುತ್ತಾರೆ. ತಮ್ಮ ಬಿಡುವಿನ ವೇಳೆಯಲ್ಲಿ ಈ ರೀತಿಯ ಚಟುವಟಿಕೆಗಳನ್ನು ಮಾಡಲು ಅವರಿಗೆ ಪ್ರೋತ್ಸಾಹಿಸಿ.

### ಮಕರ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕುಟುಂಬದಲ್ಲಿ ಕೆಲವು ಸ್ತ್ರೀ ಸದಸ್ಯರ ಆರೋಗ್ಯ ಚಿಂತೆಗೆ ಕಾರಣವಾಗಬಹುದು. ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು.

### ಕುಂಭ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ.

### ಮೀನ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ಸಹೋದ್ಯೋಗಿಗಳು ನಿಮಗೆ ಕೆಲಸದಲ್ಲಿ ಕ್ರಿಯಾತ್ಮಕ ಮತ್ತು ಪ್ರಗತಿಪರ ಬದಲಾವಣೆಯನ್ನು ಮಾಡಲು ಬೆಂಬಲಿಸುತ್ತಾರೆ.

## ಮಣಿಪುರದಲ್ಲಿ ಮತ್ತೆ ಭುಗಿಲೆದ್ದ ಹಿಂಸಾಚಾರ



**ಇಂಫಾಲ್:** ಮಣಿಪುರದಲ್ಲಿ ಮತ್ತೆ ಹಿಂಸಾಚಾರ ಭುಗಿಲೆದ್ದಿದೆ. ಮೈಥಿ ಸಮುದಾಯದ ನಾಯಕರನ್ನು ಬಂಧಿಸಿದ ಬಳಿಕ ಅನೇಕ ಪ್ರದೇಶಗಳಲ್ಲಿ ಪ್ರತಿಭಟನೆಗಳು ಪ್ರಾರಂಭವಾಗಿದೆ. ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಆಡಳಿತವು ರಾಜ್ಯದ 5 ಜಿಲ್ಲೆಗಳಲ್ಲಿ ಐದು ದಿನಗಳವರೆಗೆ ಇಂಟರ್ನೆಟ್ ಸೇವೆಗಳನ್ನು ಸ್ಥಗಿತಗೊಳಿಸಿದೆ.

ಈ ಜಿಲ್ಲೆಗಳಲ್ಲಿ ಹೆಚ್ಚಿನ ಸಂಖ್ಯೆಯ ಜನರು ಸೇರುವುದನ್ನು ಸಹ ನಿಷೇಧಿಸಲಾಗಿದೆ. ವದಂತಿಗಳನ್ನು ಹರಡದಂತೆ ಮತ್ತು ಅವುಗಳನ್ನು ತಪ್ಪಿಸುವಂತೆ ಆಡಳಿತವು ಜನರಿಗೆ ಮನವಿ ಮಾಡಿದೆ. ಮಣಿಪುರದಲ್ಲಿ, ತಡರಾತ್ರಿ 11.45 ರಿಂದ 5 ಇಂಫಾಲ್ ಪಶ್ಚಿಮ, ಇಂಫಾಲ್ ಪೂರ್ವ, ತೌಬಲ್, ವಿಷ್ಣುಪುರ ಮತ್ತು ಕಾಕ್ಚಿಂಗ್ ಈ ಜಿಲ್ಲೆಗಳಲ್ಲಿ ಇಂಟರ್ನೆಟ್ ಮತ್ತು ಮೊಬೈಲ್ ಡೇಟಾ ಸೇವೆಗಳನ್ನು 5 ದಿನಗಳವರೆಗೆ ಸ್ಥಗಿತಗೊಳಿಸಲು ನಿರ್ಧರಿಸಲಾಗಿದೆ.

ಆಡಳಿತ ಮಂಡಳಿ ಹೊರಡಿಸಿದ ಆದೇಶದಲ್ಲಿ, ವದಂತಿಗಳು ಮತ್ತು ಪ್ರಚೋದನೆಗಳನ್ನು ತಡೆಗಟ್ಟಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪಷ್ಟವಾಗಿ ಹೇಳಲಾಗಿದೆ. ಅಂತಹ ಪರಿಸ್ಥಿತಿಯಲ್ಲಿ, ಯಾರಾದರೂ ಆದೇಶವನ್ನು ಉಲ್ಲಂಘಿಸಿದರೆ, ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದೆ.

ಮೈಥಿ ಸಮುದಾಯದ ಐದು ಅರಾಂಬೈ ಟೆಂಗೋಲ್ ಸ್ವಯಂಸೇವಕರನ್ನು ಬಂಧಿಸಲಾಗಿದೆ. ಮಣಿಪುರ ಆಡಳಿತವು ಈ ಹಠಾತ್ ಬೆಳವಣಿಗೆಯ ಬಗ್ಗೆ ಇನ್ನೂ ಯಾವುದೇ ಅಧಿಕೃತ ಹೇಳಿಕೆಯನ್ನು ನೀಡಿಲ್ಲ. ಇದು ಮತ್ತೊಮ್ಮೆ ರಾಜ್ಯದಲ್ಲಿ ಅಶಾಂತಿಯನ್ನು ಹುಟ್ಟುಹಾಕಿದೆ.

ಮಣಿಪುರದಲ್ಲಿ ನಡೆದ ಹಿಂಸಾಚಾರದಲ್ಲಿ ಇಲ್ಲಿಯವರೆಗೆ 258 ಜನರು ಪ್ರಾಣ ಕಳೆದುಕೊಂಡಿದ್ದಾರೆ. 5,600 ಕ್ಕೂ ಹೆಚ್ಚು ಸರ್ಕಾರಿ ಶಸ್ತ್ರಾಸ್ತ್ರಗಳು ಮತ್ತು 6.5 ಲಕ್ಷ ಸುತ್ತು ಮದ್ದುಗುಂಡುಗಳನ್ನು ಲೂಟಿ ಮಾಡಲಾಗಿದೆ. 60,000 ಕ್ಕೂ ಹೆಚ್ಚು ಜನರು ಸ್ಥಳಾಂತರಗೊಂಡಿದ್ದಾರೆ ಮತ್ತು ಸಾವಿರಾರು ಜನರು ಇನ್ನೂ ಪರಿಹಾರ ಶಿಬಿರಗಳಲ್ಲಿ ವಾಸಿಸುತ್ತಿದ್ದಾರೆ.

ಫೆಬ್ರವರಿ 9 ರಂದು, ರಾಜ್ಯದ ಮುಖ್ಯಮಂತ್ರಿ ಬಿರೇನ್ ಸಿಂಗ್ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು. ರಾಜ್ಯದಲ್ಲಿ ಸುಮಾರು ಎರಡು ವರ್ಷಗಳ ಕಾಲ ನಡೆದ ಕೋಮು ಹಿಂಸಾಚಾರದ ನಂತರ ಅವರು ರಾಜೀನಾಮೆ ನೀಡಿದರು. ಇದೇ ಕಾರಣಕ್ಕಾಗಿ ಅವರು ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿದ್ದರು. ಅದರ ನಂತರ ವಿಧಾನಸಭೆಯನ್ನು ಸ್ಥಗಿತಗೊಳಿಸಲಾಯಿತು ಮತ್ತು ಫೆಬ್ರವರಿ 14 ರಂದು ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಹೇರಲಾಗಿದೆ.

## ಬಕ್ರೀದ್ ಪ್ರಾರ್ಥನೆಯಿಂದ ದೂರ ಉಳಿದ ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತದಿಂದಾಗಿ ಅನ್ಯಮನಸ್ಕರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬಕ್ರೀದ್ ಪ್ರಾರ್ಥನೆಯಲ್ಲಿ ಭಾಗವಹಿಸದೇ ಮನೆಯಲ್ಲೇ ಉಳಿದಿದ್ದರು.

ಸಾಮಾನ್ಯವಾಗಿ ಬಕ್ರೀದ್, ರಂಜಾನ್ ಹಬ್ಬಗಳಲ್ಲಿ ಮುಖ್ಯಮಂತ್ರಿಯವರು ಚಾಮರಾಜಪೇಟೆಯ ಈದ್ಗಾ ಮೈದಾನದಲ್ಲಿ ನಡೆಯುವ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸುವುದು ವಾಡಿಕೆ. ಮುಖ್ಯಮಂತ್ರಿಯಾದಾಗಿ ನಿಂದಲೂ ಎಂತಹ ಸಂದರ್ಭದಲ್ಲೂ ಪ್ರಾರ್ಥನೆಯಿಂದ ದೂರ ಉಳಿದಿರಲಿಲ್ಲ.

ವಿರೋಧಪಕ್ಷದ ನಾಯಕರಾಗಿದ್ದಾಗಲೂ ಕೂಡ ಪ್ರಾರ್ಥನೆಯಲ್ಲಿ ಭಾಗವಹಿಸಿ ಮುಸ್ಲಿಂ ಬಾಂಧವರಿಗೆ ಶುಭ ಹಾರೈಸುತ್ತಿದ್ದರು.

ಆದರೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತ ಪ್ರಕರಣ ಇಡೀ ಸರ್ಕಾರವನ್ನೆ ಭಾರೀ ಮುಜುಗರಕ್ಕೀಡು ಮಾಡಿದೆ.

ಸಿದ್ದರಾಮಯ್ಯನವರಂತೂ ಕಳೆದ ಮೂರು ದಿನಗಳಿಂದಲೂ ಅನ್ಯಮನಸ್ಕರಾಗಿಯೇ ಉಳಿದಿದ್ದಾರೆ. ಸಂಪುಟ ಸಭೆಯಲ್ಲಂತೂ ಅತೀವವಾದ ದುಃಖ ತೋಡಿಕೊಂಡರೆಂದು ಹೇಳಲಾಗಿದೆ.ಸಚಿವ ಜಮೀರ್‌ಅಹಮದ್ ಖಾನ್ ಪ್ರತೀ ಹಬ್ಬದ ಸಂದರ್ಭದಲ್ಲೂ ಮುಖ್ಯಮಂತ್ರಿಯಾದವರನ್ನು ಈದ್ಗಾ ಮೈದಾನಕ್ಕೆ ಕರೆದುಕೊಂಡು ಪ್ರಾರ್ಥನೆಯೊಂದಿಗೆ ಭಾವಹಿಸುವಂತೆ ಮಾಡುವುದು ಸಾಮಾನ್ಯ.

ಈ ಹಿಂದೆ ಜಾತ್ಯತೀತ ಜನತಾದಳದಲ್ಲಿದ್ದಾಗ ಮುಖ್ಯಮಂತ್ರಿಯಾಗಿದ್ದ ಎಚ್.ಡಿ.ಕುಮಾರಸ್ವಾಮಿ ಈದ್ಗಾ ಮೈದಾನದಲ್ಲಿ ಭಾಗವಹಿಸಲು ಬರಲಿಲ್ಲ ಎಂಬ ಕಾರಣಕ್ಕಾಗಿಯೇ ಜಮೀರ್ ಬಹಿರಂಗ ಅಸಮಾಧಾನ ವ್ಯಕ್ತಪಡಿಸಿ ವಿವಾದ ಸೃಷ್ಟಿಸಿದ್ದರು. ಅಲ್ಲಿಂದ ಕುಮಾರಸ್ವಾಮಿ ಹಾಗೂ ಜಮೀರ್ ಅಹಮದ್ ಖಾನ್ ಅವರ ಸಂಬಂಧ ಹಳಸಿದ್ದು ಬಹಿರಂಗವಾಗಿ ಕಾಣತೊಡಗಿತ್ತು.

ಈಗ ಸಿದ್ದರಾಮಯ್ಯನವರನ್ನು ಸಾಮೂಹಿಕ ಪ್ರಾರ್ಥನೆಗೆ ಕರೆದುಕೊಂಡು ಹೋಗಲು ಜಮೀರ್ ಪ್ರಯತ್ನಿಸಿದ್ದರು ಎಂದು ಹೇಳಲಾಗಿದೆ. ಆದರೆ ಎಲ್ಲೂ ಬರುವುದಿಲ್ಲ ಎಂದು ಹೇಳಿರುವ ಸಿದ್ದರಾಮಯ್ಯ ಮನೆಯಲ್ಲೇ ಉಳಿದಿದ್ದರು ಎಂದು ಹೇಳಲಾಗಿದೆ.

## ಸಿದ್ದರಾಮಯ್ಯ–ಶಿವಕುಮಾರ್ ಬಂಧನ ಯಾಕಿಲ್ಲ..? : ಜೆಡಿಎಸ್



**ಬೆಂಗಳೂರು:** ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದ ದುರಂತವು ಕಾಂಗ್ರೆಸ್ ಸರ್ಕಾರದ ಪ್ರಾಯೋಜಿತ ಕೊಲೆ ಎಂದು ಆರೋಪಿಸಿರುವ ಜೆಡಿಎಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಂಧನ ಯಾಕಿಲ್ಲ? ಎಂದು ಪ್ರಶ್ನಿಸಿದೆ.

ಈ ಸಂಬಂಧ ತನ್ನ ಎಕ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಆರ್‌ಸಿಬಿ ವಿಜಯೋತ್ಸವದಲ್ಲಿ ಪ್ರಚಾರ ಪಡೆಯಲು ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ಪೈಪೋಟಿಯೇ ಈ ಮಹಾದುರಂತಕ್ಕೆ ಕಾರಣ ಎಂದು ಆರೋಪಿಸಿದೆ.

ವಿಧಾನಸೌಧದ ಮುಂಭಾಗ ದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಮುಖ್ಯ ಅತಿಥಿ.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಮುಖ್ಯ ಅತಿಥಿ. ಇವರಿಬ್ಬರ ರಾಜಕೀಯ ಪ್ರತಿಷ್ಠೆ. ನಾನೇ ಎಂಬ ಅಹಂಗೆ ಅಮಾಯಕ ಜೀವಗಳನ್ನು ಬಲಿತೆಗೆದುಕೊಂಡಿದ್ದಾಗಿದೆ ಎಂದು ಹೇಳಿದೆ.

ಕಾಲ್ತುಳಿತ ದುರಂತದ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಕಾಂಗ್ರೆಸ್ ಸರ್ಕಾರ ಆರ್‌ಸಿಬಿ ಮತ್ತು ಕೆಎಸ್‌ಸಿಎ ವಿರುದ್ಧ ದೂರು ದಾಖಲಿಸಿದೆ ಎಂದು ಆರೋಪಿಸಿದೆ. ಸಿಎಂ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವೈಫಲ್ಯದ ಬಗ್ಗೆ ಎದ್ದಿರುವ ಜನಾಕ್ರೋಶದ ಗಮನವನ್ನು ಬೇರೆಡೆ ಸೆಳೆಯಲು ಸ್ಟಾರ್ ಆಟಗಾರ ವಿರಾಟ್ ಕೊಹ್ಲಿಯನ್ನೂ ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಜೆಡಿಎಸ್ ಆಪಾದಿಸಿದೆ.

ನಗರದಲ್ಲಿ ಎರಡು ಕಡೆ ಏಕಕಾಲದಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿದರೆ ಭದ್ರತೆ ಹಾಗೂ ಜನದಟ್ಟಣೆ ನಿಯಂತ್ರಣ ಮಾಡುವುದು ಕಷ್ಟ ಎಂಬ ಪೊಲೀಸರ ಎಚ್ಚರಿಕೆಯ ಮಾತುಗಳನ್ನು ಧಿಕ್ಕರಿಸಿ, ಆರ್‌ಸಿಬಿ ದಿಗ್ವಿಜಯದ ಕ್ರೆಡಿಟ್ ಪಡೆಯಲು ರಾಜ್ಯ ಸರ್ಕಾರ ಹಠಕ್ಕೆ ಬಿದ್ದು ಸಮಾರಂಭ ನಡೆಸಿ 11 ಮುಗ್ಧ ಜೀವಗಳನ್ನು ಬಲಿ ಪಡೆದಿದೆ ಎಂದು ದೂರಿದೆ.

ಕಾಲ್ತುಳಿತ ಮಹಾದುರಂತದ ಬಗ್ಗೆ ದೇಶಾದ್ಯಂತ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳು, ಭದ್ರತಾ ಎಡವಟ್ಟುಗಳು ಜಗಜ್ಜಾಹೀರಾಗಿ ಸುದ್ದಿಯಾಗುತ್ತಿದೆ. ಹೊಣೆಗೇಡಿ ಕಾಂಗ್ರೆಸ್ ಸರ್ಕಾರ ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾಗಿದೆ. ಮತ್ತೊಂದೆಡೆಟಿಜಜಜಟಿಜಜಡೆ ಕುತಂತ್ರದಿಂದ ವಿರಾಟ್ ಕೊಹ್ಲಿ ವಿರುದ್ಧವೂ ದೂರು ನೀಡಲಾಗಿದೆ ಎಂದು ಆರೋಪಿಸಿದೆ.

## ಚಿನ್ನಸ್ವಾಮಿ ಸ್ಟೇಡಿಯಂಗೆ ಬಿಬಿಎಂಪಿ ನೋಟೀಸ್




**ಬೆಂಗಳೂರು:** ಕಳೆದ ಹಲವಾರು ವರ್ಷಗಳಿಂದ ಜಾಹೀರಾತು ತೆರಿಗೆ ಪಾವತಿಸದೆ ಕಳ್ಳಾಟವಾಡುತ್ತಿದ್ದ ಕೆಎಸ್‌ಸಿಎಗೆ ಬಿಬಿಎಂಪಿ ನೋಟೀಸ್ ಜಾರಿ ಮಾಡಿದೆ. ಯಾವುದೇ ಕ್ರೀಡಾಂಗಣದ ಒಳಭಾಗ ಹಾಗೂ ಹೊರಭಾಗಗಳಲ್ಲಿ ಜಾಹೀರಾತು ಪ್ರದರ್ಶಿಸಿದರೆ ಕಾನೂನಿನಂತೆ ಅವರು ಬಿಬಿಎಂಪಿಯವರಿಗೆ ತೆರಿಗೆ ಪಾವತಿಸಬೇಕು. ಆದರೆ, ಕಳೆದ ಹಲವಾರು ವರ್ಷಗಳಿಂದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಜಾಹೀರಾತು ಅಳವಡಿಸಿಕೊಂಡು ಬರಲಾಗುತ್ತಿದೆ. ಪ್ರದರ್ಶನವಾಗುವ ಜಾಹೀರಾತಿಗೆ ತೆರಿಗೆ ನೀಡಿ ಎಂದರೆ ಕೆಎಸ್‌ಸಿಎ ಅವರು ಕಿವಿ ಮೇಲೆ ಹಾಕಿಕೊಳ್ಳುತ್ತಿರಲಿಲ್ಲ. ನೋಟೀಸ್ ನೀಡಿದರೂ ಡೋಂಟ್ ಕೇರ್ ಎನ್ನುತ್ತಿದ್ದರು. ಕ್ರಿಕೆಟ್ ಸಂಸ್ಥೆಯವರ ಈ ಧೋರಣೆಯಿಂದ ಬಿಬಿಎಂಪಿಗೆ ಹತ್ತಾರು ಕೋಟಿ ರೂ.ಗಳ ನಷ್ಟ ಸಂಭವಿಸಿತ್ತು. ಇದೀಗ ಸಿಕ್ಕ ಅವಕಾಶವನ್ನು ಸದುಪಯೋಗ ಪಡಿಸಿಕೊಂಡಿರುವ ಪಾಲಿಕೆ ಅಧಿಕಾರಿಗಳು ಬಾಕಿ ತೆರಿಗೆ ಪಾವತಿಸುವಂತೆ ಮತ್ತೊಂದು ನೋಟೀಸ್ ನೀಡಿ ಬಿಸಿ ಮುಟ್ಟಿಸಿದ್ದಾರೆ.

ಕಳೆದ ಹಲವು ವರ್ಷಗಳಿಂದ ಮ್ಯಾಚ್ ನಡೆಯುವಾಗ ಎಲ್‌ಇಡಿ ಸೇರಿದಂತೆ ಅನೇಕ ಜಾಹೀರಾತು ಬೋರ್ಡ್ ಗಳು ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಅಳವಡಿಕೆ ಮಾಡಿ ಅನಧಿಕೃತವಾಗಿ ಜಾಹೀರಾತು ಪ್ರದರ್ಶಿಸುತ್ತಿದ್ದೀರಿ. ಪಾಲಿಕೆಯಿಂದ ಜಾಹೀರಾತು ಅಳವಡಿಕೆಗೆ ಅನುಮತಿ ಪಡೆದಿಲ್ಲ ಇದು ಕೂಡ ಕಾನೂನು ಬಾಹಿರ.

ಈ ಬಗ್ಗೆ ಈಗಾಗಲೇ ನೋಟೀಸ್ ಕೊಟ್ಟಿದ್ರು ಉತ್ತರ ನೀಡುತ್ತಿಲ್ಲ ಎಂದು ನೋಟೀಸ್‌ನಲ್ಲಿ ಎಚ್ಚರಿಸಲಾಗಿದೆ. ಜಾಹೀರಾತು ಶುಲ್ಕದ ಜೊತೆ ದಂಡದ ಪ್ರಯೋಗಕ್ಕೂ ಮುಂದಾಗಿರುವ ಬಿಬಿಎಂಪಿ ಅಧಿಕಾರಿಗಳು ಈ ಬಾರಿ ಶುಲ್ಕ ಪಾವತಿಸದಿದ್ದರೆ ದಂಡ ವಿಧಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

## ಕಾಂಗ್ರೆಸ್ ಹೈಕಮಾಂಡ್‌ಗೆ ಶೋಭಾ ಕರಂದ್ಲಾಜೆ ಬಹಿರಂಗ ಸವಾಲ್



**ಬೆಂಗಳೂರು:** ಕಾಂಗ್ರೆಸ್ ಹೈಕಮಾಂಡ್‌ಗೆ ದಮು, ತಾಕತ್ತು ಇದ್ದರೆ ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ಪ್ರಕರಣ ಸಂಬಂಧ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಅವರಿಂದ ರಾಜೀನಾಮೆ ಪಡೆಯಲಿ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಬಹಿರಂಗ ಸವಾಲು ಹಾಕಿದರು.

ಪ್ರತಿಯೊಂದರಲ್ಲೂ ಮೂಗು ತೂರಿಸುವ ಕಾಂಗ್ರೆಸ್ ಹೈಕಮಾಂಡ್ ಇಷ್ಟೊಂದು ದೊಡ್ಡ ಘಟನೆ ನಡೆದಿದ್ದರೂ ಒಂದೇ ಒಂದು ಸಾಂತ್ವಾನವನ್ನೂ ಹೇಳಿಲ್ಲ. ಬದಲಾಗಿ ಸರ್ಕಾರವನ್ನು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಸಮರ್ಥಿಸಿಕೊಳ್ಳುತ್ತಿದೆ. ಅವರ ರಾಜೀನಾಮೆ ಪಡೆಯಲು ನಿಮಗೆ ಧಮು ತಾಕತ್ತು ಇಲ್ಲವೇ ಎಂದು ಪ್ರಶ್ನೆ ಮಾಡಿದರು.

ಪಕ್ಷದ ಕಚೇರಿಯಲ್ಲಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್.ಹರೀಶ್, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ ಅವರ ಜೊತೆ ಜಂಟಿ ಪತ್ರಿಕಾಗೋಷ್ಠಿ ನಡೆಸಿದ ಅವರು, ತಮ ಮಾತಿನುದ್ದಕ್ಕೂ ಕಾಂಗ್ರೆಸ್ ಸರ್ಕಾರ ಹಾಗೂ ಹೈಕಮಾಂಡ್ ವಿರುದ್ಧ ಬೆಂಕಿ ಉಗುಳಿದರು.

ಈ ಪ್ರಕರಣಕ್ಕೆ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರೇ ನೇರ ಕಾರಣ. ಈ ಇಬ್ಬರು ತಮ ಸ್ಥಾನಕ್ಕೆ ಗೌರವಯುತವಾಗಿ ರಾಜೀನಾಮೆ ನೀಡಬೇಕು. ನಂತರ ತನಿಖಾಧಿಕಾರಿಗಳು ಇಬ್ಬರನ್ನು ಬಂಧಿಸಿ ವಿಚಾರಣೆಗೊಳಪಡಿಸಬೇಕೆಂದು ಒತ್ತಾಯಿಸಿದರು.

ಆರ್‌ಸಿಬಿ, ಡಿಎನ್‌ಎ ಮತ್ತಿತರರನ್ನು ತನಿಖಾಧಿಕಾರಿಗಳು ಬಂಧಿಸುವುದಾದರೆ ಸಿಎಂ ಮತ್ತು ಡಿಸಿಎಂ ಅವರುಗಳನ್ನು ಏಕೆ ಬಂಧಿಸಬಾರದು? ಈ ಪ್ರಕರಣದಲ್ಲಿ ಈ ಇಬ್ಬರೂ ಪ್ರಮುಖ ಆರೋಪಿಗಳಾಗಿದ್ದಾರೆ. ಎಲ್ಲದಕ್ಕೂ ಮೂಗು ತೂರಿಸುವ ಹೈಕಮಾಂಡ್‌ನವರು ಈಗ ಯಾಕೆ ಮೌನಕ್ಕೆ ಜಾರಿದ್ದಾರೆ? ಕಾಂಗ್ರೆಸ್ ಹೈಕಮಾಂಡ್ ನಾಯಕರು ಎಲ್ಲಿದ್ದೀರಪ್ಪ ಎಂದು ವ್ಯಂಗ್ಯವಾಡಿದರು.

ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ್, ಸುರ್ಜೆವಾಲ ಎಲ್ಲಿ ಹೋಗಿದ್ದಾರೆ? ನಿಮ ಕೈಗೆ ರಕ್ತ ಅಂಟಿಕೊಂಡಿದೆ. ಯಾವುದೇ ಕಾರಣಕ್ಕೂ ಅದನ್ನು ತೊಳೆದುಕೊಳ್ಳಲು ಸಾಧ್ಯವಿಲ್ಲ. ನಿಜವಾಗಿಯೂ ಎಐಸಿಸಿಗೆ ದಮು, ತಾಕತ್ತಿದ್ದರೆ ಸಿಎಂ–ಡಿಸಿಎಂ ವಿರುದ್ಧ ತನಿಖೆಗೆ ಆದೇಶಿಸಲಿ ಎಂದು ಸವಾಲು ಎಸೆದರು.

ಕರ್ನಾಟಕ ರಾಜ್ಯ ಶೋಕಾಚರಣೆಯಲ್ಲಿದೆ. ತಂದೆತಾಯಂದಿರು ಮಕ್ಕಳನ್ನು ಕಳೆದುಕೊಂಡಿದ್ದಾರೆ. ನನ್ನ ಕ್ಷೇತ್ರದಲ್ಲಿ ಒಬ್ಬ ಹುಡುಗ ತೀರಿಕೊಂಡು, ತಾಯಿ ತಂದೆ ಇಬ್ಬರು ಡಿಪ್ರೆಶನ್ ಗೆ ಹೋಗಿದ್ದಾರೆ, ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಕೈಯಲ್ಲಿ ರಕ್ತ ಅಂಟಿದೆ. ತಮ ಕೈಯಲ್ಲಿರುವ ರಕ್ತವನ್ನು ಪೊಲೀಸರ ಮೂತಿಗೆ ಒರೆಸುತ್ತಿದ್ದಾರೆ. ಒಬ್ಬ ಪ್ರಾಮಾಣಿಕ ಆಯುಕ್ತರಾಗಿದ್ದ ಬಿ.ದಯಾನಂದ್ ಅವರನ್ನು ಕಾರಣವಿಲ್ಲದೆ ಅಮಾನತು ಮಾಡಿದ್ದಾರೆ ಎಂದು ಕಿಡಿಕಾರಿದರು.

ಬೆಂಗಳೂರಿನ ಇತಿಹಾಸದಲ್ಲೆ ಇದೊಂದು ಕಪ್ಪು ಚುಕ್ಕೆ. ವಿಧಾನಸೌಧ ಇದುವರೆಗೂ ಇದ್ದಿದ್ದು ಪ್ರಮಾಣ ವಚನ ಕಾರ್ಯಕ್ರಮಕ್ಕಾಗಿ ಮಾತ್ರ. ಲೋಕೋಪಯೋಗಿಯವರು 25ರಿಂದ 35 ಜನರಿಗೆ ಮಾತ್ರ ಅವಕಾಶ ಎಂದಿದ್ದಾರೆ. ಆದರೆ ನಿಮ ಕುಟುಂಬದವರು, ಜಮಿರ್, ಸಿದ್ದರಾಮಯ್ಯ, ರಾಮಲಿಂಗರೆಡ್ಡಿ ಪರಿವಾರದವರೇ ವೇದಿಕೆಯಲ್ಲಿ ಇದ್ದರು ಎಂದು ವಾಗ್ದಾಳಿ ನಡೆಸಿದರು.

ಆರ್‌ಸಿಬಿ ವಿಜಯೋತ್ಸವವನ್ನು ಹೆಣದ ಮೇಲೆ ಮಾಡಿದ್ದೀರಿ. ಒಬ್ಬ ಜವಾಬ್ದಾರಿಯುತ ಸರ್ಕಾರ ಈ ರೀತಿ ಮಾಡಬಹುದೇ? ನಮ ಪೊಲೀಸರು ಹಿಂದಿನ ಮಧ್ಯರಾತ್ರಿವರೆಗೂ ಕೆಲಸ ಮಾಡಿದ್ದಾರೆ. ನೀವು ಅನುಮತಿ ಕೊಟ್ಟಿಲ್ಲ ಅಂದರೆ ಹೇಗೆ ಎರಡು ಆಚರಣೆ ಸಾಧ್ಯ ಎಂದು ಪ್ರಶ್ನಿಸಿದರು.

ಆರ್‌ಸಿಬಿ ವಿಜಯೋತ್ಸವಕ್ಕೆ ಅವಕಾಶ ಕೊಟ್ಟಿದ್ದರೆ ಪೊಲೀಸರನ್ನು ಯಾಕೆ ಅಮಾನತು ಮಾಡಿದ್ದೀರಾ..? ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಮೂರು ಗೇಟ್ ಮಾತ್ರ ತೆಗೆದಿದ್ದು, ಜನರು ಸೇರಿದಾಗ ಯಾಕೆ ಗೇಟ್‌ಗಳನ್ನು ಓಪನ್ ಮಾಡಲಿಲ್ಲ. ಮಾತು ಎತ್ತಿದರೆ ಪ್ರಯಾಗ್‌ನಲ್ಲಿ ಆಗಿಲ್ಲವೇ ಎನ್ನುತ್ತಾರೆ.

66 ಕೋಟಿಗೂ ಹೆಚ್ಚು ಪ್ರಯಾಗ್‌ರಾಜ್‌ಗೆ ಬಂದಿದ್ದಾರೆ. ಆದರೆ ನೀವು ಕೇವಲ ಎರಡು ಲಕ್ಷ ಜನರ ನಿಯಂತ್ರಣ ಮಾಡುವುದಕ್ಕೆ ಆಗಿಲಿಲ್ಲವೇ? ಎಂದು ಪ್ರಶ್ನಿಸಿದರು. ನಟ ಪುನೀತ್ ರಾಜ್‌ಕುಮಾರ್ ಅವರು ತೀರಿಕೊಂಡಾಗಲೂ, ಮುಂಜಾಗ್ರತಾ ಕ್ರಮ ವಹಿಸದೇ ಅಂತ್ಯಕ್ರಿಯೆಗೆ ಮಾಡಲಾಗಿತ್ತು. ಕೇವಲ ನಿಮ ಪ್ರಚಾರದ ಹುಚ್ಚಿಗಾಗಿ ಕರ್ನಾಟಕ ಹನ್ನೊಂದು ಮಕ್ಕಳು ಬಲಿಯಾಗಿದ್ದಾರೆ ಎಂದು ಆರೋಪಿಸಿದರು.

## ಕೊಲಂಬಿಯಾ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಮೇಲೆ ಗುಂಡಿನ ದಾಳಿ

**ನವದೆಹಲಿ:** ಕೊಲಂಬಿಯಾ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲು ನಿರ್ಧರಿಸಿದ್ದ ಸೆನೆಟರ್ ಮಿಗುಯಲ್ ಉರಿಬೆ ಅವರ ಮೇಲೆ ಗುಂಡಿನ ದಾಳಿ ನಡೆಸಲಾಗಿದೆ. ದುಷ್ಕರ್ಮಿಗಳು ಹಾರಿಸಿದ ಗುಂಡೇಟಿನಿಂದ ತೀವ್ರವಾಗಿ ಗಾಯಗೊಂಡಿರುವ ಉರಿಬೆ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು ಅವರ ಸ್ಥಿತಿ ಚಿಂತಾಜನಕವಾಗಿದೆ ಎಂದು ತಿಳಿದುಬಂದಿದೆ.

2026 ರಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸುತ್ತಿರುವ 39 ವರ್ಷದ ಸೆನೆಟರ್ ಮಿಗುಯಲ್ ಉರಿಬೆ ಅವರು ಮಾಜಿ ಕೊಲಂಬಿಯಾದ ಅಧ್ಯಕ್ಷ ಅಲ್ವಾರೊ ಉರಿಬೆ ಸ್ಥಾಪಿಸಿದ ವಿರೋಧ ಪಕ್ಷದ ಸಂಪ್ರದಾಯವಾದಿ ಡೆಮಾಕ್ರಟಿಕ್ ಸೆಂಟರ್ ಪಕ್ಷದ ಸದಸ್ಯರಾಗಿದ್ದಾರೆ.

ದಾಳಿಯನ್ನು ಖಂಡಿಸುವ ಪಕ್ಷದ ಹೇಳಿಕೆಯ ಪ್ರಕಾರ, ಉರಿಬೆ ರಾಜಧಾನಿಯ ಫಾಂಟಿಬಾನ್ ನೆರೆಹೊರೆಯಲ್ಲಿರುವ ಸಾರ್ವಜನಿಕ ಉದ್ಯಾನವನದಲ್ಲಿ ಪ್ರಚಾರ ಕಾರ್ಯಕ್ರಮವನ್ನು ಆಯೋಜಿಸುತ್ತಿದ್ದಾಗ ಸಶಸ್ತ್ರ ವ್ಯಕ್ತಿಗಳು ಅವರ ಬೆನ್ನಿಗೆ ಗುಂಡು ಹಾರಿಸಿದರು.

ಈ ದಾಳಿಯನ್ನು ಗಂಭೀರ ಎಂದು ಪಕ್ಷ ಬಣ್ಣಿಸಿದೆ, ಆದರೆ ಉರಿಬೆ ಅವರ ಸ್ಥಿತಿಯ ಕುರಿತು ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸಿಲ್ಲ. ಗುಂಡಿನ ದಾಳಿಯಲ್ಲಿ ಶಂಕಿತನನ್ನು ಬಂಧಿಸಲಾಗಿದೆ ಮತ್ತು ಇತರರು ಭಾಗಿಯಾಗಿದ್ದಾರೆಯೇ ಎಂದು ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ ಎಂದು ಕೊಲಂಬಿಯಾದ ರಕ್ಷಣಾ ಸಚಿವ ಪೆಟ್ರೊ ಸ್ಯಾಂಚೆಜ್ ಹೇಳಿದ್ದಾರೆ. ಉರಿಬೆ ಚಿಕಿತ್ಸೆ ಪಡೆಯುತ್ತಿರುವ ಆಸ್ಪತ್ರೆಗೆ ತಾನು ಭೇಟಿ ನೀಡಿದ್ದಾಗಿ ಸ್ಯಾಂಚೆಜ್ ಹೇಳಿದ್ದಾರೆ.

ಕೊಲಂಬಿಯಾದ ಅಧ್ಯಕ್ಷ ಸ್ಥಾನವು ಸರ್ಕಾರವು ಖಂಡಿತವಾಗಿ ಮತ್ತು ಬಲವಂತವಾಗಿ ಹಿಂಸಾತ್ಮಕ ದಾಳಿಯನ್ನು ತಿರಸ್ಕರಿಸಿದೆ ಮತ್ತು ನಡೆದ ಘಟನೆಗಳ ಬಗ್ಗೆ ಸಂಪೂರ್ಣ ತನಿಖೆಗೆ ಕರೆ ನೀಡಿದೆ ಎಂದು ಹೇಳಿಕೆ ನೀಡಿದೆ.

ಉರಿಬೆ ಕೊಲಂಬಿಯಾದ ಪ್ರಮುಖ ಕುಟುಂಬದಿಂದ ಬಂದವರಾಗಿದ್ದು, ದೇಶದ ಲಿಬರಲ್ ಪಕ್ಷದೊಂದಿಗೆ ಸಂಪರ್ಕ ಹೊಂದಿದ್ದಾರೆ. ಅವರ ತಂದೆ ಉದ್ಯಮಿ ಮತ್ತು ಯೂನಿಯನ್ ನಾಯಕರಾಗಿದ್ದರು. ಅವರ ತಾಯಿ, ಪತ್ರಕರ್ತೆ ಡಯಾನಾ ಟರ್ಬೇ ಅವರನ್ನು 1990 ರಲ್ಲಿ ದಿವಂಗತ ಕಾರ್ಟೆಲ್ ನಾಯಕ ಪ್ಯಾಬ್ಲೊ ಎಸ್ಕೋಬಾರ್ ನೇತೃತ್ವದಲ್ಲಿ ಸಶಸ್ತ್ರ ಗುಂಪು ಅಪಹರಿಸಿತು.

ರಕ್ಷಣಾ ಕಾರ್ಯಾಚರಣೆಯ ಸಮಯದಲ್ಲಿ ಅವರು ಕೊಲ್ಲಲ್ಪಟ್ಟರು. ಕೊಲಂಬಿಯಾ ದಶಕಗಳಿಂದ ಎಡಪಂಥೀಯ ಬಂಡುಕೋರರು, ಬಲಪಂಥೀಯ ಅರೆಸೈನಿಕರಿಂದ ಬಂದ ಅಪರಾಧ ಗುಂಪುಗಳು ಮತ್ತು ಸರ್ಕಾರದ ನಡುವಿನ ಸಂಘರ್ಷದಲ್ಲಿ ಸಿಲುಕಿಕೊಂಡಿದೆ. ಎಡಪಂಥೀಯ ಅಧ್ಯಕ್ಷ ಗುಸ್ತಾವೊ ಪೆಟ್ರೋ ಅವರು ನಲ್ಲಿ ಸಂದೇಶವೊಂದರಲ್ಲಿ ಸೆನೆಟರ್ ಅವರ ಕುಟುಂಬದೊಂದಿಗೆ ಸಹಾನುಭೂತಿ ಹೊಂದಿ, ನಿಮ್ಮ ನೋವನ್ನು ಹೇಗೆ ಕಡಿಮೆ ಮಾಡಬೇಕೆಂದು ನನಗೆ ತಿಳಿದಿಲ್ಲ. ಇದು ಕಳೆದುಹೋದ ತಾಯಿಯ ನೋವು ಮತ್ತು ತಾಯ್ನಾಡಿನ ನೋವು ಎಂದು ಹೇಳಿದರು.

## ರಾಜ್ಯದಲ್ಲಿ ಜೂ.9ರಿಂದ ಮತ್ತೆ ಮಳೆ



**ಬೆಂಗಳೂರು:** ರಾಜ್ಯದಲ್ಲಿ ಕಳೆದ 8–10 ದಿನಗಳಿಂದ ದುರ್ಬಲಗೊಂಡಿದ್ದ ನೈರುತ್ಯ ಮುಂಗಾರು ಮತ್ತೆ ಚೇತರಿಸಿಕೊಂಡಿದೆ. ರಾಜ್ಯದಲ್ಲಿ ಮತ್ತೊಂದು ಸುತ್ತಿನ ಮಳೆ ಆರಂಭವಾಗಲಿದೆ. ಇಂದಿನಿಂದ ರಾಜ್ಯದ ಕೆಲವೆಡೆ ಚದುರಿದಂತೆ ಮಳೆಯಾಗಲಿದ್ದು, ಜೂ.9ರಿಂದ ಮಳೆಯ ಪ್ರಮಾಣ ಹೆಚ್ಚಾಗಲಿದೆ.

ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನಲೆಯಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿದ್ದು, ರಾಜ್ಯದ ಹಲವೆಡೆ ಇಂದಿನಿಂದ ಮಳೆ ಆರಂಭವಾಗಲಿದೆ ಎಂದು ಹವಾಮಾನ ಇಲಾಖೆಯ ಬೆಂಗಳೂರು ಕೇಂದ್ರದ ನಿರ್ದೇಶಕ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

ಇಂದು ಮತ್ತು ನಾಳೆ ರಾಜ್ಯದ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಜೂ.9ರಿಂದ 13ರವರೆಗೆ ರಾಜ್ಯಾದ್ಯಂತ ವ್ಯಾಪಕ ಮಳೆಯಾಗುವ ಮುನ್ಸೂಚನೆಗಳಿವೆ. ಅಲ್ಲದೆ ಈ ಅವಧಿಯಲ್ಲಿ ಮಳೆಯ ಪ್ರಮಾಣ ಗಣನೀಯವಾಗಿ ಹೆಚ್ಚಾಗಲಿದೆ ಎಂದು ಅವರು ಹೇಳಿದ್ದಾರೆ. ರಾಜಧಾನಿ ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡ ಕವಿದ ವಾತಾವರಣ ಕಂಡುಬರಲಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ ಎಂದು ತಿಳಿಸಿದ್ದಾರೆ.


## ರಾಜ್ಯದಲ್ಲಿ 800 ಗಡಿ ದಾಟಿದ ಕೊರೋನಾ ಪ್ರಕರಣಗಳ ಸಂಖ್ಯೆ

**ಬೆಂಗಳೂರು:** ರಾಜ್ಯದಲ್ಲಿ ಕೊರೊನಾ ಸೋಂಕಿನ ಪ್ರಕರಣಗಳ ಸಂಖ್ಯೆ 800ರ ಗಡಿ ದಾಟಿದೆ.ರಾಜ್ಯದಲ್ಲಿ ಇದುವರೆಗೂ 837 ಪ್ರಕರಣಗಳು ವರದಿಯಾಗಿವೆ. ಇದರಲ್ಲಿ ಒಟ್ಟು 444 ಸಕ್ರಿಯ ಕೋವಿಡ್ ಪ್ರಕರಣಗಳಿರುವುದು ವಿಶೇಷವಾಗಿದೆ. ನಿನ್ನೆ ಒಂದೇ ದಿನ 41ಜನರಿಗೆ ಕೋವಿಡ್ ಪಾಸಿಟಿವ್ ಕಾಣಿಸಿಕೊಂಡಿದೆ.

ಇಲ್ಲಿಯವರೆಗೂ 386ಜನ ಡಿಸ್ಚಾರ್ಜ್ ಆಗಿದ್ದರೆ 444ಜನ ಹೋಮ್ ಐಸೋಲೇಷನ್‌ನಲ್ಲಿದ್ದಾರೆ. ಸದ್ಯ ಕೊವಿಡ್ ಪಾಸಿಟಿವ್ ರೇಟ್ ಶೇ. 7.1ರಷ್ಟಿದೆ.ಈ ಲಕ್ಷಣಗಳನ್ನು ನೋಡುತ್ತಿದ್ದಾರೆ ರಾಜ್ಯದಲ್ಲಿ ಮತ್ತೆ ಕೊರೊನಾ ಮಹಾಮಾರಿ ಒಕ್ಕರಿಸುವ ಸಾಧ್ಯತೆಗಳಿವೆ ಎನ್ನಲಾಗಿದೆ.

ಆದರೂ ತಜ್ಞ ವೈದ್ಯರು ಈ ಬಾರಿಯ ಕೊರೊನಾ ಸೋಂಕು ಮಾರಣಾಂತಿಕವಾಗಿಲ್ಲ ಎಂದು ಅಭಯ ನೀಡಿದ್ದಾರೆ. ಆದರೂ ಜನ ಕೊರೊನಾ ಮಹಾಮಾರಿಯಿಂದ ತಪ್ಪಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಅವಶ್ಯಕವಾಗಿದೆ.

# ಪ್ರತಿ ಐವರು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ: ಅಧ್ಯಯನ ಬಹಿರಂಗ




**ನವದೆಹಲಿ:** ಭಾರತೀಯರು ಗುಪ್ತ ಆರೋಗ್ಯ ಸಮಸ್ಯೆಯ ಸಂಕಷ್ಟದಲ್ಲಿ ಸಿಲುಕಿಹಾಕಿಕೊಂಡಿದ್ದಾರೆಯೇ? ಇತ್ತೀಚಿನ ಅಧ್ಯಯನವೊಂದರ ಪ್ರಕಾರ, ಪ್ರತಿ ಐದು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ ಎಂದು ತಿಳಿದುಬಂದಿದೆ. ಜನರ ಜೀವನಶೈಲಿ, ಆಹಾರ ಪದ್ಧತಿ ಮತ್ತು ನೀತಿ ನಿರೂಪಣೆಯಲ್ಲಿನ ನ್ಯೂನತೆಗಳಿಂದಾಗಿ ಆರೋಗ್ಯ ಸಮಸ್ಯೆಗಳು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿ ಕಾಡುತ್ತಿವೆ ಎಂಬ ಆತಂಕಕಾರಿ ಅಂಕಿಅಂಶಗಳನ್ನು ಅಧ್ಯಯನವು ತೋರಿಸಿದೆ.

ಭಾರತೀಯ ಅಂತಾರಾಷ್ಟ್ರೀಯ ಆರ್ಥಿಕ ಸಂಬಂಧಗಳ ಸಂಶೋಧನಾ ಮಂಡಳಿ (ಖಅಖಿಇಖಿ) ಮತ್ತು ಒಪಿಜಿಯಾ ಫೌಂಡೇಶನ್ ನಡೆಸಿದ ಸಂಶೋಧನೆ ಪ್ರಕಾರ, ದೇಶದ ನೀತಿ ನಿರೂಪಕರು, ಆರೋಗ್ಯ ವೃತ್ತಿಪರರು ಮತ್ತು ಶಿಕ್ಷಣ ತಜ್ಞರು ಸೇರಿದಂತೆ 300 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಈ ವಿಷಯ ಬಹಿರಂಗವಾಗಿದೆ.

ಭಾರತ ದೇಶದ ಪೂರ್ವ ಪ್ರದೇಶದಲ್ಲಿ ವಿಟಮಿನ್ ಡಿ ಕೊರತೆಯು ಹೆಚ್ಚಾಗಿದೆ. ಹದಿಹರೆಯದವರು, ಶಿಶುಗಳು, ವೃದ್ಧರು ಮತ್ತು ಎಲ್ಲಾ ವಯೋಮಾನದ ಮಹಿಳೆಯರು ವಿಟಮಿನ್ ಡಿ ಕೊರತೆಯಿಂದ ಹೆಚ್ಚು ಬಳಲುತ್ತಿದ್ದಾರೆ. ನಗರ ಪ್ರದೇಶದ ಜನರ ಜೀವನಶೈಲಿ ಮತ್ತು ಸೂರ್ಯನ ಬೆಳಕಿಗೆ ಸೀಮಿತ ಒಡ್ಡಿಕೊಳ್ಳುವಿಕೆಯಿಂದಾಗಿ, ಗ್ರಾಮೀಣ ಪ್ರದೇಶವರಿಗಿಂತ ಕಾಯಿಲೆಗಳಿಗೆ ಹೆಚ್ಚಾಗಿ ಒಳಗಾಗುತ್ತಿದ್ದಾರೆ.

ವಿಟಮಿನ್ ಡಿ ಕೊರತೆಯು ರಿಕೆಟ್ಸ್ ಮತ್ತು ಅಸ್ಥಿಯೋಮಲೇಶಿಯಾದಂತಹ ಅಸ್ಥಿಪಂಜರದ ಅಸ್ವಸ್ಥತೆಗಳನ್ನು ಮೀರಿ ಬೆಳೆಯುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ. ಇದು ಸ್ನಾಯು ದೌರ್ಬಲ್ಯ, ಖಿನ್ನತೆ, ಹೃದಯ ಸಂಬಂಧಿ ಕಾಯಿಲೆಗಳು, ಟೈಪ್ 2 ಮಧುಮೇಹ ಮತ್ತು ಕೆಲವು ಕ್ಯಾನ್ಸರ್ ಕಾರಣವಾಗುತ್ತದೆ.

ವಿಟಮಿನ್ ಡಿ ಕೊರತೆಯು ಲಕ್ಷಾಂತರ ಜನರನ್ನು ಬಾಧಿಸುವ ಮೌನ ಸಾಂಕ್ರಾಮಿಕ ರೋಗವಾಗಿದೆ, ಆದರೆ ಹೆಚ್ಚಾಗಿ ಜನರು ಇದನ್ನು ಕಡೆಗಣಿಸುತ್ತಾರೆ. ಇದರ ಪರಿಣಾಮಗಳು ದುರ್ಬಲ ಮೂಳೆಗಳನ್ನು ಮೀರಿ ವಿಸ್ತರಿಸುತ್ತವೆ. ಆರೋಗ್ಯ ವ್ಯವಸ್ಥೆಯನ್ನು ಒತ್ತಡಕ್ಕೆ ಒಳಪಡಿಸುತ್ತದೆ. ನಮ್ಮ ರಾಷ್ಟ್ರೀಯ ಆರೋಗ್ಯ ಗುರಿಗಳನ್ನು ದುರ್ಬಲಗೊಳಿಸುತ್ತದೆ ಎಂದು ಆಕಾಶ್ ಹೆಲ್ತ್‌ಕೇರ್ ವ್ಯವಸ್ಥಾಪಕ ನಿರ್ದೇಶಕ ಮತ್ತು ಅಧ್ಯಯನದ ಸಹ-ಲೇಖಕ ಡಾ. ಆಶಿಶ್ ಚೌಧರಿ ಹೇಳುತ್ತಾರೆ.

ಬಿಕ್ಕಟ್ಟನ್ನು ಪರಿಹರಿಸಲು ಹಲವಾರು ವ್ಯವಸ್ಥಿತ ಅಡೆತಡೆಗಳನ್ನು ವರದಿಯು ಗುರುತಿಸುತ್ತದೆ. ಆರೋಗ್ಯ ಕೇಂದ್ರಗಳು, ಆಸ್ಪತ್ರೆಗಳಲ್ಲಿ ಹೆಚ್ಚಿನ ಪರೀಕ್ಷಾ ವೆಚ್ಚಗಳು ಮತ್ತು ಆರೋಗ್ಯ ಪೂರಕಗಳ ಮೇಲಿನ ಶೇಕಡಾ 18ರಷ್ಟು ಜಿಎಸ್ಟಿಯು ರೋಗನಿರ್ಣಯ ಮತ್ತು ಚಿಕಿತ್ಸೆಯನ್ನು ಅನೇಕರಿಗೆ ಭರಿಸಲಾಗದಂತೆ ಮಾಡುತ್ತದೆ.

### ಗರ್ಭಧಾರಣೆ–ಮಗುವಿಗೆ 2 ವರ್ಷ ತುಂಬುವವರೆಗೆ ಸಕ್ಕರೆ ಸೇವನೆಗೆ ನಿರ್ಬಂಧ

# ಶೇ.35ರಷ್ಟು ಮಧುಮೇಹ ಅಪಾಯ ಕಡಿಮೆ



**ನವದೆಹಲಿ: ಬದಲಾದ ಜೀವನಶೈಲಿಯಿಂದ ಇಂದು ಮಕ್ಕಳಲ್ಲಿಯೂ ಮಧುಮೇಹವನ್ನು ಸರ್ವೇಸಾಮಾನ್ಯವಾಗಿ ನೋಡುತ್ತಿದ್ದೇವೆ. ಇದು ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅತ್ಯಂತ ಅಪಾಯಕಾರಿ. ಹುಟ್ಟಲಿರುವ ಮಗುವಿನ ಆರೋಗ್ಯವು ತಾಯಿಯ ಆರೋಗ್ಯದ ಮೇಲೆ ಅವಲಂಬಿತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಇತ್ತೀಚಿನ ಅಧ್ಯಯನವೊಂದು ಹಲವು ಕುತೂಹಲಕಾರಿ ಸಂಗತಿಗಳನ್ನು ಬಹಿರಂಗಪಡಿಸಿದೆ.**

**ತಾಯಿಯು ಗರ್ಭಧಾರಣೆಯಿಂದ ಮಗು ಹುಟ್ಟಿದ 2 ವರ್ಷಗಳ ವರೆಗೆ ಮಕ್ಕಳಿಗೆ ಸಕ್ಕರೆ ಅಂಶಗಳನ್ನು ಪರಿಚಯಿಸದೇ ಇದ್ದರೆ, ವಯಸ್ಕ ಜೀವನದಲ್ಲಿ ದೀರ್ಘಕಾಲದ ಕಾಯಿಲೆಗಳನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಇದು ಕಡಿಮೆ ಮಾಡುತ್ತದೆ ಎಂದು ಹೇಳಿದೆ.**

ದಕ್ಷಿಣ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾನಿಲಯ ಈ ಅಧ್ಯಯನ ನಡೆಸಿದ್ದು, ಈ ಅಧ್ಯಯನವು ಸೈನ್ಸ್ ಜರ್ನಲ್‌ನಲ್ಲಿ ಪ್ರಕಟವಾಗಿದೆ.

ಮಕ್ಕಳ ಆರಂಭಿಕ ಜೀವನದಲ್ಲಿ ಸಕ್ಕರೆಯ ಸೇವನೆಯನ್ನು ಕಡಿಮೆ ಮಾಡುವುದರಿಂದ ಟೈಪ್ 2 ಮಧುಮೇಹವನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಶೇ.35% ರಷ್ಟು ಮತ್ತು ಅಧಿಕ ರಕ್ತದೊತ್ತಡವನ್ನು ಶೇ.20 ರಷ್ಟು ಕಡಿಮೆ ಮಾಡಬಹುದು ಎಂದು ಅಧ್ಯಯನ ತಿಳಿಸಿದೆ.

ನ್ಯೂಟ್ರಿಷನ್ ಅಡ್ವೊಕಸಿಯ ಸಂಚಾಲಕ ಡಾ ಅರುಣ್ ಗುಪ್ತಾ ಅವರು ಮಾತನಾಡಿ, ಗರ್ಭಾವಸ್ಥೆಯಲ್ಲಿ ಮತ್ತು ಬಾಲ್ಯದಲ್ಲಿ ಸಕ್ಕರೆ ಸೇವನೆಯನ್ನು ಕಡಿಮೆ ಮಾಡುವಂತೆ ಅಧ್ಯಯನ ಸಲಹೆ ನೀಡಿದೆ ಎಂದು ಹೇಳಿದ್ದಾರೆ. ಸೆಪ್ಟೆಂಬರ್ 1953 ರಲ್ಲಿ 2ನೇ ಮಹಾಯುದ್ಧದಿಂದ ಬ್ರಿಟನ್ ಚೇತರಿಸಿಕೊಳ್ಳುತ್ತಿರುವಾಗ ಸಕ್ಕರೆ ಪಡಿತರದಿಂದಾಗಿ ಸುಮಾರು 60,000 ಜನರು ಪ್ರಭಾವಿತರಾಗಿದ್ದರು. ಸಕ್ಕರೆ ಪಡಿತರ ವಿತರಣೆ ಬಳಿಕ ಜನರಲ್ಲಿ ದೀರ್ಘಕಾಲಿಕ ರೋಗಗಳಿಗೆ ಒಳಗಾಗುವುದು ಹೆಚ್ಚಾಗಿರುವುದನ್ನು ಅಧ್ಯಯನ ಪತ್ತೆ ಮಾಡಿದೆ.

ಅಧ್ಯಯನ ನಡೆಸಿದ ಸಂಶೋಧಕರು ಪಡಿತರ ವಿತರಣೆಗೂ ಮುನ್ನ ಹಾಗೂ ನಂತರದ ಗರ್ಭಿಣಿಯರ ಆರೋಗ್ಯ ಮತ್ತು ಮಕ್ಕಳ ಆರೋಗ್ಯವನ್ನು ಅವಲೋಕನ ನಡೆಸಿದ್ದು, ಇದರ ನಡುವಿನ ವ್ಯತ್ಯಾಸವು ಮಗುವಿನ ಜೀವನದ ಮೊದಲ 1,000 ದಿನಗಳು ಅದರ ಭವಿಷ್ಯದ ಆರೋಗ್ಯವನ್ನು ರೂಪಿಸಲು ನಿರ್ಣಾಯಕ ಅವಧಿಯಾಗಿದೆ ಎಂಬುದನ್ನು ಕಂಡುಕೊಂಡಿದೆ.

ಗರ್ಭಾವಸ್ಥೆಯಲ್ಲಿ ತಾಯಿ ಸೇವನೆ ಮಾಡುವ ಆಹಾರವು ಅತ್ಯಂತ ಮುಖ್ಯವಾಗಿದೆ, ಕಡಿಮೆ ಸಕ್ಕರೆಯ ಆಹಾರದ ಮೂರನೇ ಒಂದು ಭಾಗವು ಗರ್ಭದಲ್ಲಿರುವಾಗಲೇ ಮಗುವಿನ ಮೇಲೆ ಪರಿಣಾಮ ಬೀರುತ್ತದೆ. ಆದಾಗ್ಯೂ, ಮಗುವಿಗೆ ಗರ್ಭದಲ್ಲಿರುವಾಗ ಸಕ್ಕರೆ ಅಂಶವನ್ನು ಕಡಿತಗೊಳಿಸಿದಾಗ ಮತ್ತು ಘನ ಆಹಾರಗಳ ಮೂಲಕ ಆಹಾರ ಸೇವಿಸುವಂತೆ ಮಾಡಿದರೆ ಆರೋಗ್ಯದಲ್ಲಿ ಸುಧಾರಣೆಗಳನ್ನು

## ಶ್ರವಣದೋಷ ಅಸಡ್ಡೆ ಬೇಡ...

**ಬೆಂಗಳೂರು:**



ವಯಸ್ಸಾದವರಲ್ಲಿ ಶ್ರವಣದೋಷವು ಸಾಮಾನ್ಯ ಸಮಸ್ಯೆಯಾಗಿರುತ್ತದೆ. ಆರಂಭದಲ್ಲಿ ಸೌಮ್ಯ ಗಾತ್ರದಿಂದ ಹಿಡಿದು ತೀವ್ರ – ಆಳವಾದ ಮಟ್ಟಗಳವರೆಗೆ ಶ್ರವಣದೋಷ ಸಮಸ್ಯೆ ಇರುತ್ತದೆ. ವಯಸ್ಸಾದವರು ಕಿವಿ ಕೇಳಿಸದಿರುವ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುವುದಿಲ್ಲ, ಅವರ ಕುಟುಂಬದವರು ಸಹ ಅಸಡ್ಡೆ ಮಾಡುತ್ತಾರೆ. ಮನುಷ್ಯನಿಗೆ ದೃಷ್ಟಿಹೀನತೆ ಸಮಸ್ಯೆ ಬಂದರೆ ಅದನ್ನು ಹೊಂದಿರುವ ವ್ಯಕ್ತಿ ಕಡೆಗೆ ತಕ್ಷಣದ ಗಮನ ನೀಡುತ್ತಾರೆ. ಆದರೆ ವಯಸ್ಸಾದವರಲ್ಲಿ ಶ್ರವಣ ನಷ್ಟವನ್ನು ತಡವಾಗಿ ಅಥವಾ ಎಂದಿಗೂ ಪರಿಹರಿಸುವುದಿಲ್ಲ.

ವ್ಯಕ್ತಿಗೆ ಶ್ರವಣ ದೋಷ ಉಂಟಾದಾಗ ಸಾಮಾಜಿಕ ಕೌಶಲ್ಯ ಕೂಡ ಕಡಿಮೆಯಾಗುತ್ತದೆ. ಬೇರೆಯವರು ಅವರನ್ನು ಅಷ್ಟಾಗಿ ಮಾತನಾಡಿಸುವುದಿಲ್ಲ,

ಹೀಗಾದಾಗ ಅವರು ಪ್ರತ್ಯೇಕವಾಗುತ್ತಾರೆ. ಶ್ರವಣದೋಷವುಳ್ಳ ಹಿರಿಯರೊಂದಿಗೆ ಸಂಭಾಷಣೆ ನಡೆಸುವಾಗ, ಬೇರೆಯವರು ಅವರನ್ನು ಅಷ್ಟಾಗಿ ಮಾತನಾಡಿಸುವುದಿಲ್ಲ, ಹೀಗಾದಾಗ ಅವರು ಪ್ರತ್ಯೇಕವಾಗುತ್ತಾರೆ. ಶ್ರವಣದೋಷವುಳ್ಳ ಹಿರಿಯರೊಂದಿಗೆ ಸಂಭಾಷಣೆ ನಡೆಸುವಾಗ, ಸಂಭಾಷಣೆಯಲ್ಲಿ ಸ್ಪಷ್ಟತೆಯನ್ನು ಹೊಂದಲು ಸಾಧ್ಯವಾಗದಿದ್ದಾಗ ಅಥವಾ ವಿಭಿನ್ನವಾಗಿ ಉತ್ತರಿಸಲು ಸಾಧ್ಯವಾಗದಿದ್ದಾಗ ಅವರು ನಗುವುದನ್ನು ನಾವು ಅನೇಕ ಬಾರಿ ಗಮನಿಸುತ್ತೇವೆ. ದಿನನಿತ್ಯದ ಚಟುವಟಿಕೆಗಳಿಗೆ ಮಾತನಾಡುವ ಭಾಷೆ ಮತ್ತು ಸಕ್ರಿಯ ಸಂಭಾಷಣೆಗಳನ್ನು ಆಲಿಸುವ ಅಗತ್ಯವಿದೆ, ಇದು ಅವರನ್ನು ಮಾನಸಿಕವಾಗಿ ತೊಡಗಿಸಿಕೊಳ್ಳುತ್ತದೆ ಮತ್ತು ಉತ್ತಮ ಸ್ಮರಣೆಯನ್ನು ಹೊಂದಲು ಸಹಾಯ ಮಾಡುತ್ತದೆ.

## ಬೇಬಿ ಕಾರ್ನ್ ಫ್ರೈ



ಬೇಕಾಗುವ ಪದಾರ್ಥಗಳು...
ಬೇಬಿ ಕಾರ್ನ್– 1 ಬಟ್ಟಲು
ಕಡಲೆ ಹಿಟ್ಟು– 1 ಬಟ್ಟಲು
ಈರುಳ್ಳಿ– 1
ಬ್ರೆಡ್ ಪೌಡರ್– 1 ಬಟ್ಟಲು
ಅಕ್ಕಿ ಹಿಟ್ಟು– 1 ಚಮಚ
ಕ್ಯಾಪ್ಸಿಕಂ– 1
ಅಚ್ಚ ಖಾರದ ಪುಡಿ– 1 ಚಮಚ
ಕಾಳುಮೆಣಸಿನ ಪುಡಿ– ಅರ್ಧ ಚಮಚ
ಉಪ್ಪು–ರುಚಿಗೆ ತಕ್ಕಷ್ಟು

**ಮಾಡುವ ವಿಧಾನ...**

ಒಂದು ಪಾತ್ರೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಲು ಇಡಿ. ಮತ್ತೊಂದು ಪಾತ್ರೆಯಲ್ಲಿ ಕಡಲೆ ಹಿಟ್ಟು, ಕಾಳು ಮೆಣಸಿನ ಪುಡಿ, ಖಾರದ ಪುಡಿ, ಅಕ್ಕಿ ಹಿಟ್ಟು, ಉಪ್ಪು ಹಾಗೂ ಸ್ವಲ್ಪ ನೀರು ಹಾಕಿ ದಪ್ಪ ಮಿಶ್ರಣ ಮಾಡಿಕೊಳ್ಳಿ. ಒಲೆಯ ಮೇಲೆ ಬಾಣಲೆ ಇಟ್ಟು, ಎಣ್ಣೆ ಹಾಕಿ. ಬಿಸಿಯಾದ ಮೇಲೆ ಕತ್ತರಿಸಿದ ಕ್ಯಾಪ್ಸಿಕಂ ಹಾಗೂ ಕತ್ತರಿಸಿದ ಈರುಳ್ಳಿಯನ್ನು ಎಣ್ಣೆಗೆ ಹಾಕಿ ಫ್ರೈ ಮಾಡಿ. ಬದಿಗಿಟ್ಟುಕೊಳ್ಳಿ.

ನಂತರ ಬೇಬಿ ಕಾರ್ನ್ ಪೀಸ್ ಗಳನ್ನು ಕಡಲೆ ಹಿಟ್ಟಿನ ಮಿಶ್ರಣದಲ್ಲಿ ಅದ್ದಿ. ನಂತರ ಬ್ರೆಡ್ ಪೌಡರ್ ನಲ್ಲಿ ಹೊರಳಿಸಿ ಎಣ್ಣೆಯಲ್ಲಿ ಬಿಡಿ. ಬೇಬಿ ಕಾರ್ನ್ ಗೋಲ್ಡನ್ ಬಣ್ಣಕ್ಕೆ ಬರ್ತಿದ್ದಂತೆ ತೆಗೆದು, ಕರಿದ ಈರುಳ್ಳಿ, ಕ್ಯಾಪ್ಸಿಕಂ ಮೇಲೆ ಉದುರಿಸಿದರೆ ರುಚಿಕರಾದ ಬೇಬಿ ಕಾರ್ನ್ ಫ್ರೈ ಸವಿಯಲು ಸಿದ್ಧ.

## ಪುರುಷರ ಆರೋಗ್ಯ ಜಾಗೃತಿ: ಈ ರೋಗಲಕ್ಷಣಗಳು ಕಂಡುಬಂದರೆ ಖಂಡಿತಾ ನಿರ್ಲಕ್ಷಿಸಬೇಡಿ!

**ಬೆಂಗಳೂರು:** ಆರೋಗ್ಯ ಮನುಷ್ಯ ಜೀವನದ ನಿಜವಾದ ಸಂಪತ್ತು, ಮಾನಸಿಕ ಮತ್ತು ದೈಹಿಕ ಆರೋಗ್ಯವು ಸರಿಯಾಗಿದ್ದರೆ ಏನನ್ನು ಬೇಕಾದರೂ ಸಾಧಿಸಬಹುದು ಎಂಬ ಮಾತಿದೆ.ಇತ್ತೀಚಿನ ಒತ್ತಡದ ವೇಗದ ಬದುಕಿನಲ್ಲಿ ಅನೇಕರು ತಮ್ಮ ಆರೋಗ್ಯದ ಕಡೆಗೆ ಗಮನ ಹರಿಸುವುದನ್ನು ನಿರ್ಲಕ್ಷಿಸುತ್ತಾರೆ. ಹೀಗಾದಾಗ ದೇಹದಲ್ಲಿ ಕೆಲವು ನ್ಯೂನತೆ ಕಂಡುಕೊಂಡು ನಮಗೆ ಎಚ್ಚರಿಕೆ ನೀಡುತ್ತಿರುತ್ತದೆ. ಯಾವುದೇ ನಿರಂತರ ಅಥವಾ ಅಸಾಮಾನ್ಯ ರೋಗಲಕ್ಷಣಗಳಿಗೆ ಪೂರ್ವಭಾವಿಯಾಗಿ ವೈದ್ಯಕೀಯ ಸಲಹೆಯನ್ನು ಪಡೆಯುವುದು ಸಂಭಾವ್ಯ ಆರೋಗ್ಯ ಸಮಸ್ಯೆಗಳನ್ನು ಮೊದಲೇ ಪತ್ತೆಹಚ್ಚಲು ಮತ್ತು ಫಲಿತಾಂಶಗಳನ್ನು ಸುಧಾರಿಸಲು ಕಾರಣವಾಗಬಹುದು. ಪುರುಷರು ಸಾಮಾನ್ಯವಾಗಿ ನಿರ್ಲಕ್ಷಿಸುವ ಕೆಲವು ರೋಗಲಕ್ಷಣಗಳು ಈ ರೀತಿ ಇವೆ:ಎದೆಯಲ್ಲಿ ಅಸ್ವಸ್ಥತೆ ಅಥವಾ ನೋವುಪುರುಷರು ನಿರ್ಲಕ್ಷಿಸುವ ಸಾಮಾನ್ಯ ರೋಗ ಲಕ್ಷಣಗಳಲ್ಲಿ ಇದು ಮುಖ್ಯವಾಗಿದೆ. ಎದೆ ನೋವು ವಿವಿಧ ಕಾರಣಗಳನ್ನು ಹೊಂದಿರಬಹುದು. ಈ ರೋಗಲಕ್ಷಣವನ್ನು ನಿರ್ಲಕ್ಷಿಸುವುದು ಜೀವಕ್ಕೆ ಅಪಾಯಕಾರಿ. ಎದೆಯ ಅಸ್ವಸ್ಥತೆಯ ಯಾವುದೇ ರೂಪವು ಗಂಭೀರವಾದ ಪರಿಸ್ಥಿತಿಗಳನ್ನು ಭವಿಷ್ಯದಲ್ಲಿ ಉಂಟುಮಾಡುವ ಸಾಧ್ಯತೆಯಿರುವುದರಿಂದ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಉತ್ತಮ.

# ಎಚ್ಚರ... ಅತಿಯಾದ ಕಾಫಿ ಸೇವನೆಯಿಂದ ಬಿ.ಪಿ ಮಧುಮೇಹ ಹೆಚ್ಚಳ



**ಬೆಂಗಳೂರು:** ಕಾಫಿ ಕುಡಿಯುವ ಅಭ್ಯಾಸ ಯಾರಿಗೆ ತಾನೇ ಇಲ್ಲ ಹೇಳಿ. ಆದರೆ, ಅತಿಯಾದರೆ ಅಮೃತವೂ ವಿಷವಾಗುತ್ತದೆ ಎಂಬ ಮಾತಿದೆ. ಕಾಫಿ ಕೂಡ ದೀರ್ಘಕಾಲಿಕ ರೋಗಗಳನ್ನು ತಂದೊಡ್ಡುವ ಸಾಧ್ಯತೆಗಳಿದ್ದು. ಎಚ್ಚರವಹಿಸುವಂತೆ ವೈದ್ಯರು ಸಲಹೆ ನೀಡಿದ್ದಾರೆ.

ಅತಿಯಾದ ಕಾಫಿ ಸೇವನೆಯು ಅಧಿಕ ರಕ್ತದೊತ್ತಡ ಹಾಗೂ ಆತಂಕ (Anxiety) ಸಮಸ್ಯೆಯನ್ನು ಹೆಚ್ಚಿಸುತ್ತದೆ ಎಂದು ಅಧ್ಯಯನವೊಂದು ಹೇಳಿದೆ.

ಆತಂಕ (Anxiety) ಸಮಸ್ಯೆಯೊಂದಿಗೆ ಆಸ್ಪತ್ರೆಗೆ ಬರುವ ಸಾಕಷ್ಟು ರೋಗಿಗಳು ಸಾಮಾನ್ಯವಾಗಿ ಅತಿಯಾದ ಕಾಫಿ ಸೇವನೆ ಮಾಡುವ ಅಭ್ಯಾಸವನ್ನು ರೂಢಿಸಿಕೊಂಡಿರುತ್ತಾರೆ. ಏಕೆಂದರೆ ಕೆಲಸ ಸಮಯದಲ್ಲಿ ಕಾಫಿ ಸುಲಭವಾಗಿ ಲಭ್ಯವಿರುವ ಕಾರಣ ಅಭ್ಯಾಸವನ್ನು ಬೆಳೆಸಿಕೊಂಡಿರುತ್ತಾರೆ. ಆದರೆ, ಇದರಿಂದ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿದ್ದರೂ ಗಮನ ಹರಿಸುವುದಿಲ್ಲ.ನಮ್ಮಲ್ಲಿ ಅನೇಕರು ಕೆಲಸ ಒತ್ತಡ ದೂರಾಗಿಸಲು ಅತಿಯಾಗಿ ಕಾಫಿ ಸೇವನೆ ಮಾಡುವುದುಂಟು. ಆದರೆ, ಇದು ಸಮಸ್ಯೆಯನ್ನು ಉಲ್ಬಣಿಸುತ್ತದೆ ಎಂಬ ಅರಿವು ಅವರಿಗಿರುವುದಿಲ್ಲ. ಅತಿಯಾದ ಕಾಫಿ ಸೇವನೆ ರಕ್ತದೊತ್ತಡವನ್ನು ಹಾಗೂ ಆತಂಕದ ಸಮಸ್ಯೆಗಳನ್ನು ಹೆಚ್ಚು ಮಾಡುತ್ತದೆ ಎಂದು ವೈದ್ಯರು ತಿಳಿಸಿದ್ದಾರೆ. ಜನರಲ್ ಹಾಸ್ಪಿಟಲ್ ಸೈಕಿಯಾಟ್ರಿಯಲ್ಲಿನ ಅಧ್ಯಯನಗಳಲ್ಲಿ ಒಂದಾಗಿರುವ ಮಾಸಿಕ ಆರೋಗ್ಯ ಜರ್ನಲ್ ಈ ಕುರಿತು ಅಧ್ಯಯನ ನಡೆಸಿದ್ದು, ಅಧ್ಯಯನದಲ್ಲಿ ಅತಿಯಾದ ಕೆಫೀನ್ ಸೇವನೆಯು ಆತಂಕ (Anxiety) ಹದಗೆಡುವಂತೆ ಮಾಡುತ್ತದೆ ಎಂದು ತಿಳಿದುಬಂದಿದೆ.

ಅಮೇರಿಕನ್ ಜರ್ನಲ್ ಆಫ್ ಕ್ಲಿನಿಕಲ್ ನ್ಯೂಟ್ರಿಷನ್ನಲ್ಲಿನ ಮತ್ತೊಂದು ಸಂಶೋಧನೆಯು ಅಧಿಕ ಕೆಫೀನ್ ಸೇವನೆಯನ್ನು ರಕ್ತದೊತ್ತಡ ಸಮಸ್ಯೆಯನ್ನು ಹೆಚ್ಚಿಸುತ್ತದೆ. ಇದು ಹೃದಯರಕ್ತನಾಳದ ಅಸ್ವಸ್ಥತೆಗಳ ಅಪಾಯವನ್ನು ಹೆಚ್ಚಿಸುತ್ತದೆ ಎಂದು ತಿಳಿಸಿದೆ.ಪ್ರತಿನಿತ್ಯ ಮೂರು–ನಾಲ್ಕು ಕಪ್ಗಳು ಅಥವಾ 400 ಮಿಗ್ರಾಂ ಕೆಫೀನ್ ಅನ್ನು ಸೇವಿಸುವುದು ಸುರಕ್ಷಿತವೆಂದು ಹೇಳಲಾಗುತ್ತದೆ. ಆದರೆ, ಅದಕ್ಕಿಂತೂ ಹೆಚ್ಚು ಸೇವನೆ ಅಪಾಯಕಾರಿ ಎಂದು ವೈದ್ಯರು ತಿಳಿಸಿದ್ದಾರೆ.ಮುಖ್ಯವಾಗಿ ಗರ್ಭಿಣಿಯರು ಜಾಗರೂಕರಾಗಿರಬೇಕು ಏಕೆಂದರೆ ಅತಿಯಾದ ಕೆಫೀನ್ ಸೇವನೆ ಗರ್ಭಪಾತ ಮತ್ತು ಕಡಿಮೆ ತೂಕದ ಅಪಾಯವನ್ನು ಹೆಚ್ಚಿಸುತ್ತದೆ. ಇದಲ್ಲದೆ, ಕಾಫಿ ಸೇವನೆಯು ನೇರವಾಗಿ ಸಕ್ಕರೆಯ ಬಳಕೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ.ಆಸ್ಟರ್ ಸಿಎಂಐ ಆಸ್ಪತ್ರೆಯ ಕ್ಲಿನಿಕಲ್ ನ್ಯೂಟ್ರಿಷನ್ ಮತ್ತು ಡಯೆಟಿಕ್ಸ್ ವಿಭಾಗದ ಮುಖ್ಯಸ್ಥ ಎಡ್ವಿನಾ ರಾಜ್ ಅವರು ಮಾತನಾಡಿ, ಅತಿಯಾದ ಕಾಫಿ ಸೇವನೆಯು ಹೆಚ್ಚಿದ ರಕ್ತದೊತ್ತಡ ಸೇರಿದಂತೆ ವಿವಿಧ ಅಡ್ಡಪರಿಣಾಮಗಳಿಗೆ ಕಾರಣವಾಗಬಹುದು.

# ಸಾಕುಪ್ರಾಣಿಗಳಿಂದಲೂ ಶ್ವಾಸಕೋಶದ ಕ್ಯಾನ್ಸರ್ ಸಾಧ್ಯತೆ!

**ಧೂಮಪಾನ ಮತ್ತು ವಾಯುಮಾಲಿನ್ಯದ ಪರಿಣಾಮವಾಗಿ ಶ್ವಾಸಕೋಶದ ಕಾಯಿಲೆಗಳು ಮತ್ತು ಕ್ಯಾನ್ಸರ್ ಕಂಡುಬರುತ್ತದೆ ಎಂದು ಹೇಳಲಾದರೂ ಕಡಿಮೆ ಮತ್ತು ಕಳಪೆ ಗಾಳಿ ಇರುವ ಸ್ಥಳಗಳಲ್ಲಿ ಸುಡುವ ಗಂಧದ ಕಡ್ಡಿ, ಏರ್ ಫ್ರೆಶ್ನರ್, ಪಾರಿವಾಳಗಳು, ಇಲಿಗಳು, ನಾಯಿಗಳು ಹಾಗೂ ಬೆಕ್ಕುಗಳಂತಹ ಸಾಕುಪ್ರಾಣಿಗಳಿಂದಲೂ ಶ್ವಾಸಕೋಶದ ಕಾಯಿಲೆ ಬರುವ ಸಾಧ್ಯತೆಯಿದೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ.**

**ಸಾಮಾನ್ಯವಾಗಿ ಕಡೆಗಣಿಸಲ್ಪಡುವ ಈ ಸಣ್ಣ ಅಂಶಗಳು ಉಸಿರಾಟದ ಆರೋಗ್ಯವನ್ನು ಹದಗೆಡಿಸುವ ಹಾನಿಕಾರಕ ಕಣಗಳನ್ನು ಬಿಡುಗಡೆ ಮಾಡುತ್ತವೆ ಎಂದು ವೈದ್ಯರು ಹೇಳಿದ್ದಾರೆ. ಸೆಪ್ಟೆಂಬರ್ 25 ರಂದು ವಿಶ್ವ ಶ್ವಾಸಕೋಶ ದಿನವನ್ನು ಆಚರಿಸಲಾಗುತ್ತದೆ. 'ಕ್ಲೋಸ್ ದಿ ಕೇರ್ ಗ್ಯಾಪ್: ಪ್ರತಿಯೊಬ್ಬರೂ ಕ್ಯಾನ್ಸರ್ ಕೇರ್ಗೆ ಪ್ರವೇಶಕ್ಕೆ ಅರ್ಹರು' ಎಂಬ 2024 ರ ಥೀಮ್ನೊಂದಿಗೆ ಆಚರಿಸಲಾಗುತ್ತಿದೆ.**



ಸ್ಥೂಲಕಾಯಕ್ಕೆ ಪ್ರಮುಖ ಕೊಡುಗೆ ನೀಡುವ ಸಂಸ್ಕರಿಸಿದ ಕಾರ್ಬೋಹೈಡ್ರೇಟ್ಗಳು ಮತ್ತು ಸ್ಯಾಚುರೇಟೆಡ್ ಕೊಬ್ಬಿನ ಸೇವನೆಯು ಉಸಿರಾಟದ ಸಮಸ್ಯೆಗಳಿಗೆ ಮೂಲ ಕಾರಣಗಳಾಗಿವೆ ಎಂದು ವೈದ್ಯರು ಉಲ್ಲೇಖಿಸಿದ್ದಾರೆ, ಏಕೆಂದರೆ ಅಧಿಕ ತೂಕವು ಶ್ವಾಸಕೋಶದ ಸಾಮರ್ಥ್ಯವನ್ನು ಕಡಿಮೆ ಮಾಡುತ್ತದೆ ಮತ್ತು ಡಯಾಫ್ರಾಮ್ನ ಮೇಲೆ ಹೆಚ್ಚು ಒತ್ತಡ ಬೀರುತ್ತದೆ, ಶ್ವಾಸಕೋಶಕ್ಕೆ ಸಂಬಂಧಿಸಿದ ಸಮಸ್ಯೆಗಳ ಅಪಾಯವನ್ನು ಹೆಚ್ಚಿಸುತ್ತದೆ.

ಮನೆಯಲ್ಲಿ ರಾಸಾಯನಿಕಗಳ ಬಳಕೆ, ಕಡಿಮೆ ಗಾಳಿಯಿರುವ ಮನೆಯ ಒಳಾಂಗಣ ಕೆಲಸದ ಸ್ಥಳದಲ್ಲಿ ಹಾನಿಕಾರಕ ಪದಾರ್ಥಗಳಿಗೆ ಒಡ್ಡಿಕೊಳ್ಳುವುದು ಮತ್ತು ಆನುವಂಶಿಕ ಪ್ರವೃತ್ತಿಯು ಕೂಡ ಪ್ರಮುಖ ಕಾರಣಗಳಾಗಿವೆ. ಗಣಿಗಾರಿಕೆ, ನಿರ್ಮಾಣ ಮತ್ತು ಉತ್ಪಾದನೆಯಂತಹ ಕೆಲಸಗಳು ಶ್ವಾಸಕೋಶದ ಆರೋಗ್ಯಕ್ಕೆ ಹಾನಿ ಮಾಡುವ ಹಾನಿಕಾರಕ ಪದಾರ್ಥಗಳಿಗೆ ಕಾರ್ಮಿಕರನ್ನು ಒಡ್ಡುತ್ತವೆ ಎಂದು ಆಸ್ಟರ್ ಅಖಿ ಆಸ್ಪತ್ರೆಯ ಇಂಟರ್ವೆನ್ಷನಲ್ ಪಲ್ಮನಾಲಜಿಯ ಪ್ರಮುಖ ಸಲಹೆಗಾರರಾದ ಡಾ ಸುನಿಲ್ ಕುಮಾರ್ ಕೆ ತಿಳಿಸಿದ್ದಾರೆ.

ಹದಿಹರೆಯದವರು ವ್ಯಾಪಿಂಗ್ (ಹೊಗೆ ಮೂಲಕ ಒಂದು ರೀತಿಯ ಡ್ರಗ್ ಸೇವನೆ) ಶ್ವಾಸಕೋಶದ ಆರೋಗ್ಯಕ್ಕೆ ಗಂಭೀರ ಅಪಾಯವನ್ನುಂಟುಮಾಡುತ್ತದೆ ಎಂದು ಡಾ ಕುಮಾರ್ ಉಲ್ಲೇಖಿಸಿದ್ದಾರೆ. "ಜಡ ಜೀವನಶೈಲಿ ಮತ್ತು ಸಂಸ್ಕರಿಸಿದ ಆಹಾರಗಳು, ಉಪ್ಪು ಮತ್ತು ಕೊಬ್ಬು ಸಮೃದ್ಧವಾಗಿರುವ ಅನಾರೋಗ್ಯಕರ ಆಹಾರವು ಶ್ವಾಸಕೋಶದ ಕಾರ್ಯವನ್ನು ಇನ್ನಷ್ಟು ದುರ್ಬಲಗೊಳಿಸುತ್ತದೆ" ಎಂದು ಅವರು ಹೇಳಿದರು.ಗ್ಲೆನೆಗಲ್ಸ್ ಬಿಜಿಎಸ್ ಆಸ್ಪತ್ರೆಯ ಕನ್ಸಲ್ಟೆಂಟ್, ಇಂಟರ್ವೆನ್ಷನಲ್ ಪಲ್ಮನಾಲಜಿಸ್ಟ್ ಡಾ ಮಂಜುನಾಥ್ ಪಿಎಚ್ ಮಾತನಾಡಿ,

ವಾಯು ಮಾಲಿನ್ಯಕ್ಕೆ ದೀರ್ಘಕಾಲ ಒಡ್ಡಿಕೊಳ್ಳುವುದು ಮತ್ತು ರಾಸಾಯನಿಕ ಹೊಗೆಯಂತಹ ಔದ್ಯೋಗಿಕ ಅಪಾಯಗಳು ಈ ರೋಗಗಳಿಗೆ ಕೊಡುಗೆ ನೀಡುತ್ತವೆ ಎಂದು ಹೇಳಿದರು. ಈ ಮಾಲಿನ್ಯಕಾರಕಗಳು ಶ್ವಾಸಕೋಶದ ಕಿರಿಕಿರಿಯನ್ನು ಉಂಟುಮಾಡಬಹುದು, ಇದರ ಪರಿಣಾಮವಾಗಿ ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ (ಅಔಕಆ), ಆಸ್ತಮಾ ಮತ್ತು ಶ್ವಾಸಕೋಶದ ಕ್ಯಾನ್ಸರ್ಗಳಂತಹ ಪರಿಸ್ಥಿತಿಗಳು ಉಂಟಾಗಬಹುದು.

ಜೆನೆಟಿಕ್ಸ್ ಕೂಡ ಶ್ವಾಸಕೋಶದ ಕಾಯಿಲೆಗಳಿಗೆ ಒಳಗಾಗುವಿಕೆಯ ಮೇಲೆ ಪ್ರಭಾವ ಬೀರಬಹುದು.ಗ್ಲೆನೆಗಲ್ಸ್ ಬಿಜಿಎಸ್ ಆಸ್ಪತ್ರೆಯ ಕನ್ಸಲ್ಟೆಂಟ್, ಇಂಟರ್ವೆನ್ಷನಲ್ ಪಲ್ಮನಾಲಜಿಸ್ಟ್ ಡಾ ಮಂಜುನಾಥ್ ಪಿಎಚ್ ಮಾತನಾಡಿ, ವಾಯು ಮಾಲಿನ್ಯಕ್ಕೆ ದೀರ್ಘಕಾಲ ಒಡ್ಡಿಕೊಳ್ಳುವುದು ಮತ್ತು ರಾಸಾಯನಿಕ ಹೊಗೆಯಂತಹ ಔದ್ಯೋಗಿಕ ಅಪಾಯಗಳು ಈ ರೋಗಗಳಿಗೆ ಕೊಡುಗೆ ನೀಡುತ್ತವೆ ಎಂದು ಹೇಳಿದರು. ಈ ಮಾಲಿನ್ಯಕಾರಕಗಳು ಶ್ವಾಸಕೋಶದ ಕಿರಿಕಿರಿಯನ್ನು ಉಂಟುಮಾಡಬಹುದು, ಇದರ ಪರಿಣಾಮವಾಗಿ ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ (ಅಔಕಆ), ಆಸ್ತಮಾ ಮತ್ತು ಶ್ವಾಸಕೋಶದ ಕ್ಯಾನ್ಸರ್ಗಳಂತಹ ಪರಿಸ್ಥಿತಿಗಳು ಉಂಟಾಗಬಹುದು.

ಜೆನೆಟಿಕ್ಸ್ ಕೂಡ ಶ್ವಾಸಕೋಶದ ಕಾಯಿಲೆಗಳಿಗೆ ಒಳಗಾಗುವಿಕೆಯ ಮೇಲೆ ಪ್ರಭಾವ ಬೀರಬಹುದು.ಧೂಮಪಾನವನ್ನು ತ್ಯಜಿಸುವುದು, ಅಪಾಯಕಾರಿ ಕೆಲಸದ ವಾತಾವರಣದಲ್ಲಿ ರಕ್ಷಣಾ ಸಾಧನಗಳನ್ನು ಬಳಸುವುದು ಮತ್ತು ಶ್ವಾಸಕೋಶದ ಆರೋಗ್ಯವನ್ನು ನಿಯಮಿತವಾಗಿ ಮೇಲ್ವಿಚಾರಣೆ

ಮಾಡುವುದರಿಂದ ಶ್ವಾಸಕೋಶದ ಕಾಯಿಲೆ ಮತ್ತು ಕ್ಯಾನ್ಸರ್ ಕಡಿಮೆ ಮಾಡಬಹುದಾಗಿದೆ ಎಂದು ಡಾ ಮಂಜುನಾಥ್ ಹೇಳಿದರು. ನಿರಂತರ ಕೆಮ್ಮು, ಉಸಿರಾಟದ ತೊಂದರೆ, ಎದೆನೋವು, ಹಠಾತ್ ತೂಕ ನಷ್ಟ, ಅತಿಯಾದ ಆಯಾಸ ಮತ್ತು ಆಗಾಗ್ಗೆ ಅನಾರೋಗ್ಯದಂತಹ ರೋಗಲಕ್ಷಣಗಳಿಗೆ ಗಮನ ಕೊಡುವುದು ಬಹಳ ಮುಖ್ಯ ಎಂದು ತಜ್ಞರು ಹೇಳುತ್ತಾರೆ.

## ಆಯಸಿಡಿಟಿ, ಮಲಬದ್ಧತೆ, ಸಾಕಷ್ಟು ಆರೋಗ್ಯ ಪ್ರಯೋಜನಗಳನ್ನು ನೀಡುತ್ತೆ ಓಂಕಾಳು



ಓಂ ಕಾಳನ್ನು ಅಡುಗೆಗೆ ಸಾಮಾನ್ಯವಾಗಿ ಉಪಯೋಗಿಸುತ್ತಲೇ ಇರುತ್ತೇವೆ. ಆದರೆ, ಈ ಓಂ ಕಾಳನ್ನು ಸೇವಿಸುವುದರಿಂದ ಹತ್ತು ಹಲವು ಆರೋಗ್ಯಕಾರಿ ಲಾಭಗಳಿವೆ. ಸಾಕಷ್ಟು ಮಂದಿ ಹೊಟ್ಟೆ, ಕರುಳು ಹಾಗೂ ಜೀರ್ಣಕ್ರಿಯೆಗೆ ಸಂಬಂಧಪಟ್ಟ ಅಂಗಾಂಗಗಳಲ್ಲಿ ಹುಣ್ಣುಗಳಿಂದ ಬಳಲುತ್ತಿರುತ್ತಾರೆ, ಈ ಹುಣ್ಣುಗಳಿಂದ ಬಹಳಷ್ಟು ತೊಂದರೆಯನ್ನು ಅನುಭವಿಸುತ್ತಿರುತ್ತಾರೆ, ಇದಕ್ಕಾಗಿ ಹಲವು ಔಷಧಗಳ ಮೊರೆ ಹೋಗಿರುತ್ತಾರೆ. ಆದರೆ, ಓಂ ಕಾಳುಗಳು ಇಂತಹ ಹುಣ್ಣುಗಳನ್ನು ವಾಸಿಮಾಡಲು ಪರಿಣಾಮಕಾರಿಯಾಗಿದೆ ಎಂದರೆ ನಿಮಗೆ ಆಶ್ಚರ್ಯವಾಗಬಹುದು.ಓಂ ಕಾಳುಗಳು ಅಸಿಡಿಟಿ, ಗ್ಯಾಸ್ ಸಮಸ್ಯೆ, ಜೀರ್ಣಕ್ರಿಯೆಯ ವಿಳಂಬವಾಗುವ ತೊಂದರೆಗಳನ್ನು ಸರಿಪಡಿಸುತ್ತದೆ. ಜೀರ್ಣಕ್ರಿಯೆಯ ತೊಂದರೆಗಳನ್ನು ಸರಿಮಾಡಿಕೊಳ್ಳಲು ಅರ್ಧ ಚಮಚದಷ್ಟು ಓಂಕಾಳು ಗಳನ್ನು ಜಗಿದು ತಿನ್ನಬಹುದು ಅಥವಾ ನೀರಿನೊಂದಿಗೆ ಬೆರೆಸಿ ಕುಡಿಯಬಹುದು.

## ಬಿಸಿಲ ಝಳಕ್ಕೆ ಬಾಡದಿರಲಿ ನಯನಗಳು

ಬೇಸಿಗೆ ಕಾಲ ಬಂತೆಂದರೆ ಸಾಕು ಹಲವು ರೋಗಗಳು ಬೆಂಬಿಡದೆ ಕಾಡುತ್ತವೆ. ಅವುಗಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ನಾವು ಕಣ್ಣಿನ ಆರೈಕೆಯನ್ನೇ ಮರೆತುಬಿಡುತ್ತೇವೆ. ಬೇಸಿಗೆಯ ಬಿಸಿಲ ಗಾಳಿ ಕಣ್ಣಿಗೆ ಹಲವು ರೀತಿಯ ಸಮಸ್ಯೆಗಳು ಎದುರಾಗುತ್ತವೆ. ಸುಡು ಬಿಸಿಲಿಗೆ ಕಣ್ಣುಗಳು ತೇವಾಂಶವನ್ನು ಕಳೆದುಕೊಂಡು ಮಡ್ರಾಸ್ ಐ, ಕಾಮಾಲೆ, ಕಣ್ಣನಲ್ಲಿ ನವೆ, ಅಲರ್ಜಿ, ಕಣ್ಣಿನಲ್ಲಿ ಆಗಾಗ ನೀರು ಸುರಿಯುತ್ತಲೇ ಇರುವುದು, ಕಿರಿಕಿರಿ ಅನುಭವ ಇಲ್ಲವೇ ಕಣ್ಣಿನೊಳಗೆ ಚುಚ್ಚಿದಂತಾಗುವುದು...ಹೀಗೆ ಹಲವು ರೀತಿಯ ಕಣ್ಣಿನ ಸಮಸ್ಯೆಗಳು ಎದುರಾಗುತ್ತವೆ. ಇಂತಹ ಸಂದರ್ಭಗಳಲ್ಲಿ ಕಣ್ಣಿನ ಆರೈಕೆ ಮಾಡುವುದು ಅತ್ಯವಶ್ಯಕ.ಸನ್ಗ್ಲಾಸ್ ಬಳಕೆ ಮಾಡಿಸುಡು ಬಿಸಿಲಿನಲ್ಲಿ ಮನೆಯಿಂದ ಹೊರಗೆ ಬರುವ ಅಗತ್ಯ ಬಂದಾಗಲೆಲ್ಲಾ ಸನ್ಗ್ಲಾಸ್ ಬಳಕೆ ಮಾಡಿ. ಬೈಕ್, ಕಾರು ಅಥವಾ ಇನ್ಯಾವುದೇ ವಾಹನಗಳನ್ನು ಚಾಲನೆ ಮಾಡುವ ವೇಳೆಯೂ ಸನ್ಗ್ಲಾಸ್ ಬಳಕೆ ಮಾಡುವುದರಿಂದ ಧೂಳಿನ ಕಣಗಳು ಅಥವಾ ಬಿಸಿಗಾಳಿ ಕಣ್ಣುಗಳನ್ನು ಸೇರದಂತೆ ತಡೆಯುತ್ತದೆ. ಬೈಕ್ ಸವಾರರು ಆದಷ್ಟು ಮುಚ್ಚಿರುವ ಹೆಲ್ಮೆಟ್ಗಳನ್ನು ಬಳಸುವುದು ಉತ್ತಮ.ಶೇ.100ರಷ್ಟು ಗಗಿ ರಕ್ಷಣೆಯನ್ನು ಒದಗಿಸುವ ಗುಣಮಟ್ಟದ ಸನ್ಗ್ಲಾಸ್ ನ್ನು ಖರೀದಿ ಮಾಡಿ. ಯುವಿ ಕಿರಣಗಳು ನಿಮ್ಮ ಕಣ್ಣುಗಳಿಗೆ ಹಾನಿಯನ್ನು ಉಂಟುಮಾಡಬಹುದು, ಇದು ಕಣ್ಣಿನ ಪೊರೆ ಮತ್ತು ಮ್ಯಾಕ್ಯುಲರ್ ಡಿಜೆನರೇಶನ್ನಂತಹ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಹೀಗಾಗಿ ಗಗಿಂ ಮತ್ತು ಗಗಿಃ ಕಿರಣಗಳನ್ನು ನಿರ್ಬಂಧಿಸುವಂತೆ ಸನ್ಗ್ಲಾಸ್ಗಳನ್ನು ಖರೀದಿಸಿ.ರಕ್ಷಣಾತ್ಮಕ ಕನ್ನಡಕಗಳನ್ನು ಬಳಸಿಸ್ವಿಮ್ಮಿಂಗ್, ಕ್ರೀಡೆ ಅಥವಾ ಹೊರಾಂಗಣದ ಕೆಲಸ ಮಾಡುವಾಗ ಪ್ರೊಟೆಕ್ಟಿವ ಸನ್ ಗ್ಲಾಸ್ ಗಳನ್ನು ಬಳಕೆ ಮಾಡಿ. ಈ ಕನ್ನಡಕಗಳು ನಿಮ್ಮ ಕಣ್ಣುಗಳಿಗೆ ಧೂಳು, ರಾಸಾಯನಿಕ ಮತ್ತು ಇತರೆ ಹಾನಿಕಾರಕ ವಸ್ತುಗಳಿಂದ ರಕ್ಷಣೆ ಮಾಡುತ್ತವೆ.ಕಣ್ಣಿನ ಅಲರ್ಜಿಗಳ ಬಗ್ಗೆ ಜಾಗರೂಕರಾಗಿರಿಅಲರ್ಜಿಕ್ ಕಾಂಜಂಕ್ಟಿವಿಟಿಸ್ ಬಗ್ಗೆ ಕಾಳಜಿ ಇರಲಿ, ಸಾಮಾನ್ಯವಾಗಿ ಬೇಸಿಗೆಯಲ್ಲಿ ಈ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಕಣ್ಣು ಕೆಂಪಾಗುವುದು, ತುರಿಕೆ ಲಕ್ಷಣಗಳು ಕಂಡು ಬರುತ್ತವೆ.

## ಥೈರಾಯ್ಡ್ ನಿರ್ವಹಿಸಲು ಆಹಾರಕ್ರಮ ಪಾಲನೆ ನಿರ್ಣಾಯಕ

ಥೈರಾಯ್ಡ್.. ಇದು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕೇಳುತ್ತಿರುವ ಆರೋಗ್ಯ ಸಮಸ್ಯೆಗಳಲ್ಲಿ ಒಂದು. ಅದರಲ್ಲೂ ಪುರಷರಿಗಿಂತ ಮಹಿಳೆಯರಲ್ಲೇ ಈ ಸಮಸ್ಯೆ ಹೆಚ್ಚಾಗಿ ಕಾಡುತ್ತಿದೆ.ಥೈರಾಯ್ಡ್ ಕುತ್ತಿಗೆ ಭಾಗದಲ್ಲಿ ಚಿಟ್ಟೆಯಾಕಾರ ಗ್ರಂಥಿಯಾಗಿದ್ದು, ಇದು ಟಿ–3 ಹಾಗೂ ಟಿ–4 ಹಾರ್ಮೋನ್ಗಳನ್ನು ಉತ್ಪತ್ತಿಸುತ್ತವೆ. ಇದು ಪಿಟ್ಯುಟರಿ ಗ್ರಂಥಿಯಿಂದ ಸ್ರವಿಸುವ ಥೈರಾಯ್ಡ್ ಆಗಿದ್ದು, ಟಿಎಸ್ಎಚ್ ಹಾರ್ಮೋನ್ ಉತ್ಪದಿಸಲಿದ್ದು, ದೇಹದ ಪಚನ ಕ್ರಿಯೆಯನ್ನು ನಿಯಂತ್ರಿಸುತ್ತದೆ. ಥೈರಾಯ್ಡ್ನಲ್ಲಿ ಹೈಪೋ ಥೈರಾಯ್ಡ್ ಮಹಿಳೆಯರಲ್ಲಿ ಹೆಚ್ಚು ಕಾಣಿಸಿಕೊಳ್ಳುತ್ತದೆ. ಇದು ತೂಕ ಹೆಚ್ಚಳಕ್ಕೆ ಕಾರಣವಾಗುತ್ತದೆ. ಇದು ಅತ್ಯಂತ ಅಪಾಯಕಾರಿ ಕೂಡ ಹೌದು. ಹೈಪೋ ಥೈರಾಯ್ಡಿನಿಂದ ಪಚನ ಕ್ರಿಯೆ ಸಂಪೂರ್ಣ ನಿಧಾನವಾಗುವುದರಿಂದ ದೇಹದಲ್ಲಿ ತೂಕ ಹೆಚ್ಚಳವಾಗುತ್ತದೆ. ಇದು ಕೂದಲು ಉದುರುವಿಕೆ, ರಕ್ತದೊತ್ತಡ ಹೆಚ್ಚಳ, ಸಕ್ಕರೆ ಕಾಯಿಲೆ ಇತ್ಯಾದಿ ರೋಗಕ್ಕೆ ಕಾರಣವಾಗಬಹುದು. ಹೀಗಾಗಿ ಥೈರಾಯ್ಡ್ನ ಲಕ್ಷಣ ಕಂಡು ಬಂದ ಕೂಡಲೇ ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆದುಕೊಳ್ಳಬೇಕು.ಥೈರಾಯ್ಡ್ ಹೊಂದಿರುವವರು ಆಹಾರ ಸೇವನೆಯಲ್ಲಿ ಹೆಚ್ಚು ಗಮನ ವಹಿಸಬೇಕು. ಥೈರಾಯ್ಡ್ ನಿರ್ವಹಣೆಯಲ್ಲಿ ಆಹಾರ ಕ್ರಮ ನಿರ್ಣಾಯಕವಾಗಿದೆ. ಈ ಆಹಾರ ಕ್ರಮದಿಂದ ಥೈರಾಯ್ಡ್ ಸಮಸ್ಯೆ ಗುಣಪಡಿಸಲು ಸಾಧ್ಯವಾಗುವುದಿಲ್ಲ.

## ಕಾಲುವೆಯಲ್ಲಿ ಚರಂಡಿ ನೀರು, ತ್ಯಾಜ್ಯಗಳ ದರ್ಶನ

**ಶಿವಮೊಗ್ಗ:** ನಗರದ ಹೃದಯ ಭಾಗದಲ್ಲಿರುವ ಪ್ರತಿಷ್ಠಿತ ಬಡಾವಣೆಗಳಾದ ರಾಜೇಂದ್ರ ನಗರ ಮತ್ತು ರವೀಂದ್ರನಗರ ಮಧ್ಯದಲ್ಲಿ ಹಾದುಹೋಗುವ ಕಾಲುವೆಯಲ್ಲಿ ನೀರು ಹರಿಯದೇ ನಗರದ ವಿವಿಧೆಡೆಯಿಂದ ಹರಿದು ಬರುತ್ತಿರುವ ಗಟಾರದ ತ್ಯಾಜ್ಯಗಳು ಮಾತ್ರ ಸಂಚಯಗೊಂಡಿದ್ದು, ಈ ಪ್ರದೇಶದ ತುಂಬಾ ದುರ್ನಾತ ಬೀರುತ್ತಿದೆ ಎಂದು ಸ್ಥಳೀಯ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ಮಾರ್ಟ್ ಸಿಟಿ ಯೋಜನೆಯಡಿ ಸುಮಾರು 14 ಕೋಟಿ ರೂ. ವೆಚ್ಚದಲ್ಲಿ ಇಲ್ಲಿ ಅತ್ಯದ್ಭುತವಾದ ಪಾರ್ಕ್ ನಿರ್ಮಾಣ ಮಾಡಿದ್ದರಿಂದ ಆಕರ್ಷಣೀಯ ಕೇಂದ್ರ ಬಿಂದುವಾಗಿತ್ತು. ಪಕ್ಕದಲ್ಲೇ ಶಟಲ್ ಬ್ಯಾಡ್ಮಿಂಟನ್ ಒಳಾಂಗಣ ಕ್ರೀಡಾಂಗಣವನ್ನೂ ನಿರ್ಮಿಸಲಾಗಿದೆ. ಸುತ್ತಲೂ ಸಾಂಸ್ಕೃತಿಕ ಚಟುವಟಿಕೆ ನಡೆಸಲು ಬಯಲು ರಂಗಮಂದಿರ ಇವೆಲ್ಲ ನಿರ್ಮಾಣಗೊಂಡು ಸ್ಥಳೀಯ ನಾಗರಿಕರಿಗೆ ಆಶಾಕಿರಣವಾಗಿತ್ತು. ಆದರೆ, ಈಗ ಚಾನಲ್‌ನಲ್ಲಿ ನೀರು ಬಿಡದೇ ಇರುವುದರಿಂದ ಮತ್ತು ಮೇಲ್ಭಾಗದ ಪ್ರದೇಶಗಳಿಂದ ನೇರವಾಗಿ ಚಾನಲ್‌ಗೆ ಒಳಚರಂಡಿ ನೀರು ಸೇರುತ್ತಿರುವುದರಿಂದ ಮತ್ತು ಪ್ಲಾಸ್ಟಿಕ್ ಇನ್ನಿತರ ತ್ಯಾಜ್ಯಗಳು ಶೇಖರಣೆಗೊಂಡಿರುವುದರಿಂದ ಸುಂದರವಾದ ಪಾರ್ಕ್ ಇದ್ದರೂ ಅಲ್ಲಿ ವಾಕಿಂಗ್ ಮಾಡಲು, ವಿಶ್ರಾಂತಿ ಪಡೆಯಲು ಆಗುತ್ತಿಲ್ಲ. ಇದಕ್ಕೆ ಕಾರಣ ಇಡೀ ಪ್ರದೇಶ ದುರ್ನಾತದಿಂದ ತುಂಬಿದೆ. ಸೊಳ್ಳೆ ಉತ್ಪಾದನಾ ಕೇಂದ್ರವಾಗಿ ಪರಿಣಮಿಸಿದೆ. ಅತಿ ಹೆಚ್ಚು ಜನರು ಸಾಂಕ್ರಾಮಿಕ ಕಾಯಿಲೆಗಳಿಂದ ನರಳುತ್ತಿದ್ದು, ಈ ಬಗ್ಗೆ ಶಾಶ್ವತ ಪರಿಹಾರಕ್ಕೆ ಹಲವು ಬಾರಿ ಪಾಲಿಕೆ ಆಡಳಿತ ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತಂದರೂ ಏನೂ ಉಪಯೋಗವಾಗಿಲ್ಲ ಎಂಬ ದೂರುಗಳು ಕೇಳಿಬರುತ್ತಿವೆ. ಅದಕ್ಕಾಗಿ ಸಾರ್ವಜನಿಕರು ದೊಡ್ಡ ಮಟ್ಟದ ಹೋರಾಟಕ್ಕೆ ಅಣಿಯಾಗುತ್ತಿದ್ದು, ನಗರಕ್ಕೆ ಆಗಮಿಸಿದ ಉಪ ಲೋಕಾಯುಕ್ತರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸ್ಥಳೀಯ ನಾಗರಿಕರ ಆರೋಗ್ಯದ ಹಿತದೃಷ್ಟಿಯಿಂದ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ರವೀಂದ್ರನಗರ ಮತ್ತು ರಾಜೇಂದ್ರನಗರ ನಿವಾಸಿಗಳ ಸಂಘ ಒತ್ತಾಯಿಸಿದೆ.

## ಕುವೆಂಪು ವಿ ವಿಯಲ್ಲಿ ಎಲ್ಲವೂ ಸರಿಯಿಲ್ಲ.!: ತನಿಖೆ ನಡೆಸುವಂತೆ ಡಾ.ಧನಂಜಯ ಸರ್ಜಿ ಆಗ್ರಹ

**ಶಿವಮೊಗ್ಗ:** ರಾಜ್ಯದ ಪ್ರತಿಷ್ಠಿತ ವಿಶ್ವಾವಿದ್ಯಾಲಯಗಳಲ್ಲಿ ಒಂದಾದ ಕುವೆಂಪು ವಿಶ್ವವಿದ್ಯಾಲಯ 36 ವರ್ಷ ಇತಿಹಾಸ ಹೊಂದಿದೆ, 2000ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಶಿವಮೊಗ್ಗ ಕುವೆಂಪು ವಿಶ್ವವಿದ್ಯಾಲಯದಲ್ಲಿ ನಡೆದಿರುವ ಬ್ರಹ್ಮಾಂಡ ಭ್ರಷ್ಟಚಾರ ಮತ್ತು ಅಸಮರ್ಪಕ ಆಡಳಿತದ ಕುರಿತು ಸರ್ಕಾರ, ಉನ್ನತ ಮಟ್ಟದ ತನಿಖೆ ನಡೆಸಿ ಭ್ರಷ್ಟಚಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಮಂಗಳವಾರ ವಿಧಾನಪರಿಷತ್ ನಲ್ಲಿ ನಡೆದ ಅಧಿವೇಶನದಲ್ಲಿ ವಿಧಾನ ಪರಿಷತ್ ಶಾಸಕ ಡಾ.ಧನಂಜಯ ಸರ್ಜಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್ ಅವರ ಮೂಲಕ ಸರ್ಕಾರವನ್ನು ಆಗ್ರಹಿಸಿದರು. ಕುವೆಂಪು ವಿ.ವಿಯಲ್ಲಿನ ಭ್ರಷ್ಟಾಚಾರ ಹಾಗೂ ದಕ್ಷ ಅಡಳಿತ ನಡೆಸುವಲ್ಲಿ ವಿಫಲವಾಗಿರುವ ಕುಲಸಚಿವರ ವಿರುದ್ಧ ಇತ್ತೀಚಿಗೆ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿ ಸಮಗ್ರ ತನಿಖೆಗೆ ಆಗ್ರಹಿಸಿವೆ. ಸ್ಥಳೀಯ ಪತ್ರಿಕೆಗಳಲ್ಲಿ ಪ್ರಕಟವಾಗಿರುವುದು ವಿಶ್ವವಿದ್ಯಾಲಯದಲ್ಲಿ ಎಲ್ಲವೂ ಸರಿಯಿಲ್ಲ ಎಂಬುದನ್ನು ತೋರಿಸುತ್ತದೆ. ದೇಶದ ಮುಂದಿನ ಭವಿಷ್ಯವಾಗಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಬದುಕನ್ನು ರೂಪಿಸುವ ಮಹತ್ತರ ಜವಬ್ದಾರಿ ನಿರ್ವಹಿಸಬೇಕಾದ ವಿಶ್ವವಿದ್ಯಾಲಯ ಏಕರೂಪದ ವೇಳಾಪಟ್ಟಿ ಅನುಸರಿಸುವಲ್ಲಿ ಲೋಪ, ವಿ.ವಿ.ಯ ಪ್ರಸಾರಾಂಗದಲ್ಲಿ ಲಕ್ಷಾಂತರ ರೂಪಾಯಿಗಳ ಅವ್ಯವಹಾರ ಆಗಿ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾಗಿದೆ. ವಿ.ವಿ ಯ ದೂರ ಶಿಕ್ಷಣ ಪ್ರವೇಶಾತಿ ಮತ್ತು ವ್ಯಾಸಂಗದ ಇನ್ನಿತರ ನಿರ್ವಹಣೆಗಳನ್ನು ಎಲ್.ಎಂ.ಎಸ್ ಮುಖಾಂತರ ನಡೆಸಲು ಬೆಂಗಳೂರಿನ ಪೀಮ್ ಸಾಫ್ಟ್‌ವೇರ್ ಲಿಮಿಟೆಡ್ ಕಂಪನಿಯೊಂದಿಗೆ ಮಾಡಿಕೊಂಡಿರುವ ಒಪ್ಪಂದ, ದರ ನಿರ್ಣಯಗಳಲ್ಲಿನ ತಪ್ಪುಗಳಿಂದಾಗಿ ವಿ.ವಿ.ಗೆ ಲಕ್ಷಾಂತರ ರೂಪಾಯಿಗಳ ನಷ್ಟವಾಗಿರುವುದಾಗಿ ಪ್ರತಿಭಟನಕಾರರು ದೂರಿರುತ್ತಾರೆ ಎಂದು ಹೇಳಿದರು. ಆಶ್ಚರ್ಯದ ವಿಷಯವೇನೆಂದರೇ ಸದರಿ ಸಂಸ್ಥೆಯವರು ಈ ಹಿಂದೆ ಅಧ್ಯಯನ ಕೇಂದ್ರ ತೆರೆದು ಆ ಮೂಲಕ ವಿದ್ಯಾರ್ಥಿಗಳಿಂದ ಪಡೆಯಲಾಗಿದ್ದ ಶುಲ್ಕಗಳನ್ನು ವಿಶ್ವವಿದ್ಯಾಲಯಕ್ಕೆಪಾವತಿಸದೆ ಕೋಟ್ಯಾಂತರ ಶುಲ್ಕವನ್ನು ಬಾಕಿ ಉಳಿಸಿಕೊಂಡಿದ್ದು, ಸದರಿ ಸಂಸ್ಥೆಯು ವಿಶ್ವಾವಿದ್ಯಾಲಯಕ್ಕೆ ನೀಡಿದ 30 ಲಕ್ಷದ ಚೆಕ್ ಬೌನ್ಸ್ ಆಗಿ ಪ್ರಕರಣ ನ್ಯಾಯಲಯದಲ್ಲಿ ಇದೆ. ಇಂತಹ ಸಂಸ್ಥೆಯೊಂದಿಗೆ ಮತ್ತೊಮ್ಮೆ ವ್ಯವಹರಿಸಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಕುವೆಂಪು ವಿಶ್ವಾವಿದ್ಯಾಲಯದವು ದೂರಶಿಕ್ಷಣ ವ್ಯಾಸಂಗ ಮಾಡಲು ಪ್ರವೇಶಾತಿಯನ್ನು ಎಲ್‌ಎಂಎಸ್ ಮುಖಾಂತರ ನಡೆಸಲು ಪೀಮ್ ಸಾಫ್ಟ್‌ವೇರ್ ಲಿಮಿಟೆಡ್ ಸಂಸ್ಥೆಯೊಂದಿಗೆ ಹಲವು ಆಕ್ಷೇಪಣೆಗಳನ್ನು ಬದಿಗೊತ್ತಿ ಕೆ.ಟಿ.ಟಿ.ಪಿ ಕಾಯ್ದೆಯನ್ನು ಉಲ್ಲಂಘನೆ ಮಾಡಿ ಒಪ್ಪಂದ ಮಾಡಿಕೊಂಡಿರುವುದು ವಿಶ್ವಾವಿದ್ಯಾಲಯಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟವನ್ನು ಉಂಟುಮಾಡಿದೆ ಮತ್ತು ಇದರಲ್ಲಿ ಭ್ರಷ್ಟಚಾರವಾಗಿರುವದು ಮೇಲ್ನೋಟಕ್ಕೆ ಕಂಡುಬರುತ್ತಿದ್ದು ಸೂಕ್ತ ತನಿಖೆ ನಡೆಸುವಂತೆ ಹೇಳಿದರು.



# ಯುವಜನತೆ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಲಿ

ಭಾರತದಲ್ಲಿ ಇಂದು ಯುವಕರ ಸಂಖ್ಯೆಯು ಶೇ 50% ರಷ್ಟಿದ್ದು ದೇಶದ ಅಭಿವೃದ್ಧಿಯಲ್ಲಿ ಇವರ ಪಾತ್ರವು ಪ್ರಮುಖವಾಗಿದೆ. ಕೃಷಿಯನ್ನು ದೇಶದ ಆರ್ಥಿಕತೆಯ ಬೆನ್ನೆಲುಬು ಎಂದು ಕರೆಯಲಾಗಿದ್ದು ಗ್ರಾಮೀಣ ಭಾಗದಲ್ಲಿನ ಯುವಕರು ಮತ್ತು ನಿರುದ್ಯೋಗಿ ಯುವಸಮುದಾಯ ಕೃಷಿ ಮತ್ತು ತೋಟಗಾರಿ-ಕೆಯ ಬೆಳೆಗಳು ಹಾಗೂ ನರ್ಸರಿ ಉದ್ಯಮವನ್ನು ಆಯ್ಕೆ ಮಾಡಿಕೊಂಡು ಗಮನಾರ್ಹವಾದ ಪ್ರಗತಿಯನ್ನು ಸಾಧಿಸಬಹುದು. ನರ್ಸರಿ ಉದ್ಯಮವು ಇಂದು ಸಾಕಷ್ಟು ಬೇಡಿಕೆಯ ಉದ್ಯಮವಾಗುತ್ತಿದ್ದು ಯುವಕರು ಇದರ ಕುರಿತು ಅರಿವನ್ನು ಮೂಡಿಸಿಕೊಳ್ಳಬೇಕು. ಆಹಾರವೇ ಔಷಧವಾಗಿದ್ದು ನಾವು ತಿನ್ನುವ ಆಹಾರದ ಬಗ್ಗೆ ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳುವ ಅಗತ್ಯವಿದೆ.
ಅಲ್ಲದೆ ಸಣ್ಣ ಮತ್ತು ದೊಡ್ಡ ಪ್ರಮಾಣದ ನರ್ಸರಿ ಉದ್ಯಮವನ್ನು ಆರಂಭಿಸಲು ಬೇಕಾದ ಬಂಡವಾಳ, ವ್ಯಾಪ್ತಿ ಬಗ್ಗೆ ಅಧ್ಯಯನ ಮಾಡಬೇಕು. ತೋಟಗಾರಿಕೆ ಇಲಾಖೆಯಿಂದ ಸಬ್ಸಿಡಿ ಸಿಗುತ್ತದೆ. ತರಕಾರಿ, ಕೋಕೋ, ಕಾಳು ಮೆಣಸು, ತೆಂಗು ಬೆಳೆಗಳನ್ನು ಸಾವಯವ ಕೃಷಿಯಲ್ಲಿ ಬೆಳೆಯಬಹುದು. ಮಣ್ಣಿನ ಆರೋಗ್ಯವನ್ನು ರೈತರು ಕಾಪಾಡಿಕೊಳ್ಳಬೇಕು. ಅತಿಯಾದ ಕೀಟನಾಶಕ ಮತ್ತು ರಸಗೊಬ್ಬರಗಳ ಬಳಕೆಯಿಂದಾಗಿ ನಮ್ಮ ಭೂಮಿಯನ್ನು ಬಂಜರಗೊಳಿಸುತ್ತಿದ್ದೇವೆ. ಅದರ ಬದಲು ಸಾವಯವ ಕೃಷಿಗೆ ಮತ್ತೆ ಮರಳುವ ಮೂಲಕ ನಮ್ಮ ಪರಿಸರವನ್ನು ಉಳಿಸಬೇಕಿದೆ. ಕೃಷಿಯು ಪುನ: ಸಾವಯವದ ವಿಧಾನದ ಕಡೆಗೆ ಮರಳುವುದು ಅಗತ್ಯ.
ಕಡಿಮೆ ಖರ್ಚಿನಲ್ಲಿ ಉತ್ತಮ ಬೆಳೆಯನ್ನು ತೆಗೆಯುವಂತಹ ಸಾವಯವ ಕೃಷಿಯ ಬಗ್ಗೆ ಗಮನವನ್ನು ಹರಿಸಬೇಕು. ನಮ್ಮ ಹಿಂದಿನ ಕಾಲದ ಕೃಷಿಯು ಹೆಚ್ಚು ಆರೋಗ್ಯಪೂರ್ಣವಾಗಿತ್ತು ಆದರೆ ಇಂದು ಲಾಭದ ದುರಾಸೆಯಿಂದಾಗಿ ಕೃಷಿಯು ಸೋಲುತ್ತಿದೆ ಹಾಗೂ ಆರೋಗ್ಯವೂ ಸಹ ಕೆಡುತ್ತಿದೆ.



## ಅಡಿಕೆ ತೋಟದ ಬೆಳೆಗಳ ಹಾಳುಮಾಡುತ್ತಿರುವ ಕಾಡು ಹಂದಿಗಳು

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಕಾಡಾನೆಗಳ ದಾಳಿಯಿಂದ ಅಡಿಕೆ, ತೆಂಗು, ಬಾಳೆ, ಇನ್ನಿತರೆ ತೋಟದ ಬೆಳೆಗಳನ್ನು ಕಳೆದುಕೊಳ್ಳುತ್ತಿರುವ ಲಿಂಗದಹಳ್ಳಿ ಹೋಬಳಿಯ ರೈತರಿಗೆ ಈಗ ನಂದಿಬಟ್ಟಲು ಮತ್ತು ತಿಗಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ರೈತರುಗಳು ರಾತ್ರಿಯ ವೇಳೆ ಕಾಡು ಹಂದಿಗಳು ಅಡಿಕೆ, ತೆಂಗು, ಬಾಳೆ ಮುಂತಾದ ತೋಟದ ಬೆಳೆಗಳನ್ನು ಮುರಿದು ತಿಂದು ಹಾಕುತ್ತಿವೆ.
ಇದರಿಂದ ಮೂರು ವರ್ಷ ಒಳಗಿನ ಅಡಿಕೆ ಮತ್ತು ತೆಂಗಿನಮರಗಳು ನೆಲಕ್ಕುರುಳುತ್ತಿದ್ದು, ಇದರಿಂದ ಕಷ್ಟಪಟ್ಟು ಬೆಳೆದ ರೈತರುಗಳಿಗೆ ಗಾಯದ ಮೇಲೆ ಬರೆ ಎಳೆದಂತಾಗುತ್ತಿದೆ, ಕಲ್ಲತ್ತಿಪುರದ ರೈತ ಸೆಲ್ವರಾಜ್ ರವರು ಇದೇ ಗ್ರಾಮದ ಸರ್ವೆ ನಂಬರ್ 46 ರಲ್ಲಿರುವ 3 ಎಕರೆ ಜಮೀನಿನಲ್ಲಿ ಕಳೆದ 5 ವರ್ಷಗಳ ಹಿಂದೆ ಅಡಿಕೆ ಸಸಿಗಳನ್ನು ನೆಟ್ಟು ಪೋಷಣೆ ಮಾಡುತ್ತಾ ಬರುತ್ತಿದ್ದರು.ಆದರೆ ಸಮೃದ್ಧವಾಗಿ ಬೆಳೆದಿದ್ದ ಅಡಿಕೆ ತೋಟಕ್ಕೆ ರಾತ್ರಿ ಸಮಯದಲ್ಲಿ ಕಾಡು ಹಂದಿಗಳ ಗುಂಪು ದಾಳಿ ಮಾಡಿ ಸುಮಾರು 70 ಕ್ಕೂ ಅಧಿಕ ಅಡಿಕೆ ಗಿಡಗಳನ್ನು ಮುರಿದು ಹಾಕಿದ್ದು, ರೈತರು ತೋಟದ ಬೆಳೆಗಳನ್ನು ರಕ್ಷಣೆ ಮಾಡಿಕೊಳ್ಳಲು ಹರಸಾಹಸ ಪಡುವಂತಾಗಿದೆ. ಇದುವರೆಗೂ ರಾಗಿ, ಭತ್ತ, ಜೋಳ, ಶೇಂಗಾ ಮುಂತಾದ ಮಳೆಯಾಶ್ರಿತ ಬೆಳೆಗಳನ್ನು ತಿಂದು ಹಾಕುತ್ತಿದ್ದ ಕಾಡು ಹಂದಿಗಳು ಇತ್ತೀಚಿನ ಕೆಲ ದಿನಗಳಿಂದ ಅಡಿಕೆ, ತೆಂಗು, ಬಾಳೆ ಮುಂತಾದ ತೋಟದ ಬೆಳೆಗಳನ್ನು ಹಾಳುಮಾಡಿತ್ತವೆ. ಬ್ಯಾಂಕ್ ಇನ್ನಿತರೆ ಕಡೆಗಳಿಂದ ಸಾಲ ಮಾಡಿ ಬೆಳೆ ಮಾಡಿರುವ ನಮ್ಮಂತ ರೈತರುಗಳಿಗೆ ವ್ಯವಸಾಯವೇ ತ್ರಾಸದಾಯಕವೆಂಬಂತಾಗಿದೆ ಎಂದು ನೊಂದ ರೈತ ಸೆಲ್ವರಾಜ್ ಹೇಳಿದರು.

# ಕಡೂರು: ವೈಭವದ ವೀರಭದ್ರಸ್ವಾಮಿ ಜಾತ್ರೆ: ಹರಿದು ಬಂದ ಭಕ್ತ ಸಾಗರ



**ಚಿಕ್ಕಜಾಜೂರು:** ಚಿಕ್ಕಜಾಜೂರು ಸಮೀಪದ ಕಡೂರು ವೀರಭದ್ರಸ್ವಾಮಿಯ ರಥೋತ್ಸವ ಸುಮಾರು 25 ಸಾವಿರಕ್ಕೂ ಹೆಚ್ಚು ಭಕ್ತ ಸಮೂಹದ ನಡುವೆ ಮಂಗಳವಾರ ಸಂಜೆ ಅದ್ದೂರಿಯಾಗಿ ಜರುಗಿತು.
ಮಂಗಳವಾರ ಬೆಳಿಗ್ಗೆಯಿಂದಲೇ ಸ್ವಾಮಿಗೆ ವಿವಿಧ ಪೂಜಾ ಕಾರ್ಯಗಳನ್ನು ನಡೆಸಲಾಯಿತು. ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಕೂರಿಸಿ, ಗ್ರಾಮದ ರಸ್ತೆಗಳಲ್ಲಿ ನಂದಿಕೋಲು ಕುಣಿತ, ಡೊಳ್ಳುಕುಣಿತ ಹಾಗೂ ಗ್ರಾಮದ ವೀರಭದ್ರೇಶ್ವರ ವೀರಗಾಸೆ ಕಲಾ ತಂಡದ ವೀರಗಾಸೆ ನೃತ್ಯದೊಂದಿಗೆ ಅದ್ದೂ-ರಿಯಾಗಿ ಮೆರವಣಿಗೆ ನಡೆಸಲಾಯಿತು. ಸಂಜೆ ಉತ್ಸವ ಮೂರ್ತಿಯನ್ನು ಬೆಟ್ಟದ ಬಳಿಯ ದೇವಸ್ಥಾನಕ್ಕೆ ಕರೆ ತರಲಾಯಿತು. ನಂತರ ,ಸುಂದರವಾಗಿ ಅಲಂಕರಿಸಲ್ಪಟ್ಟ ರಥಕ್ಕೆ ದೊಡ್ಡೆಡೆ ಸೇವೆಯನ್ನು ಸಲ್ಲಿಸಿ, ಸ್ವಾಮಿಯ ಉತ್ಸವ ಮೂರ್ತಿಯನ್ನು ರಥದಲ್ಲಿ ಕೂರಿಸಲಾಯಿತು.
ರೂ. 5.05 ಲಕ್ಷಕ್ಕೆ ಮುಕ್ತಿ ಬಾವುಟ ಹರಾಜು: ಉತ್ಸವ ಮೂರ್ತಿಯನ್ನು ರಥದಲ್ಲಿ ಕೂರಿಸಿದ ನಂತರ, ಮುಕ್ತಿ ಬಾವುಟ ಹಾಗೂ ಹೂವಿನ ಹಾರಗಳನ್ನು ಹರಾಜು ಕೂಗಲಾಯಿತು. ರಥದ ಮೇಲಿನ ಮುಕ್ತಿ ಬಾವುಟವನ್ನು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಕೊಡಗವಳ್ಳಿ ಹಟ್ಟಿ ಗ್ರಾಮದ ಎಂ.ಬಿ. ತಿಪ್ಪೇಸ್ವಾಮಿಯವರು ರೂ. 5.05 ಲಕ್ಷಕ್ಕೆ ಹರಾಜು ಕೂಗಿದರು. ರೂ. 2.97 ಲಕ್ಷಕ್ಕೆ ಐದು ಹೂವಿನ ಹಾರಗಳ ಹರಾಜು:

### ರೂ. 5.05 ಲಕ್ಷಕ್ಕೆ ಮುಕ್ತಿ ಬಾವುಟ ಹರಾಜು. ರೂ. 2.97 ಲಕ್ಷಕ್ಕೆ ಐದು ಹೂವಿನ ಹಾರಗಳ ಹರಾಜು

ನಂತರ ಸ್ವಾಮಿಯ ರಥಕ್ಕೆ ಹಾಕಲಾಗಿದ್ದ ಹಾಗೂ ಉತ್ಸವ ಮೂರ್ತಿಯ ಮೇಲಿನ ಒಟ್ಟು 5 ಹೂವಿನ ಹಾರಗಳನ್ನು ಹರಾಜು ಮಾಡಲಾಯಿತು. ಮೊದಲನೇ ಹೂವಿನ ಹಾರವನ್ನು ಹೊಳಲ್ಕೆರೆ ಶಿವಣ್ಣ ಅವರ ಮಕ್ಕಳು ರೂ. 65,000, ಎರಡನೇ ಹಾರವನ್ನು ಸಂತೆಬೆನ್ನೂರಿನ ನಂಜಯ್ಯಕುಮಾರ್ ರೂ. 50,000, ಮೂರನೆ ಹಾರವನ್ನು ಚಿತ್ರದುರ್ಗದ ಸಿ.ಬಿ. ಅಮಿತ್ ರೂ. 52,000, ನಾಲ್ಕನೇ ಹೂವಿನ ಹಾರವನ್ನು ಚಿಕ್ಕಜಾಜೂರಿನ ಎಂ.ಎಸ್. ಚೇತನ್ ರೂ. 70,000, ಕೊನೆಯ ಹೂವಿನ ಹಾರವನ್ನು ತೊಡರನಾಳ್ ಅಜ್ಜಣ್ಣ ರೂ. 60,000 ಕ್ಕೆ ಹರಾಜು ಹಾಕಲಾಯಿತು. ಹರಾಜು ಪ್ರಕ್ರಿಯೆ ಮುಗಿದ ನಂತರ ಮಹಾ ಮಂಗಳಾರತಿ ಮಾಡಲಾಯಿತು. ನೂರಾರು ಭಕ್ತರು ರಥದ ಚಕ್ರಗಳಿಗೆ ತೆಂಗಿನ ಕಾಯಿ ಹೊಡೆದರು. ನಂತರ ಭಕ್ತರು ಸ್ವಾಮಿಯ ರಥವನ್ನು ಭಕ್ತರು ಎಳೆದು ಧನ್ಯತಾ ಭಾವದಲ್ಲಿ ಭಕ್ತಿ ಸಮರ್ಪಿಸಿದರು.
ಸ್ವಾಮೀಜಿಗಳಿಂದ ಆಶೀರ್ವಚನ: ವೀರಭದ್ರಸ್ವಾಮಿ ದೇವಸ್ಥಾನದ ಪ್ರಭಾರಿ ಆಡಳಿತಾಧಿಕಾರಿಗಳು ಹಾಗೂ ದಾವಣಗೆರೆ ವಿರಕ್ತಮಠದ ಡಾ. ಬಸವಪ್ರಭು ಸ್ವಾಮೀಜಿ ಹಾಗೂ ಗುರುಕಲ್ ಮಠದ ಶಾಂತವೀರ ಗುರು ಮುರುಘರಾಜೇಂದ್ರ ಸ್ವಾಮೀಜಿ ಅವರುಗಳು ರಥೋತ್ಸವಕ್ಕೂ ಮುನ್ನ ಭಕ್ತರನ್ನು ಉದ್ದೇಶಿಸಿ ಆಶೀರ್ವಚನ ನೀಡಿದರು.ಅನ್ನಸಂತರ್ಪಣೆ: ವೀರಭದ್ರಸ್ವಾಮಿಯ ಜಾತ್ರೆಯ ಅಂಗವಾಗಿ ಚನ್ನಗಿರಿಯ ಲಿಂಗದಹಳ್ಳಿ ವಂಶಸ್ಥರಾದ ಉಮೇಶಣ್ಣ, ದಿ. ಷಡಕ್ಷರಿ ಬಾಬು, ರೇಣುಕಣ್ಣ ಹಾಗೂ ದಿ. ಭದ್ರಣ್ಣ ವಂಶಸ್ಥರು ಸ್ವತಃ ಅಡುಗೆ ತಯಾರಿಸಿ, ಸೋಮವಾರ ಹಾಗೂ ಮಂಗಳವಾರ ಜಾತ್ರೆಗೆ ಬರುವ ಎಲ್ಲಾ ಭಕ್ತರಿಗೆ ಸಿಹಿ ಊಟದ ಪ್ರಸಾದ ವ್ಯವಸ್ಥೆಯನ್ನು ಮಾಡಿದ್ದರು.
ಚಿಕ್ಕಜಾಜೂರು, ಹೊಳಲ್ಕೆರೆ ಪೊಲೀಸ್ ಸಿಬ್ಬಂದಿ ಹಾಗೂ ಜಿಲ್ಲಾ ಪೊಲೀಸ್ ಸಿಬ್ಬಂದಿ ಭದ್ರತೆ ನೀಡಿದ್ದರು. ರಥೋತ್ಸವಕ್ಕೆ ಜನರ ನಿಯಂತ್ರಣಕ್ಕಾಗಿ ನಾಕ ಬಂದಿಯನ್ನು ಹಾಕಲಾಗಿದ್ದು, ವಾಹನಗಳ ನಿಲುಗಡೆಗಾಗಿ ರಸ್ತೆಯ ಪಕ್ಕದಲ್ಲಿನ ಜಮೀನುಗಳಲ್ಲಿ ನಿಲ್ಲಿಸುವ ವ್ಯವಸ್ಥೆಯನ್ನು ಮಾಡಲಾಗಿತ್ತು.

## ದೈಹಿಕ-ಮಾನಸಿಕ ಸದೃಢವಾಗಿರಲಿ



**ಹೊನ್ನಾಳಿ:** ಆರೋಗ್ಯವಂತ ಮಕ್ಕಳು ದೇಶಕ್ಕೆ ಆಸ್ತಿ ಚಿಕ್ಕವಯಸ್ಸಿನಿಂದಲೇ ದೈಹಿಕ ಮಾನಸಿಕವಾಗಿ ಸದೃಡದಿಂದ ಬೆಳೆದರೆ ಮುಂದಿನ ಶಿಕ್ಷಣ ಕಲಿಕೆಗೆ ಅವಿಭಾಜ್ಯ ಅಂಗವಾಗುತ್ತದೆ ಎಂದು ಮುಖ್ಯೋಪಾಧ್ಯಾಯ ಎಂ.ತೀರ್ಥಲಿಂಗಪ್ಪ ಹೇಳಿದರು.ನ್ಯಾಮತಿ ತಾಲೂಕಿನ ಹೊಸಜೋಗ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅನಿಮಿಯಮುಕ್ತ ಭಾರತ ಕಾರ್ಯಕ್ರಮದಡಿಯಲ್ಲಿ ಸೌಳಂಗ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ಅಧಿಕಾರಿಗಳು ಸಿಬ್ಬಂದಿಗಳು ಮಕ್ಕಳ ರಕ್ತ ಹಿನತೆ ಹೋಗಲಾಡಿಸಲು ಶಾಲೆಯ ಎಲ್ಲಾ ಮಕ್ಕಳಿಗೆ ಹಿಮೋಗ್ಲೋಬಿನ್ ಪರೀಕ್ಷೆನಡೆಸಿದರು. ಶಾಲೆಯಲ್ಲಿ 115 ಮಕ್ಕಳಿದ್ದು ಶಾಲಾಮಕ್ಕಳು ಶಿಕ್ಷಣ ಕಲಿಕಾ ಮಟ್ಟ ಹೆಚ್ಚಿಸುವದರಜೊತೆಗೆ ಎಲ್ಲಾ ಮಕ್ಕಳು ಆರೋಗ್ಯದಿಂದ ಸದೃಡವಾಗಿ ಬೆಳೆಯಲು ಸಹಕಾರಿಯಾಗುತ್ತದೆ.ಆರೋಗ್ಯ ಇಲಾಖೆ ವತಿಯಿಂದ ಆರೋಗ್ಯ ಪರೀಕ್ಷೆ ನಡೆಸುತ್ತಾ ಹೋದರೆ ಎಲ್ಲಾ ಮಕ್ಕಳು ಉತ್ತಮ ಆಹಾರ ಸೇವನೆಯಿಂದ ದಷ್ಟಪುಷ್ಟವಾಗಿ ಬೆಳೆದರೆ ಎಲ್ಲಾ ವಿಷಯದಲ್ಲೂ ಜ್ಞಾನಮಟ್ಟ ಹೆಚ್ಚಾಗುತ್ತದೆ ಎಂದರು. ಈ ಸಂದಬ್ದಲ್ಲಿ ಸೌಳಂಗ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ಅಧಿಕಾರಿಗಳು ಆರೋಗ್ಯ ಶಿಕ್ಷಕರಾದ ಅಕ್ಷತಾ,ಲಕ್ಷ್ಮೀಬಾಯಿ,ಕೆ.ಎಸ್.ಮೋಹನ್ ಸಿಬದಿಗಳು,ಗ್ರಾಪಂ ಸದಸ್ಯರಾದ ಕೇಶ್ಯಾನಾಯ್ಕ,ವಿರೇಶ್‌ನಾಯ್ಕ,ರೇವತಿಪರವ ೀಶ್ವರಪ್ಪ,ಎಸ್‌ಡಿಎಂಸಿ ಸದಸ್ಯರಾದ ಚಂದ್ರಪ್ಪ,ವಾಸು,ಧನಶೇಖರ,ಚಂದ್ರನಾಂ ಯ್ಕ.ಶಿಕ್ಷಕರಾದ ಹೆಚ್.ಬಸವರಾಜಪ್ಪ, ಹೆಚ್.ಬಿ.ಭಾರತಿ,ಹೆಚ್.ಸಿ.ಲೋಕೇಶ್‌ಪ್ಪ.ಕೆ.ಪಿ.ಸೌಖ್ಯ ಕೆ.ಶಾಂತಕುಮಾರಿ,ಆಶಾ ಸೇರಿದಂತೆ ಶಾಲಾ ಮಕ್ಕಳು ಇದ್ದರು.

## ತೀರ್ಥ- ಪ್ರಸಾದ ವಿತರಣೆ

**ಶಿವಮೊಗ್ಗ:** ಪ್ರಯಾಗರಾಜ್‌ನಲ್ಲಿ 45ದಿನಗಳ ಕಾಲ ನಡೆದ ವಿಶ್ವ ಪ್ರಸಿದ್ಧ ಮಹಾಕುಂಭಮೇಳದಲ್ಲಿ ಭಾಗವಹಿಸಿದವರ ಅನುಭವ ಮತ್ತು ಸಂಗಮದ ತೀರ್ಥ-ಪ್ರಸಾದ ವಿತರಣಾ ಕಾರ್ಯಕ್ರಮವನ್ನು ಇಲ್ಲಿಯ ವಿನೋಬನಗರದ ಕಲ್ಲಹಳ್ಳಿ ಶ್ರೀ ಅಭೀಷ್ಟವರದ ಮಹಾಗಣಪತಿ ದೇವಾಲಯದ ಆವರಣದಲ್ಲಿ ಆಯೋಜಿಸಲಾಗಿತ್ತು. ಪ್ರಯಾಗ್ ರಾಜ್‌ದಿಂದ ತಂದ ಗಂಗಾಜಲವನ್ನು ಗಣಪತಿಯ ಸನ್ನಿಧಾನದಲ್ಲಿ ವೇಧೋಕ್ತ ಮಂತ್ರಗಳೊಂದಿಗೆ ಪೂಜಿಸಲಾಯಿತು. ದೇವಾಲಯ ಸಂವರ್ಧನಾ ಸಮಿತಿ, ಕರ್ನಾಟಕ ರಾಜ್ಯ ಸಂಯೋಜಕ್, ವಕ್ತಾರ ಮನೋಹರ ಮಠದ್, ಶಿವಮೊಗ್ಗ ಜಿಲ್ಲಾ ಸಂಘಚಾಲಕ ಬಿ.ಎ, ರಂಗನಾಥ್. ವಿಶ್ವ ಹಿಂದೂ ಪರಿಷತ್, ಜಿಲ್ಲಾ ಅಧ್ಯಕ್ಷ ವಾಸುದೇವ್. ಗಣಪತಿ ದೇವಾಲಯದ ಉಪಾಧ್ಯಕ್ಷ ಸೋಮಶೇಖರ್, ವಿಜಯೇಂದ್ರ ಸೂಳಿಕೆರೆ ,ಡಾ. ರವಿಕಿರಣ್, ತೇಜಸ್ವಿ, ಶ್ರೀಹರಿ, ನಟರಾಜ್ ಇದ್ದರು.

# ಶಾಲೆಗಳಲ್ಲಿ ಲೈಂಗಿಕ ಶಿಕ್ಷಣ ನೀಡಲು ಮುಂದಾದ ಇಲಾಖೆ, ಕೆಲ ಸಂಘಟನೆಗಳ ಆಕ್ರೋಶ




**ಬೆಂಗಳೂರು:** ಮಕ್ಕಳಲ್ಲಿ ಜಾಗೃತಿ ಮೂಡಿಸಲು ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ನೈತಿಕ ಶಿಕ್ಷಣದ ಹೆಸರಿನಲ್ಲಿ ಲೈಂಗಿಕ ಶಿಕ್ಷಣ ನೀಡಲು ಶಾಲಾ ಶಿಕ್ಷಣ ಇಲಾಖೆ ಮುಂದಾಗಿದ್ದು, ಕೆಲ ಸಂಘಟನೆಗಳು ಆಕ್ರೋಶಕ್ಕೆ ಕಾರಣವಾಗಿದೆ.

ಶಾಲೆಗಳಲ್ಲಿ ಲೈಂಗಿಕ ಶಿಕ್ಷಣ ನೀಡಲು ಈ ಹಿಂದೆ 2015 ರಲ್ಲಿಯೂ ಪ್ರಯತ್ನಗಳಾಗಿತ್ತು. ಆಗ ಹೆಚ್.ಎಸ್.ದೊರೆಸ್ವಾಮಿ ಸೇರಿದಂತೆ ಅನೇಕರು ಭಾರಿ ವಿರೋಧ ವ್ಯಕ್ತ ಪಡಿಸಿದ್ದರು. ಮಕ್ಕಳಲ್ಲಿ ಲೈಂಗಿಕ ಶಿಕ್ಷಣ ನೀಡಿ ಸಮಾಜದ ಅಧಃಪತನಕ್ಕೆ ಸರ್ಕಾರವೇ ಕಾರಣವಾಗಲಿದೆ ಎಂದು ಆಕ್ರೋಶಗಳು ವ್ಯಕ್ತವಾಗಿದ್ದವು. ಪ್ರಗತಿ ಪರ ಸಂಘಟನೆಗಳು ಸೇರಿದಂತೆ ಭಾರೀ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಸರ್ಕಾರ ತನ್ನ ಆಲೋಚನೆಗಳಿಂದ ಹಿಂದೆ ಸರಿದಿತ್ತು.

ಈಗ ಮತ್ತೆ ಲೈಂಗಿಕ ಶಿಕ್ಷಣದ ವಿವಾದ ಸದ್ದು ಮಾಡಲಾರಂಭಿಸಿದೆ. ಕೇಂದ್ರ ಸರ್ಕಾರ ಹೊಸ ಶಿಕ್ಷಣ ನೀತಿ ರೂಪಿಸಿದ್ದು, ಅದನ್ನು ಒಪ್ಪುವುದಿಲ್ಲ ಎಂದು ಕಾಂಗ್ರೆಸ್ ಪಕ್ಷದ ತನ್ನ ಚುನಾವಣಾ ಪ್ರಣಾಳಿಕೆಯಲ್ಲೇ ಪ್ರಕಟಿಸಿತ್ತು. ಸರ್ಕಾರ ರಚನೆಯಾದ ಮೇಲೆ ರಾಜ್ಯ ಸರ್ಕಾರ ಪ್ರತ್ಯೇಕ ಶಿಕ್ಷಣ ನೀತಿ ರೂಪಿಸಲು ಉನ್ನತಾಧಿಕಾರ ಸಮಿತಿ ರಚನೆ ಮಾಡಿದೆ.

ರಾಜ್ಯ ಶಿಕ್ಷಣ ನೀತಿ ಇನ್ನೂ ಅಖೈರುಗೊಂಡಿಲ್ಲ, ಈ ನಡುವೆ ನೈತಿಕ ಶಿಕ್ಷಣ ನೀಡುವ ಚರ್ಚೆಗಳು ಆರಂಭವಾಗಿವೆ. 8 ರಿಂದ 12ನೇ ತರಗತಿಯ ಮಕ್ಕಳವರೆಗೆ ಆಯಾ ವಯಸ್ಸಿಗೆ ಅನುಗುಣವಾಗಿ ಲೈಂಗಿಕ ಶಿಕ್ಷಣ ನೀಡಲು ಶಾಲಾ ಶಿಕ್ಷಣ ಇಲಾಖೆ ಮುಂದಾಗಿದೆ.

ಮಕ್ಕಳಲ್ಲಿ ಅವಧಿ ಮೀರಿದ ಬೆಳವಣಿಗೆ, ಅಸಹಜವಾದ ಪ್ರೌಢಾವಸ್ಥೆ, ಹಾರ್ಮೋನ್ ಬೆಳವಣಿಗೆ ಸೇರಿದಂತೆ ನಾನಾ ರೀತಿಯ ವೈಪರೀತ್ಯಗಳು ಕಂಡು ಬರುತ್ತಿವೆ. ಇದರಿಂದ ಮಕ್ಕಳಲ್ಲಿ ಮಾನಸಿಕ ಚಂಚಲತೆ, ಗೊಂದಲಗಳು ತೀವ್ರಗೊಳ್ಳುತ್ತಿವೆ.

ವೈಜ್ಞಾನಿಕ ಹಾಗೂ ಆಧುನಿಕ ಯುಗದಲ್ಲಿ ವಿದ್ಯುನ್ಮಾನ ಮಾಧ್ಯಮಗಳು ಮಕ್ಕಳನ್ನು ಮತ್ತಷ್ಟು ಮುಂದಾಲೋಚನೆಗೆ ಗುರಿ ಮಾಡಿವೆ. ಈ ಹಿನ್ನೆಲೆಯಲ್ಲಿ ವಿಕ್ಷಿಪ್ತ ಬೆಳವಣಿಗೆಗಳಾಗುತ್ತಿವೆ. ಅವುಗಳನ್ನು ಬಾಲ್ಯಾವಸ್ಥೆಯಲ್ಲೇ ನಿಯಂತ್ರಿಸಲು ಸೂಕ್ತ ಶಿಕ್ಷಣ ಅಗತ್ಯ ಎಂಬ ಸಲಹೆಗಳಿವೆ. ಮನೆಯಲ್ಲಿ ಪೋಷಕರು ಹಾರ್ಮೋನ್ ಬೆಳವಣಿಗೆಗಳು ಮತ್ತು ಅದರಿಂದಾಗುವ ಪರಿಣಾಮಗಳ ಬಗ್ಗೆ ವೈಜ್ಞಾನಿಕ ತಿಳುವಳಿಕೆ ನೀಡುವುದು ಕಷ್ಟ ಸಾಧ್ಯವಾಗಿದ್ದು, ಶಾಲಾ–ಕಾಲೇಜು ಹಂತದಲ್ಲಿ ಈ ಅರಿವು ಮೂಡಿಸುವುದಾದರೆ ಮಕ್ಕಳು ಹೆಚ್ಚು ಪ್ರಜ್ಞಾವಂತಿಕೆ ಹಾಗೂ ಜಾಗೃತರಾಗಲು ಸಾಧ್ಯವಾಗುತ್ತದೆ ಎಂಬ ವಾದಗಳಿವೆ.

ನೈತಿಕ ಶಿಕ್ಷಣದೊಂದಿಗೆ ಹಿಂದೆ ಮಹಾಭಾರತ ಹಾಗೂ ರಾಮಾಯಣದ ಸಾರಾಂಶಗವನ್ನು ಮಕ್ಕಳಿಗೆ ಬೋಧಿಸಲು ಹಿಂದಿನ ಬಿಜೆಪಿ ಸರ್ಕಾರ ಮುಂದಾಗಿತ್ತು. ಆಗ ಕಾಂಗ್ರೆಸ್ ಜೊತೆಗೆ ಹಲವು ಪ್ರಗತಿ ಪರ ಸಂಘಟನೆಗಳು ಆಕ್ಷೇಪ ವ್ಯಕ್ತ ಪಡಿಸಿದ್ದವು. ಒಂದು ಧರ್ಮದ ಸಾರಾಂಶ ಬದಲು ಸರ್ವ ಧರ್ಮ ಸಾರಾಂಶ ಬೋಧಿಸಬೇಕು ಎಂದು ಪಟ್ಟು ಹಿಡಿದಿದ್ದವು.

ಈಗ ನೈತಿಕ ಶಿಕ್ಷಣದ ಮಾದರಿ ಹೇಗಿರಬೇಕು ಎಂಬ ಬಗ್ಗೆ ಡಿಎಸ್ಇಆರ್‌ಟಿ ಸ್ಪಷ್ಟ ಮಾರ್ಗಸೂಚಿಗಳನ್ನು ರೂಪಿಸಿದೆ. ಮಕ್ಕಳಿಗೆ ಮನವರಿಕೆಯಾಗುವಂತಹ ಅಂಶಗಳನ್ನು ಆಯಾ ತರಗತಿಗೆ ಅನುಗುಣವಾಗಿ ರೂಪಿಸಿದೆ. ವಾರದಲ್ಲಿ ಕನಿಷ್ಠ ಎರಡು ತರಗತಿಗಳಲ್ಲಿ ನೈತಿಕ ಶಿಕ್ಷಣ ನೀಡಲು ವೇಳಾ ಪಟ್ಟಿ ಸಿದ್ಧವಾಗಿದೆ.

ಮಕ್ಕಳಲ್ಲಿ ಭೌತಿಕ ಬೆಳವಣಿಗೆಗೆ ಅನುಗುಣವಾಗಿ ಬೌದ್ಧಿಕ ಶಿಕ್ಷಣ ನೀಡಲು ಶಾಲಾ ಶಿಕ್ಷಣ ಇಲಾಖೆ ಸಿದ್ಧಗೊಂಡಿದೆ. ಕೆಲ ಸಂಘಟನೆಗಳು ಮಡಿವಂತಿಕೆಯ ಹೆಸರಿನಲ್ಲಿ ಲೈಂಗಿಕ ಶಿಕ್ಷಣ ನೀಡುವುದು ಅಸಮಂಜಸ ಎಂದು ಆಕ್ಷೇಪ ವ್ಯಕ್ತ ಪಡಿಸಿವೆ.

# ಮೆದುಳು ನಿಷ್ಕ್ರಿಯಗೊಂಡ ರೋಗಿಯ ಅಂಗಾಂಗಗಳನ್ನು ಸಾಗಿಸಿ ಐವರ ಜೀವ ಪ್ರಾಣ ಉಳಿಸಿದ ಭಾರತೀಯ ವಾಯುಪಡೆ



**ನವದೆಹಲಿ:** ಮೆದುಳು ನಿಷ್ಕ್ರಿಯಗೊಂಡ ರೋಗಿಯ ಅಂಗಗಳನ್ನು ಐವರ ಜೀವ ಉಳಿಸಲು ಭಾರತೀಯ ವಾಯುಪಡೆಯ ವಿಮಾನದ ಮೂಲಕ ದೇಶದ ವಿವಿಧ ಭಾಗಗಳಿಗೆ ಕಳುಹಿಸಲಾಗಿದೆ. ಒಂದು ಮೂತ್ರಪಿಂಡ ಮತ್ತು ಕಾರ್ನಿಯಾವನ್ನು ಭಾರತೀಯ ವಾಯುಪಡೆಯ ವಿಮಾನವು ಬೆಂಗಳೂರಿನಿಂದ ದೆಹಲಿಗೆ ವಿಮಾನದಲ್ಲಿ ಸಾಗಿಸಲಾಗಿದೆ.

ಭಾರತೀಯ ವಾಯುಪಡೆ ಎಕ್ಸ್ ಪೋಸ್ಟ್‌ನಲ್ಲಿ ಕಾರ್ಯಾಚರಣೆಯ ವಿವರಗಳು ಮತ್ತು ಏರ್‌ಲಿಫ್ಟ್‌ನ ಛಾಯಾಚಿತ್ರಗಳನ್ನು ಹಂಚಿಕೊಂಡಿದೆ. ಬೆಂಗಳೂರು ದೊಮಲೂರಿನ ಏರ್‌ಫೋರ್ಸ್ ಕಮಾಂಡ್ ಆಸ್ಪತ್ರೆಯಿಂದ ವಿವಿಧ ಸ್ಥಳಗಳಲ್ಲಿ ಜೀವ ಉಳಿಸುವ ಬಹು ಅಂಗ ಮರುಜೋಡಿಕೆ ಮತ್ತು ನಿರ್ಣಾಯಕ ಕಸಿ ಮಾಡಲಾಗಿದೆ ಎಂದು ಹೇಳಿದೆ.

ಶುಕ್ರವಾರ ಮೆದುಳು ನಿಷ್ಕ್ರಿಯಗೊಂಡಿದೆ ಎಂದು ಘೋಷಿಸಲಾದ ದಾನಿಯು ಐದು ವ್ಯಕ್ತಿಗಳಿಗೆ ಹೊಸ ಜೀವನದ ಮೂಲ ಎಂದು ಅದು ಹೇಳಿದೆ. ಪ್ರಕಾರ, ಒಂದು ಮೂತ್ರಪಿಂಡ ಮತ್ತು ಕಾರ್ನಿಯಾವನ್ನು ದೆಹಲಿಯ ಸೇನಾ ಆಸ್ಪತ್ರೆಗೆ ಸಾಗಿಸಲು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ವೈದ್ಯಕೀಯ ತಂಡದ ಸಹಯೋಗ ಪಡೆಯಲಾಗಿದೆ. ಮೊದಲ ಚರ್ಮದ ಕಸಿ ಮಾಡಲಾಗಿದೆ ಎಂದು ಹೇಳಿದೆ. ಜೀವನಸಾರ್ಥಕತೆ ಕರ್ನಾಟಕದೊಂದಿಗೆ ಈ ಸರಾಗ ಕಾರ್ಯಾಚರಣೆಯನ್ನು ನಡೆಸಲಾಯಿತು, ಇದು ಸಶಸ್ತ್ರ ಪಡೆಗಳ ವೈದ್ಯಕೀಯ ಸಮುದಾಯದ ಅಸಾಧಾರಣ ಬದ್ಧತೆ ಮತ್ತು ವೈದ್ಯಕೀಯ ಪರಿಣತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಪೋಸ್ಟ್‌ನಲ್ಲಿ ತಿಳಿಸಿದೆ.

# ಕೈಕಾಲು–ರುಂಡ ಇಲ್ಲದ ವ್ಯಕ್ತಿಯ ಮುಂಡ ಪತ್ತೆ



**ಮೈಸೂರು:** ಜಿಲ್ಲೆಯ ಹುಣಸೂರು ತಾಲೂಕು ಬಿಳಿಕೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಆಯರಹಳ್ಳಿ ಗ್ರಾಮದ ಏತನೀರಾವರಿ ಹೊಳೆಯಲ್ಲಿ ತಲೆ ಕೈಕಾಲುಗಳಿಲ್ಲದ ವ್ಯಕ್ತಿಯ ಮುಂಡ ಪತ್ತೆಯಾಗಿದೆ.

ಕೊಳೆತ ಸ್ಥಿತಿಯಲ್ಲಿ ಮೃತದೇಹ ತೇಲುತ್ತಿದ್ದು, ಇದನ್ನು ಕಂಡ ಸಾರ್ವಜನಿಕರು ಬಿಳಿಕೆರೆ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿದು ಎಸ್‌ಪಿ ವಿಷ್ಣುವರ್ಧನ್, ಡಿವೈಎಸ್ಪಿ ಗೋಪಾಲಕೃಷ್ಣ, ಸಂತೋಷ್ ಕಶ್ಯಪ್ ಹಾಗೂ ಸಬ್ ಇನ್‌ಸ್ಪೆಕ್ಟರ್ ಪೂಜಾ ಅವರುಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಕೈಕಾಲು ಮತ್ತು ರುಂಡ ಇಲ್ಲದ ದೇಹವನ್ನು ಹೊರತೆಗೆದು ಮುಂದಿನ ಕ್ರಮ ಕೈಗೊಂಡಿದ್ದು, ಅಪರಿಚಿತ ಮೃತ ವ್ಯಕ್ತಿಯ ಬಗ್ಗೆ ಪೊಲೀಸರು ಮಾಹಿತಿ ಕಲೆ ಹಾಕುತ್ತಿದ್ದಾರೆ.

# ಬೀದಿ ನಾಯಿ ಬಾಯಲ್ಲಿತ್ತು ನವಜಾತ ಶಿಶುವಿನ ಶವ..!



**ಮಹೌ:** ನಾಯಿಯೊಂದು ನವಜಾತ ಶಿಶುವಿನ ಶವವನ್ನು ಬಾಯಲ್ಲಿಟ್ಟುಕೊಂಡು ಓಡಾಡಿರುವ ಘಟನೆ ಮಧ್ಯಪ್ರದೇಶದ ಇಂದೋರ್ ಜಿಲ್ಲೆಯ ಸರ್ಕಾರಿ ಆಸ್ಪತ್ರೆಯಲ್ಲಿ ನಡೆದಿದೆ.ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿರುವ ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಆಸ್ಪತ್ರೆ ಶೌಚಾಲಯದ ಬಳಿ ಬೀದಿ ನಾಯಿಯೊಂದು ಸತ್ತ ನವಜಾತ ಶಿಶುವನ್ನು ದವಡೆಯಲ್ಲಿ ಹಿಡಿದುಕೊಂಡಿರುವುದು ಕಂಡುಬಂದಿದ್ದು, ಪೊಲೀಸರು ಈ ಬಗ್ಗೆ ತನಿಖೆ ಆರಂಭಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಿಲ್ಲಾ ಕೇಂದ್ರ ಕಚೇರಿಯಿಂದ 25 ಕಿ.ಮೀ ದೂರದಲ್ಲಿರುವ ಮಹೌದಲ್ಲಿನ ನಾಗರಿಕ ಆಸ್ಪತ್ರೆಯಲ್ಲಿ ಈ ಘಟನೆ ನಡೆದಿದ್ದು, ಭದ್ರತಾ ಸಿಬ್ಬಂದಿಯೊಬ್ಬರು ನಾಯಿಯನ್ನು ಓಡಿಸಿ ಶವವನ್ನು ಹೊರತೆಗೆಯುವಲ್ಲಿ ಯಶಸ್ವಿಯಾಗಿದ್ದಾರೆ.


ಮೂಲಗಳ ಪ್ರಕಾರ, ಮಗುವಿನ ದೇಹವನ್ನು ನಾಯಿಗಳು ಭಾಗಶಃ ತಿಂದು ಹಾಕಿವೆ.ನವಜಾತ ಶಿಶುವಿನ ಪೂರ್ವಾಪರಗಳು ಮತ್ತು ನಂತರದ ಘಟನೆಗಳ ಸರಮಾಲೆಯ ಬಗ್ಗೆ ಆಸ್ಪತ್ರೆ ಅಧಿಕಾರಿಗಳು ಮತ್ತು ಪೊಲೀಸರು ತನಿಖೆ ಆರಂಭಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಿಸಿಟಿವಿ ದೃಶ್ಯಗಳ ಪ್ರಕಾರ, ಈ ಘಟನೆ ಬೆಳಗಿನ ಜಾವ 1.30 ರಿಂದ 2 ಗಂಟೆಯ ನಡುವೆ ನಡೆದಿದೆ. ಈ ಅವಧಿಯಲ್ಲಿ ಒಬ್ಬ ಯುವತಿಯು ಶೌಚಾಲಯಕ್ಕೆ ಹೋಗುತ್ತಿರುವುದು ಕಂಡುಬಂದಿದೆ.

ನಾವು ಸಿಬ್ಬಂದಿಯನ್ನು ಪರಿಶೀಲಿಸಿದಾಗ, 17 ವರ್ಷದ ಬಾಲಕಿ ಹೊಟ್ಟೆ ಉದರುವಿಕೆಯಿಂದ ಬಳಲುತ್ತಿರುವುದಾಗಿ ದೂರು ನೀಡಿ ಇಲ್ಲಿಗೆ ಬಂದಿದ್ದು, ರಾತ್ರಿ 9 ಗಂಟೆಗೆ ದಾಖಲಾಗಿದ್ದಳು. ಬಾಲಕಿ ಶೌಚಾಲಯದಲ್ಲಿ ಮಗುವಿಗೆ ಜನ್ಮ ನೀಡಿದ್ದಾಳೆ ಎಂದು ನಾವು ಅನುಮಾನಿಸುತ್ತೇವೆ ಎಂದು ಮಾವ್ ಸಿವಿಲ್ ಆಸ್ಪತ್ರೆಯ ಉಸ್ತುವಾರಿ ಡಾ.ಎಚ್.ಆರ್. ವರ್ಮಾ ಪಿಟಿಐಗೆ ತಿಳಿಸಿದ್ದಾರೆ.

ಬಾಲಕಿ ಸ್ವಲ್ಪ ಸಮಯದ ನಂತರ ಆಸ್ಪತ್ರೆಯಿಂದ ಅಪರಿಚಿತ ವ್ಯಕ್ತಿಯೊಂದಿಗೆ ಕಣ್ಮರೆಯಾದಳು ಎಂದು ಅವರು ಹೇಳಿದರು.ಭದ್ರತಾ ಸಿಬ್ಬಂದಿ ಶವವನ್ನು ಹೊರತೆಗೆಯುವ ಮೊದಲು, ಮಗುವನ್ನು ಶೌಚಾಲಯ ಪ್ರದೇಶದಿಂದ ನಾಯಿಯೊಂದು ತೆಗೆದುಕೊಂಡು ಹೋಗಿದೆ ಎಂದು ಕೆಲವು ಅಧಿಕಾರಿಗಳು ತಿಳಿಸಿದ್ದಾರೆ.

ನಾವು ಮರಣೋತ್ತರ ಪರೀಕ್ಷೆ ನಡೆಸಿದ್ದೇವೆ ಮತ್ತು ಅದರ ವರದಿಗಾಗಿ ಕಾಯುತ್ತಿದ್ದೇವೆ. ಪ್ರಾಥಮಿಕ ವರದಿಯ ಪ್ರಕಾರ ಹೆರಿಗೆ ಅಕಾಲಿಕವಾಗಿದೆ ಎಂದು ಹೇಳಲಾಗಿದೆ. ಶವವನ್ನು ಶವಾಗಾರದಲ್ಲಿ ಇರಿಸಲಾಗಿದೆ. ಈ ಘಟನೆಯ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ ಮತ್ತು ಅವರಿಗೆ ಸಹಾಯ ಮಾಡಲು ನಾವು ಎಲ್ಲಾ ಸಿಸಿಟಿವಿ ದೃಶ್ಯಾವಳಿಗಳನ್ನು ಒದಗಿಸುತ್ತೇವೆ ಎಂದು ಡಾ. ವರ್ಮಾ ಹೇಳಿದರು.

# ಅಲ್ಲಾಹನಿಗೆ ತ್ಯಾಗ ಮಾಡುತ್ತಿದ್ದೇನೆ ಎಂದು ಬರೆದಿಟ್ಟು ಬಕ್ರಿದ್ ದಿನವೇ ಗಂಟಲು ಸೀಳಿಕೊಂಡ ವ್ಯಕ್ತಿ ಆತ್ಮಹತ್ಯೆ



**ಲಕ್ನೋ:** ಮುಸಲ್ಮಾನರ ಪವಿತ್ರ ಹಬ್ಬವಾದ ಬಕ್ರಿದ್ ಸಂದರ್ಭದಲ್ಲಿ 60 ವರ್ಷದ ವ್ಯಕ್ತಿಯೊಬ್ಬರು ಸ್ವಯಂ ಕತ್ತು ಸೀಳಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಉತ್ತರ ಪ್ರದೇಶದ ದಿಯೋರಿಯಾ ಜಿಲ್ಲೆಯ ಹಳ್ಳಿಯೊಂದರಲ್ಲಿ ನಡೆದಿದೆ.

ಸ್ಥಳೀಯರು ಹೇಳುವಂತೆ ಮೃತರು ಈದ್–ಉಲ್–ಅಧಾ ದಿನದಂದು ತಮ್ಮನ್ನು ತಾವು ಬಲಿದಾನ ಮಾಡಿದ್ದಾರೆ ಮತ್ತು ನಾನು ಅಲ್ಲಾಹ್ ಮತ್ತು ಅವನ ಸಂದೇಶವಾಹಕರ ಹೆಸರಿನಲ್ಲಿ ನನ್ನನ್ನು ತ್ಯಾಗ ಮಾಡುತ್ತಿದ್ದೇನೆ ಎಂದು ಬರೆದಿರುವ ಟಿಪ್ಪಣಿಯನ್ನು ಬಿಟ್ಟಿದ್ದಾರೆ ಎಂದು ತಿಳಿಸಿದ್ದಾರೆ.

ಆದರೆ, ಅಂತಹ ಯಾವುದೇ ದಾಖಲೆ ಕಂಡುಬಂದಿದೆಯೇ ಎಂದು ಪೊಲೀಸ್ ಅಧಿಕಾರಿಗಳು ದೃಢಪಡಿಸಿಲ್ಲ. ಆ ವ್ಯಕ್ತಿ ತನ್ನ ಮನೆಯ ಸಮೀಪವಿರುವ ಗುಡಿಸಲಿನೊಳಗೆ ತನ್ನ ಗಂಟಲು ಸೀಳಲು ಚಾಕುವನ್ನು ಬಳಸಿದ್ದಾನೆ ಎಂದು ಅವರು ಹೇಳಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ.

ಅವನ ಕಿರುಚಾಟ ಕೇಳಿದ ನಂತರ, ಅವನ ಕುಟುಂಬ ಸದಸ್ಯರು ಗುಡಿಸಲಿನಲ್ಲಿ ಅವನನ್ನು ಕಂಡುಕೊಂಡರು ಮತ್ತು ಪೊಲೀಸರ ಸಹಾಯದಿಂದ ಜಿಲ್ಲಾ ವೈದ್ಯಕೀಯ ಕಾಲೇಜಿಗೆ ಕರೆದೊಯ್ದರು. ನಂತರ ಹೆಚ್ಚಿನ ಚಿಕಿತ್ಸೆ ಗಾಗಿ ಅವನನ್ನು ಗೋರಖ್ಪುರ ವೈದ್ಯಕೀಯ ಕಾಲೇಜಿಗೆ ಕರೆದೊಯ್ಯಲಾಯಿತು.

ಆ ವ್ಯಕ್ತಿ ಶೀಘ್ರದಲ್ಲೇ ಗಾಯಗಳಿಂದ ಸಾವನ್ನಪ್ಪಿದರು ಮತ್ತು ನಿಧನರಾದರು.ಪ್ರಾಥಮಿಕ ತನಿಖೆಯು ಮೃತರೇ ಗಾಯ ಮಾಡಿಕೊಂಡಿದ್ದಾರೆ ಎಂದು ಸೂಚಿಸುತ್ತದೆ. ಆದಾಗ್ಯೂ, ನಾವು ಎಲ್ಲಾ ಕೋನಗಳಿಂದಲೂ ಈ ವಿಷಯವನ್ನು ತನಿಖೆ ಮಾಡುತ್ತಿದ್ದೇವೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಉತ್ತರ) ಅರವಿಂದ್ ಕುಮಾರ್ ವರ್ಮಾ ಪಿಟಿಐಗೆ ತಿಳಿಸಿದ್ದಾರೆ.

60 ವರ್ಷದ ವ್ಯಕ್ತಿಯ ಕುಟುಂಬ ಸದಸ್ಯರು, ನಿನ್ನೆ ಬೆಳಿಗ್ಗೆ 10 ಗಂಟೆ ಸುಮಾರಿಗೆ ಸುಲ್ತಾನ್ ಸೈಯದ್ ಮಖ್ದುಮ್ ಅಶ್ರಫ್ ಶಾ ಅವರ ದರ್ಗಾದಿಂದ ಈದ್ ಪ್ರಾರ್ಥನೆ ಸಲ್ಲಿಸಿದ ನಂತರ ಹಿಂದಿರುಗಿದಾಗ ಈ ಘಟನೆ ಸಂಭವಿಸಿದೆ ಎಂದು ಹೇಳಿದ್ದಾರೆ.

ಮನೆಗೆ ಹಿಂದಿರುಗಿದ ನಂತರ, ಅವರು ತಕ್ಷಣವೇ ತಮ್ಮ ಮನೆಯ ಸಮೀಪವಿರುವ ಗುಡಿಸಲಿಗೆ ಹೋಗಿದ್ದರು ಎಂದು ಆ ವ್ಯಕ್ತಿಯ ಪತ್ನಿ ಹೇಳಿದ್ದಾರೆ. ಒಂದು ಗಂಟೆಯ ನಂತರ, ಅವರು ನರಳುತ್ತಿರುವುದನ್ನು ಕೇಳಿದರು ಮತ್ತು ಪರಿಶೀಲಿಸಿದಾಗ, ಅವರು ಪಕ್ಕದಲ್ಲಿ ಚಾಕುವಿನಿಂದ ರಕ್ತದ ಮಡುವಿನಲ್ಲಿ ಬಿದ್ದಿರುವುದು ಕಂಡುಬಂದಿತ್ತು.

# ಕಾವೇರಿ ಆರತಿಗೆ 100 ಕೋಟಿ ರೂ.ಖರ್ಚು ಮಾಡ್ತಿರೋದೇಕೆ..?

**ಮಂಡ್ಯ:** ಕಾವೇರಿ ಆರತಿಗೆ 100 ಕೋಟಿ ರೂ.ಯಾಕೆ ಬೇಕು? 100 ಕೋಟಿ ರೂ. ಖರ್ಚು ಮಾಡುವುದಕ್ಕೆ ನನ್ನ ವಿರೋಧವಿದೆ ಎಂದು ಕೇಂದ್ರ ಸಚಿವ ಹೆಚ್ .ಡಿ.ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಮಂಡ್ಯದಲ್ಲಿ ಮೈಶುಗರ್ ಪ್ರೌಢಶಾಲೆಯ ಅಮೃತ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಮಾಜಿ ಸಚಿವ ಸಿ ಎಸ್ ಪುಟ್ಟರಾಜು ಅವರು ಕೆರೆತಣ್ಣೂರಿನಲ್ಲಿ ಕಾವೇರಿ ಆರತಿ ಮಾಡಿಸಿದಾಗ ಇಷ್ಟೊಂದು ಹಣ ವ್ಯಯವಾಗಿರಲಿಲ್ಲ. ಈಗ ಯಾಕೆ ಅಷ್ಟೊಂದು ಹಣ ಬೇಕು? ಆರತಿ ಕಾರ್ಯಕ್ರಮಕ್ಕೆ ತಗಲುವ ಖರ್ಚು–ವೆಚ್ಚಗಳ ಬಗ್ಗೆ ಒಮ್ಮೆ ಪುಟ್ಟರಾಜು ಅವರನ್ನು ಕೇಳಿ ತಿಳಿದುಕೊಳ್ಳಿ ಎಂದು ಹೇಳಿದರು.

ಈ ವರ್ಷ ದೇಶಾದ್ಯಂತ 14 ಸಾವಿರ ಎಲೆಕ್ಟ್ರಿಕ್ ಬಸ್ ಕೊಡಲು ತೀರ್ಮಾನಿಸಿದ್ದು, ಇದರಲ್ಲಿ

ಬೆಂಗಳೂರಿಗೆ ನಾಲ್ಕೂವರೆ ಸಾವಿರ ಎಲೆಕ್ಟ್ರಿಕ್ ಬಸ್‌ಗಳನ್ನು ನೀಡುತ್ತೇವೆ. ಬೇರೆ ರಾಜ್ಯಕ್ಕೆ ಎರಡು ಸಾವಿರ ಬಸ್‌ಗಳನ್ನು ನೀಡುತ್ತೇವೆ ಎಂದು ಹೇಳಿದರು.

ಬೃಹತ್ ಕೈಗಾರಿಕಾ ಸಚಿವನಾದ ನನ್ನ ಮೇಲೆ ಸಾಕಷ್ಟು ನಿರೀಕ್ಷೆ ಇಟ್ಟಿದ್ದೀರಿ. ಮಂಡ್ಯ ಜಿಲ್ಲೆಗೆ ಕೈಗಾರಿಕೆ ತರಲು ನಿತ್ಯ ಪ್ರಯತ್ನ ಮಾಡುತ್ತಿದ್ದೇನೆ. ರಾಜ್ಯ ಸರ್ಕಾರದ ಸಹಕಾರ ಪಡೆಯುವ ಪ್ರಯತ್ನ ಮಾಡುತ್ತಿದ್ದೇನೆ ಎಂದರು.

ಮೈಶುಗರ್ ಶಿಕ್ಷಣ ಸಂಸ್ಥೆ ಉಳಿಸಲು ನಾನು ಬದ್ಧ. ಅದಕ್ಕೆ ಬೇಕಾದ ನೀಲನಕ್ಷೆ ಸಿದ್ಧಪಡಿಸಿಕೊಡಿ. ಮಾದರಿ ಶಾಲೆ ಮಾಡಲು ಅಗತ್ಯ ನೆರವು ನೀಡುತ್ತೇನೆ. ಪ್ರತಿ ಪಂಚಾಯಿತಿ ಮಟ್ಟದಲ್ಲಿ ಉಚಿತ ಇಂಗ್ಲೀಷ್ ಶಾಲೆ ತೆರೆಯಬೇಕು.

ಹಿಂದೆ ಶಿಕ್ಷಣ ಅನ್ನೋದು ಮಠಗಳಿಂದ ನಡೆಯುತ್ತಿತ್ತು. ಸರ್ಕಾರದಿಂದ ಶಿಕ್ಷಣಕ್ಕೆ ದೊಡ್ಡ ಮಟ್ಟದ ಅವಕಾಶ ಇರಲಿಲ್ಲ. ಕೆ.ವಿ.ಶಂಕರಗೌಡ ಸೇರಿದಂತೆ ಅನೇಕ ಹಿರಿಯರು ಶಿಕ್ಷಣ ಕ್ಷೇತ್ರಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದು ಅವರು ನುಡಿದರು.

ಮಿಮ್ಸ್ ವೈದ್ಯರ ನಿರ್ಲಕ್ಷ್ಯ ಮತ್ತು ಪೊಲೀಸರ ವರ್ತನೆಯಿಂದ ಮಕ್ಕಳು ಸಾವನ್ನಪ್ಪಿರುವುದು ತೀವ್ರ ನೋವು ತರುತ್ತದೆ. ಸರ್ಕಾರಿ ಅಧಿಕಾರಿಗಳು ಹಣದಾಸೆಗೆ ಜೀವ ತೆಗೆಯಬಾರದು ಎಂದು ಕಿವಮಾತು ಹೇಳಿದರು. ಹೆಚ್ ಎಮ್ಟಿ ಕಾರ್ಖಾನೆಯ ಉಳಿವಿಗಾಗಿ ಪಣತೊಟ್ಟಿದ್ದೇನೆ. ಆದರೆ, ರಾಜ್ಯ ಸರ್ಕಾರ ಭೂಮಿ ಕೊಡುತ್ತಿಲ್ಲ. ಮಂಡ್ಯ ಜನ ಸ್ವಲ್ಪ ಸಮಯ ಕೊಡಿ. ನಿಮ್ಮ ನಿರೀಕ್ಷೆಗಳನ್ನು ನಿರಾಸೆ ಮಾಡಲ್ಲ ಎಂದು ಭಾವುಕರಾದರು.

# ತಮಿಳುನಾಡಿನಲ್ಲಿ ಚುನಾವಣಾ ಚಾಣಾಕ್ಷ ಅಮಿತ್ ಶಾ



**ಮಧುರೈ:** ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ನಾಯಕ ಅಮಿತ್ ಶಾ ತಡರಾತ್ರಿ ಇಲ್ಲಿಗೆ ಆಗಮಿಸಿದರು.

ಕಳೆದ ಎರಡು ತಿಂಗಳಲ್ಲಿ ತಮಿಳುನಾಡಿಗೆ ಅವರ ಎರಡನೇ ನಿರ್ಣಾಯಕ ಭೇಟಿ ಇದಾಗಿದೆ. 2026 ರ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಪಕ್ಷದ ಯಂತ್ರೋಪಕರಣಗಳನ್ನು ಪುನರುಜ್ಜೀವನಗೊಳಿಸಲು ಅವರು ಈ ಭೇಟಿ ನೀಡಿದ್ದಾರೆ.ಆಡಳಿತ ಡಿಎಂಕೆ ಇಲ್ಲಿ ತನ್ನ ನಿರ್ಣಾಯಕ ಸಾಮಾನ್ಯ ಮಂಡಳಿ ಸಭೆಯನ್ನು ನಡೆಸಿ ಕೇಂದ್ರವನ್ನು ಖಂಡಿಸುವ ನಿರ್ಣಯಗಳನ್ನು ಅಂಗೀಕರಿಸಿದ ನಿಖರವಾಗಿ ಒಂದು ವಾರದ ನಂತರಅವರ ಭೇಟಿ ಸಾಕಾರಗೊಂಡಿದೆ.ಬಿಜೆಪಿಯ ಮಿತ್ರಪಕ್ಷವಾದ ಪಿಎಂಕೆಯಲ್ಲಿ ತಂದೆ–ಮಗ ಜೋಡಿಯ ನಡುವೆ ನಾಯಕತ್ವಕ್ಕಾಗಿ ಜಗಳ ನಡೆದ ಹಿನ್ನೆಲೆಯಲ್ಲಿ ಮತ್ತು ಏಪ್ರಿಲ್ 10 ರಂದು ಚೆನ್ನೈಗೆ ಭೇಟಿ ನೀಡಿದ ಸಂದರ್ಭದಲ್ಲಿ ಶಾ ಅವರೊಂದಿಗೆ ಮೈತ್ರಿ ಮಾಡಿಕೊಂಡ ವಿರೋಧ ಪಕ್ಷದ ಎಐಎಡಿಎಂಕೆಯ ಮಿತ್ರಪಕ್ಷವಾದ ಡಿಎಂಡಿಕೆ, 2024 ರಲ್ಲಿ ಎಐಎಡಿಎಂಕೆ ಭರವಸೆ ನೀಡಿದಂತೆ ರಾಜ್ಯಸಭಾ ಸ್ಥಾನವನ್ನು (ಡಿಎಂಡಿಕೆ) ನೀಡದಿದ್ದಕ್ಕಾಗಿ ವ್ಯಕ್ತಪಡಿಸಿದ ಅಸಮಾಧಾನದ ನಡುವೆಯೂ ಇದು ಸಂಭವಿಸಿದೆ.ಇದಲ್ಲದೆ, ಮಾಜಿ ಮುಖ್ಯಮಂತ್ರಿ ಮತ್ತು ಉಚ್ಚಾಟಿತ ಎಐಎಡಿಎಂಕೆ ನಾಯಕ ಓ ಪನ್ನೀರ್‌ಸೆಲ್ವಂ ಇತ್ತೀಚೆಗೆ ಚೆನ್ನೈ ಭೇಟಿಯ ಸಮಯದಲ್ಲಿ ಶಾ ಅವರನ್ನು ಭೇಟಿ ಮಾಡದಿದ್ದಕ್ಕಾಗಿ ವಿಷಾದ ವ್ಯಕ್ತಪಡಿಸಿದ್ದರು. ಟಿ ಟಿ ವಿ ದಿನಕರನ್ ಅವರಂತಹ ನಿಲುವು, ಅವರು ಅಂಚಿನ ಪಕ್ಷದ ನಾಯಕರಾಗಿದ್ದರೂ, ಬಿಜೆಪಿಯ ಎನ್‌ಡಿಎಗೆ ಅವರ ಬೆಂಬಲದ ಬಗ್ಗೆ ಇನ್ನೂ ಸ್ಪಷ್ಟವಾಗಿಲ್ಲ.

ಎನ್‌ಡಿಎ ಶಿಬಿರದಲ್ಲಿನ ಅವ್ಯವಸ್ಥೆ ಮತ್ತು ಪಿಎಂಕೆಯಲ್ಲಿನ ಬಿರುಕುಗಳು ರಾಜ್ಯದಲ್ಲಿ ಎನ್‌ಡಿಎಯ ಚುನಾವಣಾ ನಿರೀಕ್ಷೆಗಳಿಗೆ ಅಡ್ಡಿಯಾಗುವುದಿಲ್ಲ ಎಂದು ಬಿಜೆಪಿಯ ಹಿರಿಯ: ನಾಯಕರೊಬ್ಬರು ಹೇಳಿದ್ದಾರೆ. ಭಿನ್ನಾಭಿಪ್ರಾಯಗಳನ್ನು ಶೀಘ್ರದಲ್ಲೇ ಪರಿಹರಿಸಲಾಗುವುದು ಮತ್ತು ಡಿಎಂಕೆಯನ್ನು ಸೋಲಿಸಲು ನಾವು ಬಲವಾದ ಶಕ್ತಿಯಾಗಿ ಚುನಾವಣೆಯನ್ನು ಎದುರಿಸುತ್ತೇವೆ ಎಂದು ರಾಜ್ಯ ಉಪಾಧ್ಯಕ್ಷ ಎಂ ಚಕ್ರವರ್ತಿ ಹೇಳಿದರು.

ಕುತೂಹಲಕಾರಿಯಾಗಿ, ರಾಜ್ಯ ಮುಖ್ಯಸ್ಥ ಕೆ ಅಣ್ಣಾಮಲೈ ಅವರ ಬದಲಿಗೆ ಮಧುರೈಗೆ ಹತ್ತಿರವಿರುವ ದಕ್ಷಿಣ ಜಿಲ್ಲೆಯ ತಿರುನಲ್ವೇಲಿಯ ಮೂಲದ ನೈನಾರ್ ನಾಗೇಂತಿರನ್ ಅವರನ್ನು ನೇಮಿಸಿದ ನಂತರ ಶಾ ಅವರ ರಾಜ್ಯ ಭೇಟಿ ಇದು ಎರಡನೇ ಬಾರಿಯಾಗಿದೆ.

ಎನ್‌ಡಿಎ ಮಿತ್ರಪಕ್ಷಗಳನ್ನು ಬಲಪಡಿಸಲು ಮತ್ತು ಚುನಾವಣಾ ಕಣದಲ್ಲಿ ಒಕ್ಕೂಟದ ಗೆಲುವಿಗಾಗಿ ನಾಗೇಂತಿರನ್ ಶ್ರಮಿಸುತ್ತಾರೆ ಎಂದು ಬಿಜೆಪಿಯ ಮೂಲವೊಂದು ತಿಳಿಸಿದೆ.ನಾಗೇಂತಿರನ್ ಜೊತೆಗೆ, ಮಾಜಿ ಕೇಂದ್ರ ಸಚಿವ ಪೊನ್ ರಾಧಾಕೃಷ್ಣನ್, ಮಾಜಿ ರಾಜ್ಯಪಾಲೆ ಡಾ. ತಮಿಳಿಸೈ ಸೌಂದರರಾಜನ್ ಮತ್ತು ಮಾಜಿ ಎಐಎಡಿಎಂಕೆ ಸಚಿವ ಸೆಲ್ಲೂರ್ ರಾಜು ಅವರು ಗೃಹ ಸಚಿವರನ್ನು ಇಲ್ಲಿ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡವರಲ್ಲಿ ಸೇರಿದ್ದಾರೆ.ತಮಿಳುನಾಡಿನ ಮಧುರೈ ತಲುಪಿದ್ದೇನೆ. ನಾಳೆ ನಿಗದಿಯಾಗಿರುವ ವಿವಿಧ ಸಾಂಸ್ಥಿಕ ಕಾರ್ಯಕ್ರಮಗಳಲ್ಲಿ ಉತ್ಸಾಹಭರಿತ ಕಾರ್ಯಕರ್ತರನ್ನು ಭೇಟಿ ಮಾಡಲು ಉತ್ಸು ಕನಾಗಿದ್ದೇನೆ ಎಂದು ಶಾ ಈ ಹಿಂದೆ ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್ ನ ಪೋಸ್ಟ್‌ನಲ್ಲಿ ಹೇಳಿದ್ದರು.ಪ್ರಸಿದ್ಧ ಶ್ರೀ ಮೀನಾಕ್ಷಿ ಸುಂದರೇಶ್ವರರ್ ದೇವಸ್ಥಾನಕ್ಕೆ ಭೇಟಿ ನೀಡುವ ಮೂಲಕ ಅವರು ದಿನದ ಚಟುವಟಿಕೆಗಳನ್ನು ಶುಭ ಆರಂಭದೊಂದಿಗೆ ಪ್ರಾರಂಭಿಸಲಿದ್ದಾರೆ.

# ಶುಭಾಂಶು ಶುಕ್ಲಾ ಬಾಹ್ಯಾಕಾಶ ಪ್ರಯಾಣಕ್ಕೆ ಕ್ಷಣಗಣನೆ



**ನವದೆಹಲಿ:** ಭಾರತೀಯ ವಾಯುಪಡೆಯ ಮತ್ತೊಬ್ಬ ಪೈಲಟ್ ಗಗನಯಾತ್ರೆ ಪ್ರಯಾಣಕ್ಕೆ ಕ್ಷಣಗಣನೆ ಆರಂಭವಾಗಿದೆ. ಜೂ.10 ರಂದು ಜಿಪಿ ಕ್ಯಾಪ್ಟನ್ ಶುಭಾಂಶು ಶುಕ್ಲಾ ಬಾಹ್ಯಾಕಾಶಕ್ಕೆ ತಮ್ಮ ಪ್ರಯಾಣ ಬೆಳೆಸಲಿದ್ದಾರೆ. ಅಂದು ಡ್ರ್ಯಾಗನ್ ಬಾಹ್ಯಾಕಾಶ ನೌಕೆಯನ್ನು ಪೈಲಟ್ ಮಾಡುವ ಮೂಲಕ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಉಡಾವಣೆ ಮಾಡಲಿದ್ದಾರೆ.

ಆದರೆ ಗಗನಯಾತ್ರಿಯಾಗುವ ಮೊದಲು, ಅವರು ಅತ್ಯುತ್ತಮ ಯುದ್ಧ ವಿಮಾನ ಪೈಲಟ್ ಮತ್ತು ಪರೀಕ್ಷಾ ಪೈಲಟ್ ಆಗಿದ್ದು, ಇದುವರೆಗೆ ಹಾರಿಸದ ವಿಮಾನಗಳನ್ನು ಅವುಗಳ ಮಿತಿಗಳಿಗೆ ಬದ್ಧರಾಗಿದ್ದಾರೆ. ಶುಭಾಂಶು ಶುಕ್ಲಾ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಗಗನಯಾತ್ರಿ ರೆಕ್ಕೆಗಳನ್ನು ನೀಡಿದರು.

ಯುದ್ಧ ಪರೀಕ್ಷಾ ಪೈಲಟ್ ಆಗಿ ಅವರ ಹಿಂದಿನ ಜೀವನವು ಅವರನ್ನು ಬಾಹ್ಯಾಕಾಶ ನಿಲ್ದಾಣಕ್ಕೆ ಭಾರತದ ಮೊದಲ ಗಗನಯಾತ್ರಿಯಾಗಲು ಹೇಗೆ ಸಿದ್ಧಪಡಿಸಿತು ಎಂಬುದನ್ನು ನಾವು ನೋಡುತ್ತೇವೆ. ಭಾರತೀಯ ವಾಯುಪಡೆಯಲ್ಲಿ ಪರೀಕ್ಷಾ ಪೈಲಟ್ ಆಗುವುದು ಮಿಲಿಟರಿ ವಿಮಾನ ಚಾಲಕರಿಗೆ ಲಭ್ಯವಿರುವ ಅತ್ಯಂತ ಗಣ್ಯ ಮತ್ತು ಬೇಡಿಕೆಯ ಪಾತ್ರಗಳಲ್ಲಿ ಒಂದಾಗಿದೆ.

ಆಯ್ಕೆ ಪ್ರಕ್ರಿಯೆಯು ಕಠಿಣವಾಗಿದೆ ಮತ್ತು ಫ್ಲೈಯಿಂಗ್ ಬ್ರಾಂಚ್‌ನಿಂದ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳ ಆಂತರಿಕ ಸ್ಕ್ರೀನಿಂಗ್‌ನೊಂದಿಗೆ ಪ್ರಾರಂಭವಾಗುತ್ತದೆ, ಸಾಮಾನ್ಯವಾಗಿ ಸ್ಕ್ವಾಡ್ರನ್ ಲೀಡರ್ ಶ್ರೇಣಿ ಅಥವಾ ಅದಕ್ಕಿಂತ ಹೆಚ್ಚಿನದು, ಬಲವಾದ ಕಾರ್ಯಾಚರಣೆಯ ಟ್ರ್ಯಾಕ್ ರೆಕಾರ್ಡ್ ಮತ್ತು ಕನಿಷ್ಠ 1.500 ಹಾರುವ ಗಂಟೆಗಳಿರುತ್ತದೆ. ಆದಾಗ್ಯೂ, ಪರೀಕ್ಷಾ ಪೈಲಟ್ ಆಗಲು, ಅಧಿಕಾರಿ ಮೊದಲು ಸ್ವತಃ ಸ್ವಯಂಸೇವಕರಾಗಿರಬೇಕು.

# 70 ವರ್ಷದ ಹಿಂದೆಯೇ ಚಾಲ್ತಿಯಲ್ಲಿತ್ತು 'ಲೀವ್ ಇನ್ ಟುಗೆದರ್' ಪದ್ಧತಿ, ಇಲ್ಲಿದೆ ಸಾಕ್ಷಿ

**ಜೈಪುರ:** ಲೀವ್ ಇನ್ ಟುಗೇದರ್ ಎನ್ನೋದು ಇತ್ತೀಚಿನ ದಿನಮಾನಗಳಲ್ಲಿ ಕಾಣಿಸಿಕೊಂಡಿರುವ ಪದ್ಧತಿ ಎಂದು ನೀವು ತಿಳಿದುಕೊಂಡಿದ್ದರೆ ನಿಮ್ಮ ಊಹೆ ತಪ್ಪು, ಸುಮಾರು 70 ವರ್ಷಗಳ ಹಿಂದೆಯೇ ಲೀವ್ ಇನ್ ರಿಲೇಷನ್ ಶಿಪ್ ಇತ್ತು ಎನ್ನುವುದಕ್ಕೆ ರಾಜಸ್ಥಾನದ ಈ ಜೋಡಿಯೇ ಸಾಕ್ಷಿ.

ಇಲ್ಲಿನ ಡುಂಗರಪುರ ಜಿಲ್ಲೆಯ ಬುಡಕಟ್ಟು ಗ್ರಾಮವಾದ ಗಲಂದರ್‌ನ 95 ವರ್ಷದ ರಾಮಭಾಯಿ ಖರಾರಿ ಹಾಗೂ 90 ವರ್ಷದ ಜೀವಲಿ ದೇವಿ ಅವರು ಕಳೆದ 70 ವರ್ಷಗಳಿಂದ ಲೀವ್ ಇನ್ ಸಂಬಂಧದಲ್ಲಿದ್ದು, ಇತ್ತಿಗಷ್ಟೆ ವಿವಾಹವಾಗಿರುವ ವಿಚಾರ ಸಾಮಾಜಿಕ ಜಾಲತಾಣದಲ್ಲಿ ಭಾರಿ ಸದ್ದು ಮಾಡುತ್ತಿದೆ.

ಲೀವ್ ಇನ್ ಸಂಬಂಧದಲ್ಲಿದ್ದ ಈ ವಯೋವೃದ್ಧ ಜೋಡಿಗೆ ಎಂಟು ಮಕ್ಕಳು ಮತ್ತು ಹಲವಾರು ಮೊಮ್ಮಕ್ಕಳಿದ್ದಾರೆ. ಆದಾಗ್ಯೂ,

ಏಳು ದಶಕಗಳ ಪ್ರಣಯದ ನಂತರ, ದಂಪತಿ ಇತ್ತೀಚೆಗೆ ವಿವಾಹವಾಗಲು ನಿರ್ಧರಿಸಿದರು. ಅವರ ಮಕ್ಕಳು ಈ ನಡೆಯನ್ನು ಬೆಂಬಲಿಸಿದರು.ಅವರು ಮದುವೆಯಾಗಲು ಆಸಕ್ತಿ ತೋರಿಸಿದರು, ಮತ್ತು ಇಡೀ ಕುಟುಂಬವು ಅದನ್ನು ಮುಂದುವರಿಸಲು ನಿರ್ಧಾರ ತೆಗೆದುಕೊಂಡಿತು.

ಪದ್ಧತಿಯ ಅಡಿಯಲ್ಲಿ, ಯಾವುದೇ ಬುಡಕಟ್ಟು ಪುರುಷ ಅಥವಾ ಮಹಿಳೆ ಮದುವೆಯಿಲ್ಲದೆ ತಮ್ಮ ಆಯ್ಕೆಯ ಇನ್ನೊಬ್ಬ ವ್ಯಕ್ತಿಯೊಂದಿಗೆ ಬದುಕಬಹುದು.

ಅಂತಹ ಸಂಬಂಧದಿಂದ ಜನಿಸಿದ ಮಗುವಿಗೆ ಪುರುಷನ ಎಲ್ಲಾ ರೀತಿಯ ಆಸ್ತಿಯ ಹಕ್ಕಿದೆ. ಆದಾಗ್ಯೂ, ಅವಿವಾಹಿತ ಸ್ಥಿತಿಯ ಕಾರಣದಿಂದಾಗಿ, ಕೆಲವು ನಿರ್ಬಂಧಗಳಿವೆ. ವಿಶೇಷವಾಗಿ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಮಹಿಳೆಯರು ತಮ್ಮ ಮಕ್ಕಳ ಮದುವೆ, ಹಬ್ಬ ಸಮಾರಂಭ, ವರನನ್ನು ಸ್ವಾಗತಿಸುವುದು ಮುಂತಾದ ಕಾರ್ಯಗಳಲ್ಲಿ ಭಾಗವಹಿಸಲು ಅವಕಾಶವಿಲ್ಲ.

# ಜವಾಬ್ದಾರಿಗಳ ನಡುವೆಯೂ ಮಹಿಳೆಯರ ಸಾಹಿತ್ಯ ಕೃಷಿ ಶ್ಲಾಘನೀಯ: ಶೈಲಾ ಜಯಕುಮಾರ್

**ದಾವಣಗೆರೆ:** ಹೆಣ್ಣುಮಕ್ಕಳು ಮಾತೃತ್ವ, ಮನೆತನ, ಮರ್ಯಾದೆ ಎಲ್ಲವನ್ನೂ ನಿಭಾಯಿಸಿಕೊಂಡು ಹೋಗುತ್ತಾ ಅದರ ಜೊತೆ ಜೊತೆಗೆ ಬರವಣಿಗೆಯನ್ನು ರೂಢಿಸಿಕೊಂಡು ಹೋಗುವುದು ಬಹು ಕಷ್ಟದ ಕೆಲಸ. ಆದರೂ ನಮ್ಮಲ್ಲಿ ಮಹಿಳಾ




ಲೇಖಕಿಯರು, ಸಾಹಿತಿಗಳು ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡಿದ್ದಾರೆ ಎನ್ನುವುದು ಹೆಮ್ಮೆಯ ವಿಷಯ ಎಂದು ಚಿತ್ರದುರ್ಗದ ಸಾಹಿತಿ ಶೈಲಾ ಜಯಕುಮಾರ್ ಅಭಿಪ್ರಾಯಪಟ್ಟರು.

ಶುಕ್ರವಾರ ನಗರದ ರೋಟರಿ ಬಾಲಭವನದಲ್ಲಿ ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಶಾಖೆಯಿಂದ ಹಮ್ಮಿಕೊಂಡಿದ್ದ 5 ನೇ ವಾರ್ಷಿಕೋತ್ಸವ ಹಾಗೂ ಎರಡು ಕೃತಿಗಳ ಲೋಕಾರ್ಪಣೆ ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ಕನ್ನಡ ಸಾಹಿತ್ಯಕ್ಕೆ 1,500 ವರ್ಷಗಳ ಇತಿಹಾಸವಿದೆಯಾದರೂ, ಸಾ

ಹಿತ್ಯ ಲೋಕದಲ್ಲಿ ಮಹಿಳೆಯರ ಕೃತಿಗಳು ಬಹಳ ಕಡಿಮೆ. ವಚನಕಾರರಿಗಿಂತ ಮೊದಲು ಮಹಿಳಾ ಬರಹಗಾರ್ತಿ ಅಭಿನವ ವಾಗ್ದೇವಿ ಎಂದೇ ಖ್ಯಾತಿಯಾಗಿದ್ದ ಕಂತಿ ಯನ್ನು ಕಾಣುತ್ತೇವೆ. ನಂತರ ಅಕ್ಕಮಹಾದೇವಿ, ಸಂಚಿ ಹೊನ್ನಮ್ಮ, ಚೆಲುವಾಂಬ, ಶೃಂಗಾರಮ್ಮನವರ ಸಾಹಿತ್ಯ ಕೃಷಿ ಕಾಣುತ್ತೇವೆ. ನಂತರದಲ್ಲಿ ಕನ್ನಡ ನವೋದಯ ಸಾಹಿತ್ಯದ ಮೊದಲ ಕವಯಿತ್ರಿ ಬೆಳಗೆರೆ ಜಾನಕಮ್ಮ, ಲಕ್ಷ್ಮೀದೇವಿ, ಗೀತಾ ಕುಲಕರ್ಣಿ ಹೀಗೆ ಮಹಿಳಾ ಸಾಹಿತಿಗಳನ್ನು ಹೆಸರಿಸಬಹುದಾಗಿದೆ. ಇವರೂ ಕೂಡ ಸಮಾಜದ ಕಟ್ಟುಪಾಡುಗಳನ್ನು ಎದುರಿಸಿಯೇ ತಮ್ಮ ಬರವಣಿಗೆಯನ್ನು ಮುಂದುವರೆಸಿದ್ದರು ಎಂಬುದು ನಗ್ನ ಸತ್ಯ ಎಂದರು.

ಕೌಟುಂಬಿಕ ಜವಾಬ್ದಾರಿಗಳ ನಡುವೆ ಹೆಣ್ಣುಮಕ್ಕಳು ಬರೆಯುತ್ತಿದ್ದಾರೆ. ಅವರು ಹೇಗೆ ಬರೆದರು ಎನ್ನುವುದಕ್ಕಿಂತ ಬರೆದರು ಅನ್ನುವುದೇ ಮುಖ್ಯ. ಕುವೆಂಪು ಬರೆಯುತ್ತಿದ್ದರು ಎಂದರೇ ಅವರು ಪತ್ನಿ ಹೇಮಾವತಿ ಅವರು ಮನೆಯ ಜವಾಬ್ದಾರಿಗಳನ್ನು ಹೊತ್ತಿದ್ದರು. ಪತ್ನಿ ತೀರಿಕೊಂಡ ನಂತರ ಅನೇಕ ವರ್ಷಗಳ ತನಕ ಬರೆಯುವುದನ್ನೇ ಬಿಟ್ಟಿದ್ದರು ಎಂಬ ಘಟನೆಯನ್ನು ತಿಳಿಸುವ ಮೂಲಕ ಮಹಿಳೆಯರ ಜವಾಬ್ದಾರಿಗಳು ಎಷ್ಟಿರುತ್ತದೆ ಎಂಬುದರ ಅರಿವು ಮೂಡಿಸಿದರು.

ಎಲ್ಲರ ಕಣ್ಣೀರು ಉಪ್ಪೇ...ಇಂದಿಗೂ ಸ್ತ್ರೀಯರ ಸ್ಥಿತಿಗತಿಗಳು ಬದಲಾಗಿಲ್ಲ. ಇಂದಿಗೂ ಅತಂತ್ರ ಸ್ಥಿತಿಯಲ್ಲಿ ಇದ್ದಾರೆ ಎನ್ನುವುದು ಬೇಸರದ ಸಂಗತಿಯಾಗಿದೆ. ಅದರ ನಡುವೆಯೂ ಸಾಹಿತ್ಯ ವಲಯದಲ್ಲಿ ಸಕ್ರೀಯರಾಗಿದ್ದಾರೆ ಎನ್ನುವುದು ಖುಷಿಯ ವಿಚಾರ. ಆದರೆ ಬರೆಯುವಾಗ ಅಧ್ಯಯನ ಮಾಡಿ ಬರೆಯಿರಿ ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಮಾತನಾಡಿ, ಇಂದು ಮತ್ತೆರಡು ಕೃತಿಗಳು ಲೋಕಾರ್ಪಣೆ ಆಗಿ, ಸಾಹಿತ್ಯ ಲೋಕ–ಕ್ಕೆ ಸೇರ್ಪಡೆಯಾಗುತ್ತಿದೆ. ಪರಿಶ್ರಮದ ಫಲವಾಗಿ ಈ ಕೃತಿಗಳು ಹೊರಬಂದಿದ್ದು, ಕೃತಿಕಾರರಿಗೆ ಹಾಗೂ ಲೇಖಕಿಯರ ಸಂಘಕ್ಕೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದರು.

ಮಹಿಳಾ ಸಾಹಿತಿಗಳು ನಾಗಾಲೋಟದಲ್ಲಿ ಮುನ್ನಡೆಯುತ್ತಿದ್ದಾರೆ. ಪರಿಷತ್ತಿನಲ್ಲೂ ಮಹಿಳಾ ಸಾಹಿತಿಗಳಿಗೆ ಹೆಚ್ಚು ಆದ್ಯತೆ ನೀಡಲಾಗುವುದು ಎಂದರಲ್ಲದೆ, ಮಹಿಳೆಯರ ದನಿಯಾಗಿದ್ದ ನಾಗಮ್ಮ ಕೇಶವಮೂರ್ತಿ, ಬೂಕರ್ ಪ್ರಶಸ್ತಿಗೆ ಭಾಜನರಾದ ಬಾನು ಮುಷ್ತಾಕ್, ದೀಪ ಬಸ್ತಿ ಅವರಂತಹ ಸಾಧಕರನ್ನು ಸ್ಮರಿಸಿ, ಅವರು ನಿಮಗೆಲ್ಲ ಮಾದರಿಯಾಗಲಿ ಎಂದು ಆಶಿಸಿದರು.

ವೇದಿಕೆ ಅಧ್ಯಕ್ಷತೆಯನ್ನು ಕಲೇಸಂ ಜಿಲ್ಲಾಧ್ಯಕ್ಷೆ ವೀಣಾ ಕೃಷ್ಣಮೂರ್ತಿ ವಹಿಸಿದ್ದು, ಅತಿಥಿಗಳಾಗಿ ಕಸಾಪ ತಾಲ್ಲೂಕು ಅಧ್ಯಕ್ಷೆ ಸುಮತಿ ಜಯಪ್ಪ ಆಗಮಿಸಿ ಹಿತನುಡಿದರು. ಇದೇ ವೇಳೆ ಕಲೇಸಂ ಜಿಲ್ಲಾ ಸದಸ್ಯರ ಸಂಕಲನ ಕೃತಿ'ವನಿತೆ–ಕಥೆ–ಕವಿತೆ' ಕೃತಿ ಹಾಗೂ ಲೇಖಕಿ ಮಂಜುಳಾ ಮಂಜಪ್ಪ ಅವರ 'ನುಡಿಬಾಣ–ಸತ್ಯದರ್ಶನ' ಕೃತಿಗಳನ್ನು ಬಿಡುಗಡೆ ಮಾಡಲಾಯಿತು. ನಂತರ ಕೃತಿಗಳ ಎಲ್ಲ ಲೇಖಕಿಯರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ವಾಚನ ನಡೆಯಿತು. ಕಲೇಸಂ ಸದಸ್ಯರು ಆರಂಭದಲ್ಲಿ ದೇಶಭಕ್ತಿ ಗೀತೆಗಳನ್ನು ಹಾಡಿದರು. ಉಪಾಧ್ಯಕ್ಷೆ ಎಸ್. ಎಂ. ಮಲ್ಲಮ್ಮ ಸ್ವಾಗತಿಸಿದರು. ಅಧ್ಯ–ಕ್ಷೆ ವೀಣಾ ಕೃಷ್ಣಮೂರ್ತಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಎಸ್. ಉಮಾದೇವಿ ಹಿರೇಮಠ್ ಸಹಕಾರ ನೀಡಿದರು.

# ಕರ್ನಾಟಕ ಒಕ್ಕಲಿಗ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

**ಶಿವಮೊಗ್ಗ:** ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ 2025–26 ನೇ ಸಾಲಿನ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಾವಂಭಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ,(ಬ್ಯಾಂಕುಗಳ ಸಹಯೋಗದೊಂದಿಗೆ) ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಯೋಜನೆಗಳಿಗೆ ಹಿಂದುಳಿದ ವರ್ಗಗಳ ಪ್ರವರ್ಗ–3ರಲ್ಲಿ ಬರುವ ಒಕ್ಕಲಿಗ ಸಮುದಾಯಗಳಿಗೆ ಸೇರಿದ ಕ್ರಮ ಸಂಖ್ಯೆ 1(ಎ) ಯಿಂದ (ಟಿ) ವರೆಗೆ ನಮೂದಾಗಿರುವ ಸಮುದಾಯಕ್ಕೆ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಲಿಂಗಾಯಿತ, ಕಾಡುಗೊಲ್ಲ, ಮರಾಠ, ಮತ್ತು ಇದರ ಉಪಜಾತಿಗಳನ್ನು ಹೊರೆತುಪಡಿಸಿ)ಸೇರಿದ ಆಸಕ್ತರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ನಿಗಮವು ಅನುಷ್ಠಾನಗೊಳಿಸಿರುವ ಮೇಲ್ಕಂಡ ಯೋಜನೆಗಳನ್ನು ಶಾಸಕರು ಅಥವಾ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಅಧ್ಯಕ್ಷರ ನೇತೃತ್ವದಲ್ಲಿ ರಚಿಸಿದ ಆಯ್ಕೆ ಸಮಿತಿಯ ಮೂಲಕ ಆಯ್ಕೆಯನ್ನು ಮಾಡಲಾಗುವುದು. 2023–24 ಮತ್ತು 2024–25 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬಹುದು.

ಈ ಸೌಲಭ್ಯಗಳನ್ನು ಪಡೆಯಲು ಸೇವಾಸಿಂಧು http:/sevasindhu.karnataka.gov.in ಪೋರ್ಟಲ್ನ ಮುಖಾಂತರ ಗ್ರಾಮ ಒನ್, ಶಿವಮೊಗ್ಗ ಒನ್, ಕರ್ನಾಟಕ ಒನ್, ಮೂಲಕ ಅನ್ ಲೈನ್ ನಲ್ಲಿ ಮತ್ತು ಕ್ರಮಸಂಖ್ಯೆ 06 ರಲ್ಲಿ ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆಗೆ ಅರ್ಜಿಯನ್ನು ಕೌಶಲ್ಯ ಕರ್ನಾಟಕ ಅಭಿವೃದ್ಧಿ ನಿಗಮದ ತಂತ್ರಾಂಶ ಞಣಣಠ://ತಿತಿತಿ.ಇಚಿಜ್ಞುಚಿಟಇಚಿಡಿ.ಛಿಠಟ ನಲ್ಲಿ ಅರ್ಜಿಯನ್ನು ಸಲ್ಲಿಸಲು ಜುಲೈ 02 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಒಕ್ಕಲಿಗ ಸಮುದಾಯದ ಅಭಿವೃದ್ಧಿ ನಿಗಮದ ಜಾಲತಾಣ https://kvcdc.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ(ನಿ), ಭಾಗ್ಯ ನಿಲಯ, 1ನೇ ತಿರುವು, ಗಾಂಧಿನಗರ, ಶಿವಮೊಗ್ಗ ಇಲ್ಲಿ ಪಡೆಯಬಹುದಾಗಿದೆ. ದೂ. ಸಂ. 08182–229634 ಸಂಪರ್ಕಿಸಿ ಎಂದು ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮದಿಂದ 2025–26 ನೇ ಸಾಲಿನ ವಿವಿಧ ಯೋಜನೆಗಳಾದ ಶೈಕ್ಷಣಿಕ ಸಾಲ ಯೋಜನೆ, ಜೀವಜಲ ಯೋಜನೆ, ಕಾಯಕಕಿರಣ ಯೋಜನೆ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ಸ್ವಾವಂಭಿ ಸಾರಥಿ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ, ಸ್ವ ಸಹಾಯ ಸಂಘಗಳ ಉತ್ತೇಜನ ಯೋಜನೆಗಳಡಿಯಲ್ಲಿ ಸೌಲಭ್ಯ ಪಡೆಯಲು ಹಿಂದುಳಿದ ವರ್ಗಗಳಿಗೆ ಸೇರಿದ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಸವಿತಾ ಕಾಡುಗೊಲ್ಲ, ಮರಾಠ ಮತ್ತು ಇದರ ಉಪ ಸಮುದಾಯಗಳನ್ನು ಹೊರೆತುಪಡಿಸಿ) ಸಮುದಾಯಗಳ ಆಸಕ್ತರಿಂದ ಆನ್ಲೈನ್ ಅರ್ಜಿ ಆಹ್ವಾನಿಸಿದೆ.

ಈ ಮೇಲಿನ ಯೋಜನೆಯ ಫಲಾನುಭವಿಗಳಾಗಲು ಅರ್ಜಿದಾರರು ತಮ್ಮ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿರಬೇಕು. ನಿಗಮವು ಅನುಷ್ಠಾನಗೊಳಿಸುವ ಈ ಮೇಲ್ಕಂಡ ಯೋಜನೆಗಳಲ್ಲಿ ಸರ್ಕಾರದ ವಿವೇಚನಾ ಕೋಟಾ ಮತ್ತು ನಿಗಮದ ಅಧ್ಯಕ್ಷರು ಅಥವಾ ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರೂ ಸಹ ಆನ್ ಲೈನ್ನಲ್ಲಿ ಅರ್ಜಿಯನ್ನು ಸಲ್ಲಿಸುವುದು. ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. 2023–24 ಹಾಗೂ 2024–25 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಅದೇ ಯೋಜನೆಗೆ ಈ ವರ್ಷ ಮರು ಅರ್ಜಿ ಸಲ್ಲಿಸುವ ಅಗತ್ಯತೆ ಇರುವುದಿಲ್ಲ.

ಆಸಕ್ತರು ಸೇವಾಸಿಂಧು ಪೋರ್ಟಲ್ http:/sevasindhu.karnataka.gov.in ಮುಖಾಂತರ ಗ್ರಾಮ ಒನ್/ ಬೆಂಗಳೂರು ಒನ್/ ಕರ್ನಾಟಕ ಒನ್ ನಾಗರೀಕ ಸೇವಾಕೇಂದ್ರಗಳಲ್ಲಿ ದಾಖಲೆಗಳ ಸಹಿತ ಜೂನ್ 30 ರೊಳಗಾಗಿ ಅರ್ಜಿ ಸಲ್ಲಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ https://kvldcl.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮ(ನಿ), ಭಾಗ್ಯ ನಿಲಯ, 1ನೇ ತಿರುವು ಗಾಂಧಿನಗರ, ಶಿವಮೊಗ್ಗ ಇಲ್ಲಿ ಪಡೆಯಬಹುದಾಗಿದೆ. ದೂ.ಸಂ. 08182–229634 ಗೆ ಸಂಪರ್ಕಿಸಬಹುದಾಗಿರುತ್ತದೆ.

# ಪಂಚ ಗ್ಯಾರಂಟಿ ಯೋಜನೆಗಳನ್ನು ಈವರೆಗೂ ಉಪಯೋಗ ಪಡೆಯದ ಅರ್ಹ ಫಲಾನುಭವಿಗಳಿಗೆ ಜೂನ್ 14ರಂದು ವಿಶೇಷ ನೋಂದಣಿ ಅಭಿಯಾನ

**ಗದಗ:** ಪಂಚ ಗ್ಯಾರಂಟಿಗಳಿಂದ ದೂರವಾಗಿರುವ ಅರ್ಹ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆ ವ್ಯಾಪ್ತಿಗೆ ಸೇರಿಸಲು ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಜೂನ್ 14ರಂದು ಬೆಳಿಗ್ಗೆ 10ರಿಂದ ಸಂಜೆ 5ರ ವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿಗಳ ಅನುಷ್ಠಾನದಿಂದ ಗದಗ ತಾಲೂಕು, ಜಿಲ್ಲೆ ಸೇರಿ ರಾಜ್ಯಾದ್ಯಂತ ಬಡತನರೇಖೆಯಲ್ಲಿದ್ದ ಕುಟುಂಬಗಳನ್ನು ಆರ್ಥಿಕವಾಗಿ ಮೇಲೆತ್ತಲು ಸಹಕಾರಿಯಾಗಿದೆ. ಈಗಾಗಲೇ ಗದಗ ತಾಲೂಕಿನಲ್ಲಿ ಶೇ. 98ಕ್ಕೂ ಅಧಿಕ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದು, ಅರ್ಹ ಫಲಾನುಭವಿಗಳು ಯೋಜನೆಗಳನ್ನು ಸದುಪಯೋಗಪಡಿಸಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ರೇಷನ್ ಕಾರ್ಡ್ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬದ ಸದಸ್ಯರ ಫೋಟೊ ಬದಲಾವಣೆ, ಕುಟುಂಬದ ಮುಖ್ಯಸ್ಥರ ಬದಲಾವಣೆ ಸೇರಿ ಗೃಹಲಕ್ಷ್ಮೀ, ಯುವನಿಧಿ, ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ಅರ್ಜಿ ಹಾಕಲಾಗುವುದು. ಇದುವರೆಗೆ ಪಂಚ ಗ್ಯಾರಂಟಿ ಯೋಜನೆಗಳ ಉಪಯೋಗ ಪಡೆಯದಿರುವ ಅರ್ಹ ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ನೀಡಿ ಯೋಜನೆಗಳನ್ನು ಸುದಪಯೋಗಪಡಿಸಿಕೊಳ್ಳಬಹುದಾಗಿದೆ.

ಅರ್ಹ ಫಲಾನುಭವಿಗಳು ಮುಳಗುಂದ ನಾಕಾ ಬಳಿಯ ಕೆ ಎಸ್ ಆರ್ ಟಿ ಸಿ ಡಿಪೋ ಎದುರಿನ ಉಪವಿಭಾಗಾಧಿಕಾರಿ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಜೂನ್ 14ರಂದು ಬೆಳಿಗ್ಗೆ 10ರಿಂದ ಸಂಜೆ 5ರೊಳಗಾಗಿ ಭೇಟಿ ನೀಡಬಹುದಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ತಿಳಿಸಿದ್ದಾರೆ.

# ಜೆಸಿಐ ಶಿವಮೊಗ್ಗ ಸಹ್ಯಾದ್ರಿ ಘಟಕಕ್ಕೆ ವಲಯ ಮಟ್ಟದ 10 ಪ್ರಶಸ್ತಿ

**ಶಿವಮೊಗ್ಗ:** ಜೆಸಿಐ ಶಿವಮೊಗ್ಗ ಸಹ್ಯಾದ್ರಿ ಘಟಕ 2025ರಲ್ಲಿ ಅನೇಕ ವಿಶೇಷ ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ನಡೆಸುವುದರ ಮುಖಾಂತರ ವಲಯಮಟ್ಟದ 10 ವಿಶೇಷ ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡು ಪ್ರಶಂಸೆಗೆ ಪಾತ್ರವಾಗಿದೆ.

ವಿಜಯನಗರ ಜಿಲ್ಲೆಯ ಹೂವಿನಹಡಗಲಿ ನಗರದ ರುದ್ರಾಂಬಾ ಎಂಪಿ ಪ್ರಕಾಶ್ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಜೆಸಿಐ ಹೂವಿನಹಡಗಲಿ ರಾಯಲ್ ಘಟಕ ಆಯೋಜಿಸಿದ್ದ ಮಧ್ಯವಾರ್ಷಿಕ ವಲಯ ಸಮ್ಮೇಳನ 2025 ಪಂಚಜನ್ಯ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಜೆಸಿಐ ಶಿವಮೊಗ್ಗ ಸಹ್ಯಾದ್ರಿ ಘಟಕ 10 ಪ್ರಶಸ್ತಿಗಳನ್ನು ಪಡೆದುಕೊಂಡಿದೆ.




ಅತ್ಯುತ್ತಮ ಅಧ್ಯಕ್ಷ ಪ್ರಶಸ್ತಿ, ಅತ್ಯುತ್ತಮ ಕಾರ್ಯದರ್ಶಿ, ಸಮುದಾಯ ಸೇವೆ, ವಿಶೇಷ ತರಬೇತಿ, ವ್ಯವಹಾರ ಮಾರ್ಗದರ್ಶನ, ವಿಶೇಷ ರಕ್ತದಾನ ಶಿಬಿರ, ಪಬ್ಲಿಕ್ ಇಮೇಜ್, ಮ್ಯಾನೇಜ್ಮೆಂಟ್ ಏರಿಯಾ, ಲೇಡಿ ಜೆಸಿ ವಿಂಗ್ ಹಾಗೂ ಅನೇಕ ವಿಭಾಗಗಳಲ್ಲಿ ವಿಶೇಷ ಸಾಧನೆ ಮಾಡಿದ ಜೆಸಿಐ ಶಿವಮೊಗ್ಗ ಸಹ್ಯಾದ್ರಿ ಘಟಕ ದಾಖಲೆ ಮಾಡಿದೆ. ಎಲ್ಲಾ ಪ್ರಶಸ್ತಿ, ಪ್ರಮಾಣ ಪತ್ರ ಹಾಗೂ ವಿಶೇಷ ಪಾರಿತೋಷಕಗಳನ್ನು ಜೆ ಸಿ ಐ ಶಿವಮೊಗ್ಗ ಸಹ್ಯಾದ್ರಿ ಘಟಕದ ಅಧ್ಯಕ್ಷ ಜಿ.ವಿ.ಗಣೇಶ್ ಪಡೆದುಕೊಂಡರು.

ಪ್ರಶಸ್ತಿ ಪಡೆದುಕೊಂಡ ಶಿವಮೊಗ್ಗ ಸಹ್ಯಾದ್ರಿ ಘಟಕದ ಅಧ್ಯಕ್ಷ ಜಿ.ವಿ.ಗಣೇಶ ಮಾತನಾಡಿ, ನಮ್ಮ ಘಟಕದ ಎಲ್ಲಾ ಹಿರಿಯ ಸದಸ್ಯರು ಹಾಗೂ ಪದಾಧಿಕಾರಿಗಳ ಸಹಕಾರದಿಂದ ಪ್ರಶಸ್ತಿಗಳು ನಮಗೆ ಬಂದಿವೆ. ಇದರಿಂದ ತುಂಬಾ ಸಂತೋಷ ಹಾಗೂ ಹೆಮ್ಮೆ ಆಗಿದೆ. ಬರುವ ದಿನಗಳಲ್ಲಿ ಇನ್ನೂ ಹೆಚ್ಚು ಹೆಚ್ಚು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ಈ ವಲಯ ಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಜೆ ಸಿ ಐ ಭಾರತ ವಲಯ ಅಧ್ಯಕ್ಷ ಜೆಸಿಐ ಸೆನೆಟರ್ ಗೌರೀಶ್ ಭಾರ್ಗವ ಕೆವಿ, ವಲಯ ಉಪಾಧ್ಯಕ್ಷ ಜೆಎಫ್ಡಿ ಮಧುಸೂದನ್, ವಲಯ ತರಬೇತಿ ಸಂಯೋಜಕ ವಿದ್ಯಾಧರ ಕುತನಿ, ವಲಯ ತರಬೇತಿ ನಿರ್ದೇಶಕಿ ರಾಜೇಶ್ವರಿ ಹರಿಹರ, ಜೆಸಿಐ ಹೂವಿನಹಡಗಲಿ ರಾಯಲ್ ಅಧ್ಯಕ್ಷ ವಿನಾಯಕ ಕೋಡಿಹಳ್ಳಿ, ಸಂಸ್ಥಾಪಕ ಅಧ್ಯಕ್ಷ ಯೋಗಿಂದ್ರ ಜಂಬಗಿ, ಶಿವಮೊಗ್ಗ ಸಹ್ಯಾದ್ರಿ ಘಟಕದ ಅನುಷ್ ಗೌಡ, ಶೇಷಗಿರಿ, ಮಹದೇವಸ್ವಾಮಿ, ಪೂರ್ಣಿಮಾ ಸುನಿಲ್ ಉಪಸ್ಥಿತರಿದ್ದರು.

# ಪುರಸಭೆ ವ್ಯಾಪ್ತಿಯಲ್ಲಿ ಅಧ್ಯಕ್ಷ ಪ್ರಭು ಸ್ಥಳ ಪರೀಶಿಲನೆ

**ಸೊರಬ:** ಪುರಸಭೆ ವ್ಯಾಪ್ತಿಗೆ ಒಳಪಡುವ ಹೊಸಪೇಟೆ ಬಡಾವಣೆಯಲ್ಲಿ ಮಳಿಯಿಂದಾಗಿ ರಸ್ತೆಯಲ್ಲಿ ನೀರು ನಿಂತು ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾದ ಪ್ರದೇಶಗಳಿಗೆ ಶುಕ್ರವಾರ ಪುರಸಭೆ ಅಧ್ಯಕ್ಷ ಪ್ರಭು ಮೇಸ್ತ್ರೀ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹೊಸಪೇಟೆ ಬಡಾವಣೆಯ ನಾರಾಯ–ಣಗುರು ಸರ್ಕಲ್, ಹೊಸಬಾಳೆ ರಸ್ತೆಯ ಶ್ರೀ ವಿವೇಕಾನಂದ ವೃತ್ತ ಸೇರಿದಂತೆ ಸಿದ್ದಾಪುರ ರಸ್ತೆಯಲ್ಲಿ ಅವಲೋಕಿಸಿದರು.




ಮಳೆ ಬಂದ ಸಂದರ್ಭದಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದೇ ಇರುವುದರಿಂದ ಮಳೆ ನೀರು ರಸ್ತೆಯಲ್ಲಿ ಹೊಳೆಯಂತೆ ಹರಿಯುತ್ತದೆ. ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ಮಾಡಬೇಕು. ಇಲ್ಲವಾದಲ್ಲಿ ಸಾರ್ವಜನಿಕ ಸಂಚಾರಕ್ಕೆ ತೊಂದರೆ–ಯಾಗುತ್ತದೆ. ಈ ಬಗ್ಗೆ ಪುರಸಭೆ ಗಮನಕ್ಕೆ ತಂದರೂ ಯಾರೂ ಸಹ ಗಮನ ನೀಡಿಲ್ಲ ಎಂದು ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ನಾಗರಾಜ ಗೌಡ ಚಿಕ್ಕಾವಲಿ ಅವರು ಪುರಸಭೆ ಅಧ್ಯಕ್ಷರ ಗಮನಕ್ಕೆ ತಂದರು.

ಪ್ರತಿಕ್ರಿಯಿಸಿದ ಪುರಸಭೆ ಅಧ್ಯಕ್ಷ ಪ್ರಭು ಮೇಸ್ತ್ರಿ, ಹೊಸಪೇಟೆ ಬಡಾವಣೆಯು ಪುರಸಭೆ ವ್ಯಾಪ್ತಿಗೆ ಒಳಪಡುತ್ತದೆ. ಈಗಾಗಲೇ ಪುರಸಭೆಯಿಂದ ಕಸ ಸಂಗ್ರಹಣೆ ಮಾಡಲಾಗುತ್ತಿದೆ. ಸಾರ್ವಜನಿಕರಿಗೆ ತೊಂದ–ರೆಯಾಗ 'ದಂತೆ ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ಮಾಡಲಾಗುವುದು. ಮಳೆಗಾಲ ಆರಂಭವಾಗಿದೆ. ಕಳೆದ ಎರಡು ದಿನಗಳಿಂದ ಮಳೆ ಬಿಡುವು ನೀಡಿದ್ದು, ಕೆಲವಡೆ ಚರಂಡಿಗಳನ್ನು ಮುಚ್ಚಲಾಗಿದೆ. ಕೂಡಲೇ ಅವುಗಳನ್ನು ತೆರವು ಮಾಡಬೇಕು ಎಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿ–ದರು.

ಈ ಸಂದರ್ಭದಲ್ಲಿ ಪುರಸಭೆಯ ಹಿರಿಯ ಆರೋಗ್ಯ ನಿರೀಕ್ಷಕ ಎಸ್. ರಣಜಿತ್ ಕುಮಾರ್, ಆರೋಗ್ಯ ನಿರೀಕ್ಷಕ ಎ.ಎನ್. ರವಿಕುಮಾರ್ ನಾಯ್ಕ್, ಸಾರ್ವಜನಿಕ ಹಿತರಕ್ಷಣಾ ಹೋರಾಟ ಸಮಿತಿ ಉಪಾಧ್ಯಕ್ಷ ದತ್ತಾ ಸೊರಬ, ಹೊಸಪೇಟೆ ಬಡಾವಣೆ ನಿವಾಸಿ ನವೀನ್ ಕುಮಾರ್ ಸೇರಿದಂತೆ ಪುರಸಭೆ ಸಿಬ್ಬಂದಿ ಮುನಿಸ್ವಾಮಿ

# ಮೈಸೂರು ದೃಶ್ಯಕಲಾ ಅತಿಥಿ ಉಪನ್ಯಾಸಕರ ತಾತ್ಕಾಲಿಕ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಮೈಸೂರು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅತಿಥಿ ಉಪನ್ಯಾಸಕ/ಸಂಪನ್ಮೂಲ ವ್ಯಕ್ತಿಗಳಾಗಿ ಬೋಧನೆ ಮಾಡಲು ಇಚ್ಛಿಸುವವರಿಂದ ಗೌರವ ಸಂಭಾವನೆ ಆಧಾರದ ಮೇಲೆ ಷರತ್ತು ಹಾಗೂ ನಿಬಂಧನೆಗಳನ್ವಯ ಕಾರ್ಯನಿರ್ವಹಿಸಲು ಅರ್ಜಿಗಳನ್ನು ಅಹ್ವಾನಿಸಿದೆ.

ಬಿ.ವಿ.ಎ/ಎಂ.ಬಿ.ಎ.ವಿದ್ಯಾರ್ಥಿಗಳು ಸೇರಿದಂತೆ ಅನ್ವಯ ಕಲೆ, ಚಿತ್ರಕಲೆ, ಶಿಲ್ಪಕಲೆ, ಅಚ್ಚುಕಲೆ(ಗ್ರಾಫಿಕ್ಸ್) ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮಗಳ ಪ್ರಾಯೋಗಿಕ ಮತ್ತು ಥಿಯರಿ,ಕಲಾ ಇತಿಹಾಸದ ಥಿಯರಿ ಬೋಧನೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಸಂಬಂಧಪಟ್ಟ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಪೋಸ್ಟ್ ಡಿಪ್ಲೋಮದಲ್ಲಿ (ಪಿ.ಜಿ.ಡಿಪ್ಲೋಮಾ) ಕನಿಷ್ಠ 55%ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಕನ್ನಡ, ಇಂಗ್ಲೀಷ್, ಹಿಂದಿ ಭಾಷಾ ವಿಷಯಗಳಿಗೆ ಸಂಬಂಧಿಸಿದಂತೆ ಆಯಾ ಭಾಷಾ ಸ್ನಾತಕೋತ್ತರ ಪದವಿ ಪಡೆದಿರಬೇಕು. ಭಾರತ ಮತ್ತು ಭಾರತೀಯ ಸಂವಿಧಾನ ಹಾಗೂ ಸಂವಿಧಾನದ ಮೌಲ್ಯಗಳು ವಿಷಯಕ್ಕೆ ಸಂಬಂಧಿಸಿದಂತೆ ಕಾನೂನು ವಿಷಯದಲ್ಲಿ ಸ್ನಾತಕೋತ್ತರ ಪದವಿ ಮತ್ತು ಸೈಬರ್ ಸೆಕ್ಯೂರಿಟಿ/ಆರ್ಟಿಫಿಶಲ್ ಇಂಟಲಿಜೆಟ್ಸ್ ವಿಷಯಕ್ಕೆ ಸಂಬಂಧಿಸಿದಂತೆ ಎಂ.ಎಸ್ಸಿ(ಐಟಿ) ಸ್ನಾತಕೋತ್ತರ ಪದವಿ ಪಡೆದಿರಬೇಕು.

ಆಸಕ್ತರು ಕರ್ನಾಟಕ ಸರ್ಕಾರದ ಅಂತರ್ಜಾಲ www.mysore.nic.in ಮತ್ತು www.cavamysore.karnataka.gov.in ದ ಮೂಲಕ ಮಾಹಿತಿ ಪಡೆದು ಅರ್ಜಿಯನ್ನು ಜೂ.16ರೊಳಗಾಗಿ ಸಲ್ಲಿಸುವುದು. ಜೂ 26 ರಂದು 11.00ಕ್ಕೆ ಸಂಸ್ಥೆಯಲ್ಲಿ ಸಂದರ್ಶನ ನಡೆಸಿ ತರಗತಿಗಳು ಅನ್ವಯವಾಗುವಂತೆ ಕಾರ್ಯ ನಿರ್ವಹಿಸಲು ತಿಳಿಸಲಾಗುವುದು ಎಂದು ಮೈಸೂರು ಕಾವಾ ಡೀನ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ವೆಬ್ಸೈಟ್ ಹಾಗೂ ದೂ.ಸಂ.: 0821–2438931 ನ್ನು ಸಂಪರ್ಕಿಸುವುದು.

# ಪ್ಲಾಸ್ಟಿಕ್ ಉತ್ಪಾದನೆ ನಿಲ್ಲಿಸಿ, ಪರಿಸರ ಉಳಿಸಿ– ಡಾ.ರಾಜೇಶ್ವರಿ

**ಶಿವಮೊಗ್ಗ:** ಸಹ್ಯಾದ್ರಿ ವಿಜ್ಞಾನ ಕಾಲೇಜಿನ ರೆಡ್‌ಕ್ರಾಸ್ ಹಾಗೂ ಪರಿಸರ ವಿಜ್ಞಾನ ವಿಭಾಗದ ವತಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಪರಿಸರ ವಿಜ್ಞಾನ ವಿಭಾಗದ ಮುಖ್ಯಸ್ಥರಾದಡಾ. ನಾಗರಾಜ ಪರಿಸರ ಪ್ರಾಸ್ತಾವಿಕವಾಗಿ ಮಾತನಾಡಿ ಪರಿಸರ ದಿನಾಚರಣೆಯನ್ನು 1973 ರಿಂದ ಪ್ರತಿ ವರ್ಷಒಂದೊಂದುಘೋಷವಾಕ್ಯದಡಿ ಆಚರಿಸಿಕೊಂಡು ಬರಲಾಗುತ್ತಿದೆ ,ಈ ವರ್ಷದಘೋಷವಾಕ್ಯ ಪ್ಲಾಸ್ಟಿಕ್ ಬಳಕೆಯನ್ನು ನಿಲ್ಲಿಸಿ ಪ್ಲಾಸ್ಟಿಕ್ ಮಾಲಿನ್ಯವನ್ನುತಡೆಯುವುದಾಗಿದೆ , ಪ್ರತಿ ದಿನ ಪ್ಲಾಸ್ಟಿಕ್ ಮಾಲಿನ್ಯದಿಂದ ಪರಿಸರ ಸರ್ವನಾಶವಾಗುತ್ತಿದ್ದು ಮುಂದಿನ ದಿನಗಳಲ್ಲಿ ಇದಕ್ಕೆ ಸರ್ಕಾರಕಡಿವಾಣ ಹಾಕಬೇಕಾಗಿದೆ. ಉತ್ಪಾದನೆಯನ್ನು ಮೂಲದಲ್ಲಿಯೇ ನಿಲ್ಲಿಸುವುದರಿಂದ ಪರಿಸರ ಉಳಿಸಲು ಸಾಧ್ಯವಾಗುವುದು ಸರ್ಕಾರ ಈ ನಿಟ್ಟಿನಲ್ಲಿಕೂಡಲೇಒಂದು ದಿಟ್ಟ ನಿರ್ಧಾರವನ್ನು ತೆಗೆದುಕೊಳ್ಳಬೇಕಿದೆ ಎಂದು ತಿಳಿಸಿದರು.ಕಾಲೇಜಿನ ಪ್ರಾಚಾರ್ಯರಾದಡಾ.ರಾಜೇಶ್ವರಿಅವರು ಸಹ ಮಾತನಾಡುತ್ತಾ ಪ್ಲಾಸ್ಟಿಕ್ ಬಳಸಬೇಡಿ ಎಂದು ತಿಳಿಸುವ ಬದಲು ಪ್ಲಾಸ್ಟಿಕ್ ಉತ್ಪತ್ತಿಯನ್ನು ನಿಲ್ಲಿಸುವುದುಒಂದು ಸೂಕ್ತ ಕ್ರಮವಾಗಿದೆಇತ್ತೀಚಿನ ದಿನಗಳಲ್ಲಿ ಪ್ಲಾಸ್ಟಿಕ್ ನಿಂದ ಸಾಕಷ್ಟು ಸಮಸ್ಯೆಗಳನ್ನು ನಾವು ಮಾಧ್ಯಮಗಳ ಮೂಲಕ ನೋಡುತ್ತಿದ್ದೇವೆ ಆಸ್ಪತ್ರೆಗಳು ಹೆಚ್ಚಾಗುತ್ತಿವೆಅದಕ್ಕೆಲ್ಲ ಪರಿಹಾರಎಂದರೆ ಪ್ಲಾಸ್ಟಿಕ್ ಉತ್ಪತ್ತಿ ನಿಲ್ಲಿಸುವುದಾಗಿದೆ ಸರ್ಕಾರಕೂಡಲೇಕ್ರಮ ತೆಗೆದುಕೊಳ್ಳದಿದ್ದರೆ ಮುಂದೆದೊಡ್ಡಅ ನಾಹುತವಾಗಲಿದೆಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಾಣಿಜ್ಯಕಾಲೇಜಿನ ಪ್ರಾಚಾರ್ಯರಾದ ಡಾ. ಅವಿನಾಶ್, ಎಸ್ಟೇಟ್‌ಅಧಿಕಾರಿಡಾ.ಮಂಜುನಾಥ್, ಅರಣ್ಯ ಅಧಿಕಾರಿಗಳಾದ ಶ್ರೀಮತಿ ಸಿಂಧು, ರೆಡ್‌ಕ್ರಾಸ್ ಅಧಿಕಾರಿಗಳಾದ ಡಾ. ಕೆ .ಎಲ್ ನಾಯಕ್, ಶ್ರೀ ಸಾಯಿಶ್ವರ್, ಎಸ್ ಅಧಿಕಾರಿಗಳಾದ ಡಾ. ಹಾ.ಮ. ನಾಗಾರ್ಜುನ , ಶ್ರೀ ಅರುಣ್ , ಹಾಗೂ ಕಾಲೇಜಿನ ಸಿಬ್ಬಂದಿಗಳಾದ ಡಾ. ನಾಗರಾಜ್, ಡಾ.ವೆಂಕಟೇಶ್, ಶ್ರೀ ಜೀವನ್, ಶ್ರೀಮತಿ ಶಿಲ್ಪ, ಪ್ರೇಮಇನ್ನಿತರರು ಉಪಸ್ಥಿತರಿದ್ದರು.



# ಅನಧಿಕೃತ ವ್ಯಕ್ತಿಯಿಂದ ಕಚೇರಿ ಕೆಲಸ, ನಗದು ವಹಿಯಲ್ಲಿ ವ್ಯತ್ಯಾಸ ಪಾಲಿಕೆ ವಲಯ ಕಚೇರಿ ದ್ವಿತೀಯ ದರ್ಜೆ ಸಹಾಯಕಿ ರೂಪಾ.ಹೆಚ್ ಅಮಾನತು

**ದಾವಣಗೆರೆ :** ದಾವಣಗೆರೆ ಮಹಾನಗರಪಾಲಿಕೆ ವಲಯ ಕಚೇರಿ–2ರಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ರೂಪಾ.ಹೆಚ್ ಇವರನ್ನು ನಗದು ವಹಿಯಲ್ಲಿ ತಪ್ಪು ನಮೂದು, ತಪಾಸಣೆ ನಡೆಸಿದ ವೇಳೆ ಅಸಹಕಾರ ಮತ್ತು ಅನಧಿಕೃತ ವ್ಯಕ್ತಿಯನ್ನು ಸಹಕಾರಕ್ಕಾಗಿ ನೇಮಿಸಿಕೊಂಡಿರುವ ಆರೋಪದ ಮೇಲೆ ಕರ್ತವ್ಯ ಲೋಪವೆಂದು ಪರಿಗಣಿಸಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಅಮಾನತು ಮಾಡಿ ಆದೇಶಿಸಿದ್ದಾರೆ.

ಕು. ರೂಪಾ.ಹೆಚ್. ದ್ವಿತೀಯ ದರ್ಜೆ ಸಹಾಯಕರು ರವರು ವಲಯ ಕಛೇರಿ–2. ಮಹಾನಗರಪಾಲಿಕೆ ದಾವಣಗೆರೆ ಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಪಾಲಿಕೆಯಲ್ಲಿ "ಎ" ಖಾತಾ ಮತ್ತು "ಬಿ ಖಾತಾ ಆಂದೋಲನದ ಪ್ರಗತಿ ಕುರಿತು ಜೂನ್ 6 ರಂದು ಜಿಲ್ಲಾಧಿಕಾರಿ ಅವರು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಮಯದಲ್ಲಿ ವಲಯ ಕಛೇರಿ–2 ರಲ್ಲಿ ನಿರ್ವಹಿಸಲಾಗುತ್ತಿರುವ ನಗದು ವಹಿಯಲ್ಲಿ ನೌಕರಳು ತನ್ನ ಬಳಿ ರೂ.500 ಇರುವುದೆಂದು ಘೋಷಿಸಿಕೊಂಡಿರುತ್ತಾರೆ. ಆದರೆ ನೌಕರರನ್ನು ತಪಾಸಣೆ ನಡೆಸಿದ ಸಮಯದಲ್ಲಿ ಇವರ ಬಳಿ ರೂ 3600/–ಗಳ ಹಣವಿತ್ತು. ಘೋಷಣೆಗಿಂತ ಹೆಚ್ಚಾಗಿರುವ ಹಣದ ಕುರಿತು ವಿವರಣೆ ನೀಡುವಲ್ಲಿ ದಾವಣಗೆರೆ ಮಹಾನಗರಪಾಲಿಕೆ ವಲಯ ಕಚೇರಿ–2ರಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ರೂಪಾ.ಹೆಚ್ ಇವರನ್ನು ನಗದು

ಹಾಗೂ ತಪಾಸಣೆ ನಡೆಸಲು ಅಸಹಕಾರ ತೋರಿದ್ದರಿಂದ, ನೌಕರಳ ಬಳಿ ಲಭ್ಯವಿರುವ ಹಣವು ಲಂಚದ ಹಣವಾಗಿರಬಹುದೆಂದು ಪರಿಗಣಿಸಿ ಹಾಗೂ ತಾನು ನಿರ್ವಹಿಸುತ್ತಿರುವ ಶಾಖೆಯಲ್ಲಿ ಅನಧಿಕೃತ ವ್ಯಕ್ತಿಯಿಂದ ತನ್ನ ಕರ್ತವ್ಯವನ್ನು ನಡೆಸುತ್ತಿದ್ದು ಕಂಡು ಬಂದಿದ್ದು ಇದು ಸಹ ಕೆ.ಸಿ.ಎಸ್.ಆರ್ ಮತ್ತು ನಡೆತೆ ನಿಯಮಗಳ ವಿರುದ್ಧವಾದ ಕ್ರಮವಾಗಿರುತ್ತದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**